ಕನ್ನಡ ದಿನಪತ್ರಿಕೆ
8 ಫೆಬ್ರುವರಿ | ಗುರುವಾರ
8 February 2024

# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ
BELAGAVI VARADI KANNADA DAILY NEWS PAPER
ಗಡಿ ಜಿಲ್ಲೆಯ ಧ್ವನಿ...

₹ 4 | ಸಂಪುಟ - 4 ಸಂಚಿಕೆ - 310 ಪುಟ - 4 | RNI. KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26


## ಕರ್ನಾಟಕಕ್ಕೆ ಬರಬೇಕಾಗಿದ್ದ 62,098 ಕೋಟಿ ರೂ. ಕಳೆದುಕೊಂಡಿದ್ದೇವೆ

# ಕೇಂದ್ರದಿಂದ ರಾಜ್ಯಕ್ಕೆ ಅನ್ಯಾಯ: ಸಿಎಂ




ನವದೆಹಲಿ: 14ನೇ ಹಣಕಾಸು ಆಯೋಗದಲ್ಲಿ ಕೇಂದ್ರದಿಂದ ಕರ್ನಾಟಕಕ್ಕೆ 4.71 ಶೇಕಡಾ ಬಂದಿತ್ತು. 15ನೇ ಹಣಕಾಸು ಆಯೋಗದಲ್ಲಿ ಅದು ಶೇಕಡಾ 3.64 ಕ್ಕೆ ಇಳಿಯಿತು. ಇದರಿಂದ ಕರ್ನಾಟಕಕ್ಕೆ ಶೇಕಡಾ 40ರಿಂದ 45ರಷ್ಟು ತೆರಿಗೆ ಬರುವುದು ಕಳೆದುಕೊಂಡಿದ್ದೇವೆ. 14ನೇ ಹಣಕಾಸು ಆಯೋಗದ ಮಾನದಂಡವನ್ನೇ ಕರ್ನಾಟಕಕ್ಕೆ ಕೇಂದ್ರ ಸರ್ಕಾರ ಅನುಸರಿಸಿದ್ದರೆ 62 ಸಾವಿರದ 098 ಕೋಟಿ ರೂಪಾಯಿ ಹೆಚ್ಚಾಗಿ ಬರುತ್ತಿತ್ತು. ಅದನ್ನು ನಾವು ಕಳೆದುಕೊಂಡಿದ್ದೇವೆ ಎಂದು ಸಿಎಂ ಸಿದ್ದರಾಮಯ್ಯ ಅಂಕಿಅಂಶ ಸಮೇತ ವಿವರಿಸಿದರು.

ತೆರಿಗೆ ಹಂಚಿಕೆಯಲ್ಲಿ ಕೇಂದ್ರ ಸರ್ಕಾರದಿಂದ ಕರ್ನಾಟಕಕ್ಕೆ ಅನ್ಯಾಯವಾಗುತ್ತಿದೆ ಎಂದು ಕಾಂಗ್ರೆಸ್ ಸರ್ಕಾರದ ನಾಯಕರು 'ನಮ್ಮ ತೆರಿಗೆ ನಮ್ಮ ಹಕ್ಕು' ಎಂಬ ಉದ್ಘೋಷದೊಂದಿಗೆ ಕೇಂದ್ರದ ಮೋದಿ ಸರ್ಕಾರದ ವಿರುದ್ಧ ಇಂದು ಇನ್ನು ಕೆಲವೇ ನಿಮಿಷಗಳಲ್ಲಿ ದೆಹಲಿಯ ಜಂತರ್ ಮಂತರ್ ನಲ್ಲಿ ಪ್ರತಿಭಟನೆ ಹಮ್ಮಿಕೊಂಡಿದ್ದು ಅದಕ್ಕೆ ಮುನ್ನ ಕರ್ನಾಟಕ ಭವನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡುತ್ತಾ ಕರ್ನಾಟಕಕ್ಕೆ ತೆರಿಗೆ ಹಂಚಿಕೆಯಲ್ಲಿ ಅನ್ಯಾಯವಾಗಿದೆ ಎಂದು ಪುನರುಚ್ಚರಿಸಿದರು. ಅವರ ಮಾತಿಗೆ ಡಿಸಿಎಂ ಡಿ ಕೆ ಶಿವಕುಮಾರ್ ದನಿಗೂಡಿಸಿ ಮಾಧ್ಯಮ ಪ್ರತಿನಿಧಿಗಳಿಗೆ ಪ್ರತಿಕ್ರಿಯೆ ನೀಡಿದ್ದಾರೆ.

ಬರ ಪರಿಬಾರ ಬಂದಿಲ್ಲ. ಕಳೆದ ವರ್ಷ ಸೆಪ್ಟೆಂಬರ್ ನಲ್ಲಿ ರಾಜ್ಯದಲ್ಲಿ ಈ ವರ್ಷ ಆಗಿರುವ ಬರಗಾಲ ಬಗ್ಗೆ ಮನವಿ ಸಲ್ಲಿಸಿದ್ದೆವು. ಕೇಂದ್ರಕ್ಕೆ ಮನವಿ ಸಲ್ಲಿಸಿ, ಬರ ಅಧ್ಯಯನ ತಂಡ ಬಂದು ವರದಿ ನೀಡಿದ್ದರು. ನಂತರ ಹಲವು ಸಚಿವರು ಕೇಂದ್ರದ ಸಚಿವರುಗಳು, ಅಧಿಕಾರಿಗಳನ್ನು ಭೇಟಿ ಮಾಡಿದರು. ನಂತರ ನಾನೇ ಸ್ವತಃ ಪ್ರಧಾನ ಮಂತ್ರಿ ಮತ್ತು ಅಮಿತ್ ಶಾ ಅವರನ್ನು ಭೇಟಿ ಮಾಡಿದ್ದೆ. 5ತಿಂಗಳು ಕಳೆದರೂ ಇನ್ನೂ ಪರಿಹಾರ ಬಿಡುಗಡೆಯಾಗಿಲ್ಲ ಎಂದು ಆರೋಪಿಸಿದರು.

ರಾಜಕೀಯ ಚಳವಳಿ ಅಲ್ಲ, ಅನ್ಯಾಯ ವಿರುದ್ಧ ಹೋರಾಟ: ಕರ್ನಾಟಕಕ್ಕೆ ಕೇಂದ್ರ ಸರ್ಕಾರದಿಂದ ಆಗಿರುವ ಅನ್ಯಾಯದ ವಿರುದ್ಧ ಹೋರಾಟ ಮಾಡುತ್ತಿದ್ದೇವೆ ಅಷ್ಟೆ. ಇದು ರಾಜಕೀಯ ಚಳವಳಿ ಅಲ್ಲ. ನಮ್ಮ ಎಲ್ಲ ಶಾಸಕರು, ಸಚಿವರು ಹೋರಾಟದಲ್ಲಿ ಭಾಗಿಯಾಗಿದ್ದಾರೆ. ಇದು ರಾಜಕೀಯ ಹೋರಾಟ ಅಲ್ಲ, ಇದು ಕನ್ನಡಿಗರ ಹಿತ ಕಾಪಾಡುವ ಚಳವಳಿ ಎಂದರು.

ಕೇಂದ್ರ ಸರ್ಕಾರ ತೆರಿಗೆ ಹಂಚಿಕೆಯಲ್ಲಿ ತಾರತಮ್ಯ ಎಸಗಿದೆ. ಈ ವಿಚಾರದಲ್ಲಿ ಕರ್ನಾಟಕಕ್ಕೆ ದೊಡ್ಡ ಅನ್ಯಾಯ ಆಗಿದೆ. ರಾಜ್ಯಕ್ಕಾದ ಅನ್ಯಾಯದ ವಿರುದ್ಧ ಹೋರಾಟ ಮಾಡ್ತಿದ್ದೇವೆ. ರಾಜ್ಯದ ಸಂಸದರಿಗೂ ಪತ್ರ ಬರೆದು ಮನವಿ ಮಾಡಿದೆ. ಇದು ಐತಿಹಾಸಿಕವಾದ ಚಳವಳಿ. ಸುಮಾರು ಶೇ 40–45 ರಷ್ಟು ತೆರಿಗೆ ಪಾಲು ನಮಗೆ ಬರಬೇಕು. ನಾವು 4 ಲಕ್ಷ 30 ಸಾವಿರ ಕೋಟಿ ತೆರಿಗೆ ಕಟ್ಟುತ್ತಿದ್ದೇವೆ. 100 ರೂ. ತೆರಿಗೆ ಕಟ್ಟಿದ್ದರೆ ಕೇವಲ 12 ರೂಪಾಯಿ ಅಷ್ಟೇ ನಮಗೆ ಬರುತ್ತಿದೆ ಎಂದು ಸಿದ್ದರಾಮಯ್ಯ ಹೇಳಿದರು.

ರಾಜ್ಯದಲ್ಲಿ ಕಳೆದ ವರ್ಷ ಹಿಂದೆಂದೂ ಕಂಡಿರದ ಭೀಕರ ಬರಗಾಲ ಬಂದು ನಾವು 17 ಸಾವಿರದ 900 ಕೋಟಿ ರೂಪಾಯಿ ಪರಿಹಾರ ಕೇಳಿದ್ದೆವು. ನರೇಗಾದ ಅಡಿಯಲ್ಲಿ ಕೆಲಸದ ದಿನಗಳನ್ನು 150 ದಿನ ಮಾಡಿ ಎಂದು ಕೇಳಿದ್ದೆವು. ಅದನ್ನೂ ಕೂಡ ಮಾಡಿಲ್ಲ ಎಂದು ಸಿದ್ದರಾಮಯ್ಯ ದೂರಿದರು.




## ಅಮ್ಮಾ ನಿರ್ಮಲಾ, ನಮ್ಮ ದುಡ್ಡು ನೀಡಮ್ಮ

ನವದೆಹಲಿ: ಹಣಕಾಸು ಆಯೋಗ ಸ್ವತಂತ್ರ ಸಂಸ್ಥೆ. ಅದರಲ್ಲಿ ಕೇಂದ್ರ ಸರ್ಕಾರ ಮಧ್ಯಪ್ರವೇಶ ಮಾಡುವುದಿಲ್ಲ ಎಂದ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ವಿರುದ್ಧ ಸಿದ್ದರಾಮಯ್ಯ ಕಿಡಿಕಾರಿದ್ದಾರೆ.

ದೆಹಲಿಯ ಜಂತರ್ ಮಂತರ್‌ನಲ್ಲಿ ಇಂದು ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ್ ನೇತೃತ್ವದಲ್ಲಿ ಕಾಂಗ್ರೆಸ್ ಶಾಸಕರು ಸಂಸದರು ಕೇಂದ್ರ ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸಿದರು. ಈ ವೇಳೆ ಮಾತನಾಡಿದ ಸಿಎಂ ಸಿದ್ದರಾಮಯ್ಯ, ಹಣಕಾಸು ಆಯೋಗ ಸ್ವತಂತ್ರ ಸಂಸ್ಥೆ. ನಾವು ಮಧ್ಯಪ್ರವೇಶ ಮಾಡುವುದಿಲ್ಲ ಎಂದು ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ. ಕೇಂದ್ರ ಸರ್ಕಾರ ಮಧ್ಯಪ್ರಮೇಶ ಮಾಡದೇ ಇದ್ದರೂ ಹಣ ಯಾಕೆ ನೀಡಿಲ್ಲ ಎಂದು ಪ್ರಶ್ನಿಸಿ ಅಮ್ಮಾ ನಿರ್ಮಲಾ, ನಮ್ಮ ದುಡ್ಡು ನೀಡಮ್ಮ ಎಂದು ಹೇಳಿ ವ್ಯಂಗ್ಯವಾಡಿದರು. ಹಣಕಾಸು ಆಯೋಗ ನಿಯೋಜಿಸುವ ಅಧಿಕಾರ ಪ್ರಧಾನಿ ನರೇಂದ್ರ ಮೋದಿ ಅವರಿಗಿದೆ. 15ನೇ ಹಣಕಾಸು ಆಯೋಗದಲ್ಲಿ ದಕ್ಷಿಣ ಭಾರತದವರು ಯಾರು ಇರಲಿಲ್ಲ. ಇದರಿಂದ ದಕ್ಷಿಣ ಭಾರತಕ್ಕೆ ಅನ್ಯಾಯವಾಗಿದೆ. ಈ ಅನ್ಯಾಯವನ್ನು ಸರಿಪಡಿಸಲು ಈ ಪ್ರತಿಭಟನೆ ಎಂದು ಕಿಡಿಕಾರಿದರು.




## ಕಾಂಗ್ರೆಸ್ ಧರಣಿಯಲ್ಲಿ ಸವದಿಯನ್ನ ಪಕ್ಕ ಕೂರಿಸಿಕೊಂಡ ಸಿಎಂ

ದೆಹಲಿ: ಕೇಂದ್ರ ಸರ್ಕಾರದ ವಿರುದ್ಧ ನಡೆಸುತ್ತಿರುವ ಧರಣಿಯಲ್ಲಿ ಸಿಎಂ ಸಿದ್ದರಾಮಯ್ಯ, ಲಕ್ಷ್ಮಣ ಸವದಿಯನ್ನು ಪಕ್ಕ ಕೂರಿಸಿಕೊಂಡಿರುವುದು ಎಲ್ಲರ ಗಮನ ಸೆಳೆದಿದೆ.

ಸವದಿ ಅವರು ಸಿದ್ದರಾಮಯ್ಯ ಪಕ್ಕದಲ್ಲೇ ಕುಳಿತಿರುವುದು ಎಲ್ಲರ ಗಮನ ಸೆಳೆಯುತ್ತಿದೆ. ಬಿಡಿ, ಇದು ಕಾಂಗ್ರೆಸ್ ನಾಯಕರ ಪ್ರತಿಭಟನೆ ಯಾರು ಎಲ್ಲಿ ಕುಳಿತರೂ ಅವರು ಕಾಂಗ್ರೆಸ್ ನಾಯಕರೇ. ಆದರೆ, ಜಗದೀಶ್ ಶೆಟ್ಟರ್ ಎಪಿಸೋಡ್ ಬಳಿಕ ಎಲ್ಲರ ದೃಷ್ಟಿ ಸವದಿ ಮೇಲಿದೆ. ಆಫ್ ಕೋರ್ಸ್ ನಿನ್ನೆ ದೆಹಲಿಯಲ್ಲೇ ಅವರು ಕಾಂಗ್ರೆಸ್ ಬಿಟ್ಟು ಬಿಜೆಪಿ ಸೇರೋದಿಲ್ಲ ಅಂತ ಸ್ಪಷ್ಟವಾಗಿ ಹೇಳಿದ್ದರು. ಬಿಜೆಪಿ ನಾಯಕರು ಗಾಳ ಹಾಕುತ್ತಿರುವ ಕಾರಣಕ್ಕೆ ಸವದಿಯನ್ನು ಸಿದ್ದರಾಮಯ್ಯ ಉದ್ದೇಶಪೂರ್ವಕವಾಗಿ ತಮ್ಮ ಹತ್ತಿರದಲ್ಲೇ ಕೂರಿಸಿಕೊಂಡಿದ್ದಾರೆ ಎಂಬ ಮಾತುಗಳು ಅಲ್ಲಲ್ಲಿ ಕೇಳಿ ಬಂದಿವೆ.



## ಎಐಸಿಸಿ ಅಧ್ಯಕ್ಷ ಖರ್ಗೆ ನಿವಾಸದಲ್ಲಿ ಕೈ ನಾಯಕರ ಭರ್ಜರಿ ಭೋಜನ

ದೆಹಲಿ: ಕೇಂದ್ರ ಸರ್ಕಾರದ ವಿರುದ್ಧ ನಗರದ ಜಂತರ್ ಮಂತರ್ ಮೈದಾನದಲ್ಲಿ ಪ್ರತಿಭಟನೆ ನಡೆಸಿ ಘೋಷಣೆಗಳನ್ನು ಕೂಗಿದ ರಾಜ್ಯದ ಕಾಂಗ್ರೆಸ್ ನಾಯಕರು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ನಿವಾಸದಲ್ಲಿ ಭರ್ಜರಿ ಭೋಜನ ಏರ್ಪಡಿಸಲಾಗಿತ್ತು.

ಬೆಂಗಳೂರು ಮತ್ತು ರಾಜ್ಯದ ಬೇರೆ ಬೇರೆ ಭಾಗಗಳಿಂದ ದೆಹಲಿಗೆ ತೆರಳಿ ಪ್ರತಿಭಟನೆಯಲ್ಲಿ ಪಾಲ್ಗೊಂಡ ಕಾಂಗ್ರೆಸ್ ನಾಯಕರು ಮತ್ತು ಕಾರ್ಯಕರ್ತರಿಗೆ ಏರ್ಪಡಿಸಿದ ಔತಣ ಕೂಟ ಎಲ್ಲರ ಹೊಟ್ಟೆ ತಣ್ಣಗಾಯಿಸಿತು. ಒಂದು ಟೇಬಲ್ ಸುತ್ತ ಖುದ್ದು ಖರ್ಗೆ, ಸಿದ್ದರಾಮಯ್ಯ, ಡಿಕೆ ಶಿವಕುಮಾರ್, ಆರ್ ವಿ ದೇಶಪಾಂಡೆ, ಹೆಚ್ ಕೆ ಪಾಟೀಲ್, ಹೆಚ್ ಸಿ ಮಹಾದೇವಪ್ಪ, ಜಿ ಪರಮೇಶ್ವರ್, ಕೆ ಹೆಚ್ ಮುನಿಯಪ್ಪ, ಅಬ್ದುಲ್ ನಾಸಿರ್ ಮೊದಲಾದವರೆಲ್ಲ ಸೂಪು ಕುಡಿಯುತ್ತ ಚಿಕನ್ ಕಬಾಬ್ ತಿನ್ನುತ್ತಿರುವುದನ್ನು ದೃಶ್ಯಗಳಲ್ಲಿ ಕಂಡು ಬಂದವು.

## ಅಂಕಿ–ಅಂಶ ಆಧಾರವಾಗಿಟ್ಟುಕೊಂಡು ನಮ್ಮ ಪಾಲಿನ ಅನುದಾನ ಕೇಳುತ್ತಿದ್ದೇವೆ: ಸಚಿವ ಸತೀಶ್ ಜಾರಕಿಹೊಳಿ

ದೆಹಲಿ: ಬರ ಪರಿಹಾರ ನಿಧಿಗಾಗಿ ಕಂದಾಯ ಸಚಿವ ಕೃಷ್ಣ ಭೈರೇಗೌಡ ಮೂರು ಬಾರಿ ದೆಹಲಿಗೆ ಬಂದಿದ್ದರು, ಮುಖ್ಯಮಂತ್ರಿ ಸಿದ್ದರಾಮಯ್ಯ ಒಮ್ಮೆ ಬಂದು ಪ್ರಧಾನ ಮಂತ್ರಿ ಮತ್ತು ಗೃಹ ಮಂತ್ರಿಯವರನ್ನು ಭೇಟಿಯಾಗಿದ್ದಾರೆ. ಆದರೆ ಇದುವರೆಗೆ ಬರ ಪರಿಹಾರ ಹಣ ಬಿಡುಗಡೆಯಾಗಿಲ್ಲ, ಅನುದಾನ ಬಿಡುಗಡೆಗೆ ಯಾವ ಮಾರ್ಗಸೂಚಿಗಳಿವಿಯೋ ಅವುಗಳನ್ನು ಆಧರಿಸಿ ನಮ್ಮ ಪಾಲು ನಮಗೆ ನೀಡಲಿ ಎಂದು ಜಾರಕಿಹೊಳಿ ಹೇಳಿದರು.

ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ ಅನುದಾನ ಹಂಚಿಕೆಯಲ್ಲಿ ಕೇಂದ್ರ ಸರಕಾರ ತಾರತಮ್ಯ ಮಾಡುತ್ತಿದೆ ಎಂದು ಆರೋಪಿಸಿ ದೆಹಲಿಯ ಜಂತರ್ ಮಂತರ್ ನಲ್ಲಿ ಪ್ರತಿಭಟನೆ ನಡೆಸುತ್ತಿದ್ದು, ಧರಣಿ ಪಾಲ್ಗೊಂಡು ಮಾತನಾಡಿದ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರು, ರಾಜ್ಯ ಸರಕಾರಗಳು ಕೇಂದ್ರದ ನೀತಿಗಳ ವಿರುದ್ಧ ದೆಹಲಿಗೆ ಬಂದು ಸತ್ಯಾಗ್ರಹ ನಡೆಸುವುದು ಇದು ಮೊದಲ ಸಲವೇನಲ್ಲ, ಹಿಂದೆ ಬೇರೆ ಬೇರೆ ರಾಜ್ಯಗಳು ಹೀಗೆ ಮಾಡಿವೆ ಎಂದು ಹೇಳಿದರು.




ತಮ್ಮ ಸರ್ಕಾರ ಯಾವುದೋ ಲೋಕಸಭಾ ಚುನಾವಣೆ ಹತ್ತಿರದಲ್ಲಿರುವುದರಿಂದ ಪ್ರತಿಭಟನೆ ಮಾಡುತ್ತಿಲ್ಲ, ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಅನ್ಯಾಯವಾಗಿದೆ, ಅಂಕಿ–ಅಂಶಗಳನ್ನು ಜೊತೆಗಿಟ್ಟುಕೊಂಡು ಇಲ್ಲಿಗೆ ಬಂದಿದ್ದೇವೆ, ಹಣಕಾಸು ಅಯೋಗದ ಶಿಫಾರಸ್ಸಿನ ಮೇಲೆ ಅನುದಾನ ಹಂಚಿಕೆ ಮಾಡಲಾಗಿದೆ ಅಂತ ಹಣಕಾಸು ಸಚಿವೆ ಹೇಳುತ್ತಾರೆ, ಆದರೆ ದಾಖಲೆಗಳನ್ನು ನೋಡಿದರೆ ರಾಜ್ಯಕ್ಕೆ ಕಡಿಮೆ ಅನುದಾನ ಸಿಕ್ಕಿರುವುದು ಗೊತ್ತಾಗುತ್ತದೆ ಎಂದರು.

ಬರ ಪರಿಹಾರ ನಿಧಿಗಾಗಿ ಕಂದಾಯ ಸಚಿವ ಕೃಷ್ಣ ಭೈರೇಗೌಡ ಮೂರು ಬಾರಿ ದೆಹಲಿಗೆ ಬಂದಿದ್ದರು, ಸಿಎಂ ಸಿದ್ದರಾಮಯ್ಯ ಒಮ್ಮೆ ಬಂದು ಪ್ರಧಾನ ಮಂತ್ರಿ ಮತ್ತು ಗೃಹ ಮಂತ್ರಿಯವರನ್ನು ಭೇಟಿಯಾಗಿದ್ದಾರೆ. ಆದರೆ ಇದುವರೆಗೆ ಬರ ಪರಿಹಾರ ಹಣ ಬಿಡುಗಡೆಯಾಗಿಲ್ಲ, ಅನುದಾನ ಬಿಡುಗಡೆಗೆ ಯಾವ ಮಾರ್ಗಸೂಚಿಗಳಿವಿಯೋ ಅವುಗಳನ್ನು ಆಧರಿಸಿ ನಮ್ಮ ಪಾಲು ನಮಗೆ ನೀಡಲಿ ಎಂದು ಸಚಿವ ಸತೀಶ್ ಜಾರಕಿಹೊಳಿ ಹೇಳಿದರು.

ಈ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೇರಿದಂತೆ ರಾಜ್ಯಸಂಪುಟದ ಎಲ್ಲ ಸಚಿವರು, ಕಾಂಗ್ರೆಸ್ ಪಕ್ಷದ ವಿಧಾನಸಭಾ ಮತ್ತು ವಿಧಾನ ಪರಿಷತ್ ಸದಸ್ಯರು, ಸಂಸದರು ಮತ್ತು ಬೆಳಗಾವಿ ಜಿಲ್ಲೆಯ ಮುಖಂಡರಾದ ವಿನಯ ನಾವಲಗಟ್ಟಿ, ಲಕ್ಷ್ಮಣರಾವ್ ಚಿಂಗಳೆ, ಅಜೀಂ ಪಟೇಗಾರ, ವಿವೇಕ ಜತ್ತಿ, ಗಜಾನನ ಮಂಗಸೂಳಿ, ಮಹಾವೀರ ಮೋಹಿತೆ, ಪ್ರದೀಪ್ ಎಂ.ಜೆ ಸೇರಿದಂತೆ ರಾಜ್ಯದ ನೂರಾರು ಕಾರ್ಯಕರ್ತರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದಾರೆ.

## ಕಿಡ್‌ನ್ಯಾಪ್‌ಗೆ ಯತ್ನ: ವ್ಯಕ್ತಿಯ ಕೈಗೆ ಕಚ್ಚಿ ಬಚಾವ್ ಆದ ವಿದ್ಯಾರ್ಥಿನಿ



ಬೆಳಗಾವಿ: ಶಾಲೆ ಬಳಿ ವಿದ್ಯಾರ್ಥಿ ಅಪಹರಣಕ್ಕೆ ಯತ್ನ ಮಾಡಲಾಗಿದ್ದು, ಅದೃಷ್ಟವಶಾತ್ ವಿದ್ಯಾರ್ಥಿನಿ ಬಚಾವ್ ಆಗಿರುವ ಘಟನೆ ಚಿಕ್ಕೋಡಿ ಪಟ್ಟಣದ ವಿದ್ಯಾನಗರ ಬಡಾವಣೆಯಲ್ಲಿ ನಡೆದಿದೆ.

ವಿದ್ಯಾರ್ಥಿನಿ ಶಾಲೆಯಿಂದ ಹೊರಗಡೆ ಬರುತ್ತಿದ್ದಂತೆ ಮುಖಕ್ಕೆ ಬಟ್ಟೆ ಕಟ್ಟಿ 200 ಮೀಟರ್ ಎಳೆದೊಯ್ದಾಗ, ವ್ಯಕ್ತಿಯ ಕೈಗೆ ಕಚ್ಚಿ ವಿದ್ಯಾರ್ಥಿನಿ ಬಚಾವ್ ಆಗಿದ್ದಾಳೆ.

ಸರ್ಕಾರಿ ಪ್ರಾಥಮಿಕ ಶಾಲೆಯ ಎರಡನೇ ತರಗತಿಯ ವಿದ್ಯಾರ್ಥಿನಿಯ ಅಪಹರಣಕ್ಕೆ ಯತ್ನ ನಡೆದಿದೆ. ಶಾಲೆಯ ಕಾಂಪೌಂಡ್ ಬಳಿ ಮುಖಕ್ಕೆ ಬಟ್ಟೆ ಕಟ್ಟಿಕೊಂಡು ಕುಳಿತ ಆಸಾಮಿ, ವಿದ್ಯಾರ್ಥಿನಿ ಹೊರಗೆ ಬರುತ್ತಿದ್ದಂತೆ ಮುಖಕ್ಕೆ ಬಟ್ಟೆ ಕಟ್ಟಿ ಎಳೆದೊಯ್ದಿದ್ದಾನೆ.

ಈ ವೇಳೆ ವ್ಯಕ್ತಿಯ ಕೈಗೆ ಕಚ್ಚಿ ವಿದ್ಯಾರ್ಥಿನಿ ಅಪಾಯದಿಂದ ಪಾರಾಗಿದ್ದಾಳೆ. ಎಳೆದೊಯ್ಯುತ್ತಿದ್ದಾಗ ವಿದ್ಯಾರ್ಥಿನಿ ಕಿರುಚಾಟದಿಂದ ಸ್ಥಳದಿಂದ ವ್ಯಕ್ತಿ ಓಡಿ ಹೋಗಿದ್ದಾನೆ. ಸ್ಥಳಕ್ಕೆ ಚಿಕ್ಕೋಡಿ ಪೊಲೀಸರು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿ ಭೇಟಿ ನೀಡಿ ಪರಿಶೀಲಿಸಿದ್ದು, ಚಿಕ್ಕೋಡಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಪೊಲೀಸರು ಶಾಲಾ ಆವರಣದ ಸಿಸಿಟಿವಿ ಪರಿಶೀಲನೆ ನಡೆಸುತ್ತಿದ್ದು, ಘಟನೆ ಬಗ್ಗೆ ಮಾಹಿತಿ ಪಡೆಯುತ್ತಿದ್ದಾರೆ. ಪ್ರಕರಣದ ಹಿನ್ನೆಲೆಯಲ್ಲಿ ಪಟ್ಟಣದಲ್ಲಿ ಅನುಮಾನಾಸ್ಪದ ವ್ಯಕ್ತಿಗಳು ತಿರುಗಾಡುವುದು ಕಂಡುಬಂದಲ್ಲಿ ಮಾಹಿತಿ ನೀಡಬೇಕು ಎಂದು ಸಾರ್ವಜನಿಕರಿಗೆ ಪೊಲೀಸರು ತಿಳಿಸಿದ್ದಾರೆ.

## ಕಾಂಗ್ರೆಸ್‌ನ 'ಚಲೋ ದೆಹಲಿ' ವಿರೋಧಿಸಿ ಬೆಳಗಾವಿಯಲ್ಲಿ ಬಿಜೆಪಿ ಪ್ರತಿಭಟನೆ: 30 ಮಂದಿ ಬಂಧನ

ಬೆಳಗಾವಿ: ಕಾಂಗ್ರೆಸ್ಸಿನ 'ಚಲೋ ದೆಹಲಿ' ಕಾರ್ಯಕ್ರಮ ವಿರೋಧಿಸಿ ಕರ್ನಾಟಕ ಬಿಜೆಪಿ ಘಟಕ ಬುಧವಾರ ಪ್ರತಿಭಟನೆ ನಡೆಸಿ ಬೆಳಗಾವಿಯ ಕಾಂಗ್ರೆಸ್ ಕಚೇರಿಗೆ ನುಗ್ಗಲು ಯತ್ನಿಸಿತು.

ಬಿಜೆಪಿ ಕಾರ್ಯಕರ್ತರು ಕಾಂಗ್ರೆಸ್ ಕಚೇರಿ ಎದುರು ಹಾಕಿದ್ದ ಬ್ಯಾರಿಕೇಡ್‌ಗಳನ್ನು ಪಕ್ಕಕ್ಕೆ ತಳ್ಳಿ ಬಿಜೆಪಿ ಧ್ವಜ ಹಿಡಿದುಕೊಂಡು ಒಳಗೆ ನುಗ್ಗಲು ಯತ್ನಿಸಿದರು. ಈ ವೇಳೆ ಸ್ಥಳಕ್ಕೆ ಧಾವಿಸಿದ ಪೊಲೀಸರು ಬಿಜೆಪಿ ಕಾರ್ಯಕರ್ತರನ್ನು ಕಾಂಗ್ರೆಸ್ ಕಚೇರಿಗೆ ನುಗ್ಗದಂತೆ ತಡೆದು 30 ಮಂದಿಯನ್ನು ವಶಕ್ಕೆ ಪಡೆದಿದ್ದಾರೆ.

ಕಾಂಗ್ರೆಸ್ ಪಕ್ಷ ದೇಶ ವಿರೋಧಿ ಎಂದು ಕಾಂಗ್ರೆಸ್ ವಿರುದ್ಧ ಘೋಷಣೆ ಕೂಗಿದರು. ಈ ವೇಳೆ ಕಾಂಗ್ರೆಸ್ ನಾಯಕರು ಪ್ರಧಾನಿ ನರೇಂದ್ರ ಮೋದಿ ವಿರುದ್ಧ ಘೋಷಣೆ ಕೂಗಿದರು.



ಬೆಂಗಳೂರಿನಲ್ಲಿ ವಿಧಾನಸೌಧದಲ್ಲಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಕಚೇರಿಗೆ ಬೀಗ ಹಾಕಲು ಯತ್ನಿಸಿದ ಬಿಜೆಪಿ ಶಾಸಕ ಆರ್.ಅಶೋಕ ಅವರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಪಾಕಿಸ್ತಾನದ ಸಂಸ್ಥಾಪಕ ಮಹಮ್ಮದ್ ಅಲಿ ಜಿನ್ನಾ ಅವರ ರಕ್ತವನ್ನು ಕಾಂಗ್ರೆಸ್ ಆನುವಂಶಿಕವಾಗಿ ಪಡೆದಿದೆ ಎಂದು ಅಶೋಕ ಹೇಳಿದರು. ಕೇಂದ್ರ ಸರ್ಕಾರದ ವಿರುದ್ಧ ಪ್ರತಿಭಟನೆ ಮಾಡುವ ನೆಪದಲ್ಲಿ ಅವರು ಮಜಾ ಮಾಡಲು ನವದೆಹಲಿಗೆ ಹೋಗಿದ್ದಾರೆ" ಎಂದು ಅವರು ಹೇಳಿದರು.

ಮೇಕೆದಾಟು ಯೋಜನೆ ಕುರಿತ ಆಂದೋಲನ ಪ್ರಹಸನವಾಗಿದ್ದು, ಮಹದಾಯಿ ಯೋಜನೆಗೆ ಕಾಂಗ್ರೆಸ್ ಸರ್ಕಾರದ ಬಳಿ ಹಣವಿಲ್ಲ. ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಬಿಡುಗಡೆ ಮಾಡಿದ್ದ ಯೋಜನೆಗೆ 7,800 ಕೋಟಿ ರೂಪಾಯಿ ನಿಧಿಯನ್ನೂ ಕಾಂಗ್ರೆಸ್ ನಿಲ್ಲಿಸಿದೆ' ಎಂದು ವಿಜಯೇಂದ್ರ ಹೇಳಿದರು.

ರಾಜ್ಯದ ಇತಿಹಾಸದಲ್ಲಿ ಇಷ್ಟು ದೊಡ್ಡ ನಾಟಕ ಮಾಡುವ ಸರ್ಕಾರ ಮತ್ತೊಂದಿಲ್ಲ. ಎರಡನೇ ಬಾರಿ ಮುಖ್ಯಮಂತ್ರಿ ಆಗಿರುವ ಸಿದ್ದರಾಮಯ್ಯ ಅವರು ತಮ್ಮ ತತ್ವ ಆದರ್ಶಗಳನ್ನು ಗಾಳಿಗೆ ತೂರಿದ್ದಾರೆ. ಸ್ವಾರ್ಥ ಮತ್ತು ತಮ್ಮ ಕುರ್ಚಿ ಉಳಿಸಿಕೊಳ್ಳಲು ಈ ಹೋರಾಟ ಮಾಡುತ್ತಿದ್ದಾರೆ. ಕಾವೇರಿ, ಮಹದಾಯಿ ವಿಚಾರದಲ್ಲಿ ಎಡವಟ್ಟು ಮಾಡಿದರೆ, ರೈತರಿಗೆ ಬರ ಪರಿಹಾರ ನೀಡಿಲ್ಲ. ಯಾವ ನೈತಿಕತೆ, ಯಾವ ಮುಖ ಇಟ್ಟುಕೊಂಡು ದೆಹಲಿಯಲ್ಲಿ ಧರಣಿ ಮಾಡುತ್ತಿದ್ದೀರಿ' ಎಂದು ಪ್ರಶ್ನಿಸಿದರು.

## ವೃದ್ಧನಿಂದ ಕೋಟಿ ಕೋಟಿ ಹಣ ಪೀಕಿದ ಚಾಲಾಕಿ ಯುವತಿ

ಬೆಂಗಳೂರು: ಕಾಸ್ಮೆಟಿಕ್ ಸರ್ಜರಿಗೆ ಬಂದ ಮಹಿಳೆಯೊಬ್ಬಳು ವೈದ್ಯರೊಬ್ಬರಿಗೆ ಕೋಟಿ ಕೋಟಿ ರೂ. ವಂಚಿಸಿರುವ ಪ್ರಕರಣ ವಿಜಯನಗರದಲ್ಲಿ ನಡೆದಿದೆ.

ಐಶ್ವರ್ಯ ಗೌಡ ಎಂಬ ಮಹಿಳೆ ಕಾಸ್ಮಿಟಿಕ್ ಸರ್ಜರಿಗೆ ವಿಜಯನಗರದ ಖಾಸಗಿ ಆಸ್ಪತ್ರೆಗೆ ಬಂದಿದ್ದಳು. ಈ ವೇಳೆ ದೊಡ್ಡ ದೊಡ್ಡವರ ಪರಿಚಯವಿದೆ ಎಂದು ವೈದ್ಯರಿಗೆ ಪರಿಚಯ ಮಾಡಿಕೊಂಡಿದ್ದಾಳೆ. ಬಳಿಕ ವೈದ್ಯರಿಗೆ ಐಷಾರಾಮಿ ಕಾರು ಕೊಡಿಸುವುದಾಗಿ ನಂಬಿಸಿ 2.75 ಕೋಟಿ ರೂ. ವಂಚನೆ ಮಾಡಿದ್ದಾಳೆ ಎಂದು ಡಾ.ಗಿರೀಶ್ ಎಂಬವರು ಆರೋಪಿಸಿದ್ದಾರೆ.

ಮಹಿಳೆಯ ಮಾತು ನಂಬಿ ವೈದ್ಯ 2.75 ಕೋಟಿ ರೂ. ಹಣವನ್ನು ಆಕೆಯ ಖಾತೆಗೆ ವರ್ಗಾವಣೆ ಮಾಡಿದ್ದಾರೆ. ಅಲ್ಲದೇ ಬಳಿಕ 3.25 ಕೋಟಿ ರೂ. ನಗದು ಹಣವನ್ನು ವೈದ್ಯ ನೀಡಿದ್ದರು. ಇದಾದ ಬಳಿಕ ಹಲವು ದಿನಗಳಾದರೂ ಕಾರಿನ ಸುದ್ದಿ ಇಲ್ಲದ ಕಾರಣ ವೈದ್ಯರಿಗೆ ವಂಚನೆ ಹೋಗಿರುವುದು ಅರಿವಿಗೆ ಬಂದಿದೆ.

ಬಳಿಕ ಮಹಿಳೆಯನ್ನು ಡಾ.ಗಿರೀಶ್ ವಿಚಾರಿಸಿದಾಗ, ಹಣ ವಾಪಸ್ ಕೊಡುವುದಾಗಿ ಅವರಿಗೆ ತಿಳಿಸಿದ್ದಾಳೆ. ಬಳಿಕ ಹಣ ಕೊಡುವುದಾಗಿ ಮಹಿಳೆ ಕರೆಸಿಕೊಂಡಿದ್ದು, ಅತ್ಯಾಚಾರ ಮಾಡಲು ಬಂದಿದ್ದೀಯ, ಎಂದು ಹೆದರಿಸಿ ಮತ್ತೆ 2 ಲಕ್ಷ ರೂ. ಹಣ ಪೀಕಿದ್ದಾಳೆ. ಇತ್ತ ಕಾರೂ ಇಲ್ಲದೆ, ಕಾಸೂ ಇಲ್ಲದೆ ವೈದ್ಯ ಪೊಲೀಸ್ ಠಾಣೆಯ ಮೆಟ್ಟಿಲೇರಿದ್ದಾರೆ. ಐಶ್ವರ್ಯ ವಿರುದ್ಧ ವಿಜಯನಗರ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ.

## ಕಿರುಕುಳ ಆರೋಪ: ಇಡಿ ಅಧಿಕಾರಿಗಳ ವಿರುದ್ಧದ ತನಿಖೆಗೆ ಹೈಕೋರ್ಟ್ ತಡೆ

ಬೆಂಗಳೂರು: ಕೋಲಾರ–ಚಿಕ್ಕಬಳ್ಳಾಪುರ ಹಾಲು ಉತ್ಪಾದಕರ ಒಕ್ಕೂಟದ (ಕೋಮುಲ್) ನಿರ್ದೇಶಕ ವೈ ಬಿ ಅಶ್ವತ್ಥ ನಾರಾಯಣ ಅವರು ದಾಖಲಿಸಿರುವ ಪ್ರಕರಣದ ಆಧಾರದ ಮೇಲೆ ಜಾರಿ ನಿರ್ದೇಶನಾಲಯದ (ಇಡಿ) ಉಪ ನಿರ್ದೇಶಕ ಮನೋಜ್ ಮಿತ್ತಲ್ ಮತ್ತು ಸಹಾಯಕ ನಿರ್ದೇಶಕ ಅಜಯ್ ಕುಮಾರ್ ವೈದ್ಯ ವಿರುದ್ಧದ ಮುಂದಿನ ತನಿಖೆಗೆ ಹೈಕೋರ್ಟ್ ತಡೆಯಾಜ್ಞೆ ನೀಡಿದೆ. ವಿಚಾರಣೆ ಸಂದರ್ಭದಲ್ಲಿ ಇವರಿಬ್ಬರೂ ತನಗೆ ಚಿತ್ರಹಿಂಸೆ ನೀಡುವುದರೊಂದಿಗೆ ಹಲ್ಲೆ ಮಾಡಿದ್ದಾರೆ ಎಂದು ವಿಲ್ಸನ್ ಗಾರ್ಡನ್ ಪೊಲೀಸ್ ಠಾಣೆಯಲ್ಲಿ ಅಶ್ವತ್ಥ ನಾರಾಯಣ ದೂರು ದಾಖಲಿಸಿದ್ದರು.

ದೂರುದಾರರು ದಾಖಲಿಸಿರುವ ಎಫ್ ಐಆರ್ ಪ್ರಶ್ನಿಸಿ ಇಡಿ ಅಧಿಕಾರಿಗಳಾದ ಮಿತ್ತಲ್ ಮತ್ತು ವೈದ್ಯ ಅವರು ಸಲ್ಲಿಸಿದ್ದ ಅರ್ಜಿಯನ್ನು ಆಲಿಸಿದ ನ್ಯಾಯಮೂರ್ತಿ ಕೆ ನಟರಾಜನ್, ಇದು ಇಡಿ ಕಾರ್ಯಾಚರಣೆಗೆ ಅಡ್ಡಿಪಡಿಸುವ ಪ್ರಯತ್ನವಾಗಿದೆ ಎಂಬ ಕಾರಣಕ್ಕೆ ಮಧ್ಯಂತರ ತಡೆಯಾಜ್ಞೆ ನೀಡಿದರು. ಅರ್ಜಿದಾರರು ಮಾರಣಾಂತಿಕ ಅಸ್ತ್ರವಲ್ಲದ ಕಗಿಅ ಪೈಪ್‌ಗಳನ್ನು ಹಲ್ಲೆ ಮಾಡಲು ಬಳಸಿದ್ದಾರೆಂದು ಹೇಳಲಾಗುತ್ತದೆ. ಅದು ಸೆಕ್ಷನ್ 324 ರ ಅಡಿಯಲ್ಲಿ ಬರುತ್ತದೆ. ಉಳಿದ ಅಪರಾಧಗಳು ಅರಿಯಲಾಗದ ಅಪರಾಧಗಳಾಗಿದ್ದು, ಎಫ್‌ಐಆರ್ ದಾಖಲಿಸಲು ಬರುವುದಿಲ್ಲ ಎಂದು ಸಾಲಿಸಿಟರ್ ಜನರಲ್ ವಾದಿಸಿದರು. ಇದನ್ನು ಪರಿಗಣಿಸಿದ ನ್ಯಾಯಾಲಯ ಮುಂದಿನ ವಿಚಾರಣೆಯ ತನಕ ಅರ್ಜಿದಾರರ ವಿರುದ್ಧದ ಮುಂದಿನ ತನಿಖೆಗೆ ತಡೆ ನೀಡಿ, ಅಶ್ವತ್ಥ ನಾರಾಯಣ ಅವರಿಗೆ ನೋಟಿಸ್ ಜಾರಿಗೊಳಿಸಲು ಆದೇಶಿಸಿತು.

## 70 ವರ್ಷಗಳ ಲೋಪದೋಷಗಳನ್ನು ಮೋದಿಯವರು ಕೇವಲ 10 ವರ್ಷಗಳಲ್ಲಿ ಹೋಗಲಾಡಿಸಿದ್ದಾರೆ: ಅಮಿತ್ ಶಾ

ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾರವರು ನಾಳೆಯಾಚೆಗಿನ ಭದ್ರತೆ: ಭಾರತದ ಭದ್ರ ಭವಿಷ್ಯವನ್ನು ರೂಪಿಸುವುದು' ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡುತ್ತಾ, 'ಪ್ರಧಾನಿ ನರೇಂದ್ರ ಮೋದಿಯವರ 10 ವರ್ಷಗಳ ನಾಯಕತ್ವವು, 70 ವರ್ಷಗಳ ನ್ಯೂನತೆಗಳನ್ನು ನಿವಾರಿಸುವ ಕೆಲಸ ಮಾಡಿದೆ' ಎಂದು ಒತ್ತಿ ಹೇಳಿದರು. ಈ ಸಂದರ್ಭದಲ್ಲಿ ಶಾ ಅವರು 'ಓಆರ್‌ಎಫ್ ವಿದೇಶಾಂಗ ನೀತಿ ಸಮೀಕ್ಷೆ'ಗೆ ಚಾಲನೆ ನೀಡಿದರು.

ಹಲವು ವರ್ಷಗಳಿಂದ ಸೌಲಭ್ಯಗಳಿಂದ ವಂಚಿತರಾಗಿದ್ದ ಲಕ್ಷಾಂತರ ಜನಸಾಮಾನ್ಯರು ಕಳೆದ 10 ವರ್ಷಗಳಲ್ಲಿ ಸ್ವಾತಂತ್ರ್ಯದ ನಿಜಾನುಭೂತಿಯನ್ನು ಪಡೆದಿರುವುದು ಮೋದಿಯವರ ದೂರದೃಷ್ಟಿ ಮತ್ತು ಅಮಿತ್ ಶಾ ಅವರ 'ಅಂತ್ಯೋದಯ' ರಾಜಕಾರಣದ ಫಲಿತಾಂಶವಾಗಿದೆ. ಇಂದು ಕೋಟ್ಯಂತರ ಬಡವರಿಗೆ ವಸತಿ, ಪ್ರತಿ ಮನೆಗೆ ವಿದ್ಯುತ್, ನಲ್ಲಿ ನೀರು, ಶೌಚಾಲಯ, ಉಚಿತ ಗ್ಯಾಸ್ ಸಂಪರ್ಕ ಹಾಗೂ ?5 ಲಕ್ಷದವರೆಗೆ ಉಚಿತ ಆರೋಗ್ಯ ವಿಮೆ ನೀಡುವ ಕೆಲಸ ನಡೆಯುತ್ತಿದೆ.

ಸ್ವಾತಂತ್ರ್ಯಾನಂತರ ದಶಕಗಳ ಕಾಲ ಭ್ರಷ್ಟಾಚಾರ, ಸ್ವಜನಪಕ್ಷಪಾತ, ತುಷ್ಟೀಕರಣಗಳು ದೇಶದ ಅಭಿವೃದ್ಧಿಗೆ ಅಡ್ಡಿಯಾಗಿದ್ದವು. ಪ್ರಸ್ತುತ ಕಾಲಘಟ್ಟದಲ್ಲಿ ಮೋದಿಯವರ ನಾಯಕತ್ವದಲ್ಲಿ ಮತ್ತು ಅಮಿತ್ ಶಾ ಅವರ ನುರಿತ ಮಾರ್ಗದರ್ಶನದಲ್ಲಿ ಭ್ರಷ್ಟಾಚಾರ, ಸ್ವಜನಪಕ್ಷಪಾತ, ತುಷ್ಟೀಕರಣದಂತಹ ಅನಿಷ್ಟಗಳನ್ನು ಬೇರು ಸಮೇತ ಕಿತ್ತು ಹಾಕಿರುವುದು ಮಾತ್ರವಲ್ಲದೆ ಸ್ವಾವಲಂಬಿ ಮತ್ತು ಅಭಿವೃದ್ಧಿ ಹೊಂದಿದ ಭಾರತದ ಕನಸನ್ನು ನನಸಾಗಿಸುವ ಪ್ರಯತ್ನ ನಡೆಯುತ್ತಿದೆ. ಕಳೆದ 10 ವರ್ಷಗಳಲ್ಲಿ, ರಾಜಕೀಯದಲ್ಲಿ ಸ್ಥಿರತೆ ಮತ್ತು ದೇಶದಲ್ಲಿ ಭ್ರಷ್ಟಾಚಾರ ಮುಕ್ತ ಆಡಳಿತವನ್ನು ಸ್ಥಾಪಿಸಲಾಗಿದೆ. ಹೊಸ ಭಾರತವು ವಿಶ್ವಾದ್ಯಂತ ಹೊಸ ಮೈಲಿಗಲ್ಲುಗಳನ್ನು ಸಾಧಿಸುವ ಮೂಲಕ ಹೊಸ ಗುರುತನ್ನು ಪಡೆಯುತ್ತಿದೆ.




ಸ್ವಾತಂತ್ರ್ಯದ ನಂತರ, ದೇಶವು ಆಂತರಿಕ ಭದ್ರತೆಯ ವಿಷಯಗಳಲ್ಲಿ ಭಯೋತ್ಪಾದನೆ ಮತ್ತು ಎಡಪಂಥೀಯ ಉಗ್ರವಾದದಿಂದ ವರ್ಷಗಟ್ಟಲೆ ಸಮಸ್ಯೆಗೆ ಒಳಗಾಗಿವೆ. ಸ್ಪಷ್ಟವಾಗಿ ಹೇಳಬೇಕೆಂದರೆ ಜಮ್ಮು ಮತ್ತು ಕಾಶ್ಮೀರ, ಎಡಪಂಥೀಯ ಉಗ್ರವಾದದಿಂದ ಪ್ರಭಾವಿತವಾಗಿರುವ ಪ್ರದೇಶಗಳು ಮತ್ತು ಈಶಾನ್ಯದ ರಾಜ್ಯಗಳು ಈ ಸಮಸ್ಯೆಯಿಂದ ಬಳಲಿದವು. 2014ರ ನಂತರ, ಭಯೋತ್ಪಾದನೆಯೆಡೆಗೆ ಮೋದಿಯವರ ಶೂನ್ಯ ಸಹಿಷ್ಣುತೆಯ ನೀತಿ ಮತ್ತು 'ಭಯೋತ್ಪಾದನೆಯನ್ನು ಮಾನವೀಯತೆಯ ದೊಡ್ಡ ಶತ್ರು' ಎಂದು ಪರಿಗಣಿಸುವ ಶಾ ಅವರ ದೃಢ ನಿರ್ಧಾರಗಳಿಂದಾಗಿ, ಉಗ್ರವಾದದ ಮೂರು ಪ್ರಮುಖ ಹಾಟ್‌ಸ್ಪಾಟ್‌ಗಳಾದ– ಜಮ್ಮು ಮತ್ತು ಕಾಶ್ಮೀರ, ಎಡಪಂಥೀಯ ಉಗ್ರವಾದದಿಂದ ಪೀಡಿತ ಪ್ರದೇಶಗಳು ಮತ್ತು ಈಶಾನ್ಯ ಪ್ರದೇಶಗಳು ಈಗ ಅಭಿವೃದ್ಧಿಯ ಹಾದಿಯಲ್ಲಿವೆ. ಈಶಾನ್ಯದ ಎಲ್ಲಾ ನಿರ್ಲಕ್ಷಿತ ರಾಜ್ಯಗಳಲ್ಲಿ ರೈಲು ಮತ್ತು ವಾಯು ಸಂಪರ್ಕದ ತ್ವರಿತ ಕೆಲಸ ನಡೆಯುತ್ತಿದೆ.

ಆಧುನಿಕ ರಾಜಕಾರಣದ 'ಚಾಣಕ್ಯ' ಎಂದೇ ಖ್ಯಾತರಾಗಿರುವ ಶಾ, ಗಡಿ ಭದ್ರತೆಯೇ ದೇಶದ ಭದ್ರತೆಯಾಗಿರುವುದರಿಂದ, ದೇಶದ ಗಡಿಗಳು ಸುರಕ್ಷಿತವಾಗಿರದಿದ್ದರೆ ದೇಶ ಸುರಕ್ಷಿತವಾಗಿರಲು ಸಾಧ್ಯವಿಲ್ಲ ಎಂದು ನಂಬುತ್ತಾರೆ.

ಬಡತನ ನಿರ್ಮೂಲನೆಯಿಂದ ಹಿಡಿದು ಆರೋಗ್ಯ, ಬಾಹ್ಯಾಕಾಶ, ಹೂಡಿಕೆ ಮತ್ತು ಆಂತರಿಕ ಮತ್ತು ಬಾಹ್ಯ ಭದ್ರತೆಯವರೆಗಿನ ಮೋದಿಯವರ ದೂರದೃಷ್ಟಿ ಮತ್ತು ಶಾ ಅವರ ನೀತಿಗಳಿಂದಾಗಿ ಭಾರತವು ಮೊದಲಿಗಿಂತ ಈಗ ಪ್ರತಿ ಕ್ಷೇತ್ರದಲ್ಲೂ ಅತ್ಯಂತ ಬಲಿಷ್ಠವಾಗಿದೆ.

ಭಾರತದ ರಾಜಕೀಯಕ್ಕೆ ಹೊಸ ಗುರುತನ್ನು ನೀಡುತ್ತಿರುವ ಜನಪ್ರಿಯ ನಾಯಕ ಶಾ, ಮೋದಿಯವರ ಮುಂಬರುವ ಮೂರನೇ ಅವಧಿಯಲ್ಲಿ, ಭಾರತವು ಮೂರನೇ ಅತಿದೊಡ್ಡ ಆರ್ಥಿಕತೆಯ ಗುರಿಯನ್ನು ಸಾಧಿಸಲಿದೆ ಎಂದರು. ಕಳೆದ 10 ವರ್ಷಗಳಲ್ಲಿ, ಭಾರತವು ವಿಶ್ವದ 11 ನೇ ಅತಿದೊಡ್ಡ ಆರ್ಥಿಕತೆಯಿಂದ, 5 ನೇ ಅತಿದೊಡ್ಡ ಆರ್ಥಿಕತೆಯಾಗಿರುವ ಅಭೂತಪೂರ್ವ ಯಶಸ್ಸನ್ನು ಇಡೀ ಜಗತ್ತು ನೋಡಿದೆ. ಕಳೆದ 10 ವರ್ಷಗಳ ಸಾಧನೆಗಳ ಆಧಾರದಲ್ಲಿ ದೇಶದ ಜನತೆ 2024ರಲ್ಲಿ ಮತ್ತೊಮ್ಮೆ ಮೋದಿಯವರನ್ನು ಪ್ರಧಾನಿಯನ್ನಾಗಿ ಆಯ್ಕೆ ಮಾಡುತ್ತಾರೆ ಎಂದು ಹೇಳುವುದರದಲ್ಲಿ ಯಾವುದೇ ಉತ್ಪ್ರೇಕ್ಷೆಯಿಲ್ಲ.

# ಮೊದಲ ಬಾರಿಗೆ ಇಂದು ವಿಧಾನಸೌಧ ಮುಂಭಾಗದಲ್ಲಿ ಸಿಎಂ ಜನಸ್ಪಂದನ ಕಾರ್ಯಕ್ರಮ

ಬೆಂಗಳೂರು: ಸ್ಪಂದನಶೀಲ ಆಡಳಿತದ ಭರವಸೆಯನ್ನು ಗಟ್ಟಿಗೊಳಿಸುವ ಪ್ರಯತ್ನವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನಾಳೆ ಅಂದರೆ ಗುರುವಾರ (ಫೆಬ್ರವರಿ 8) ಇದೇ ಮೊದಲ ಬಾರಿಗೆ ವಿಧಾನಸೌಧ ಮುಂಭಾಗದಲ್ಲಿ ರಾಜ್ಯ ಮಟ್ಟದ 'ಜನಸ್ಪಂದನ' ಕಾರ್ಯಕ್ರಮ ನಡೆಸಲಿದ್ದಾರೆ.ಬೆಳಿಗ್ಗೆ 10ರಿಂದ ಸಂಜೆ 6 ಗಂಟೆವರೆಗೆ ಈ ಜನತಾ ದರ್ಶನ ನಡೆಯಲಿದೆ. ಜನಸಾಮಾನ್ಯರ ಅಹವಾಲು ಆಲಿಸಿ, ಸ್ಥಳದಲ್ಲೆ? ಪರಿಹಾರ ಕಲ್ಪಿಸುವ ಪ್ರಯತ್ನದೊಂದಿಗೆ ರಾಜ್ಯ ಮಟ್ಟದ ಈ ಜನತಾ ದರ್ಶನವನ್ನು ಶಕ್ತಿ ಕೇಂದ್ರ ವಿಧಾನಸೌಧದ ಮುಂಭಾಗ ನಡೆಸುತ್ತಿರುವುದು ವಿಶೇಷವಾಗಿದೆ.

ಸಿಎಂ ಸಿದ್ದರಾಮಯ್ಯ ಅವರು ನಡೆಸುತ್ತಿರುವ 2ನೇ ಜನಸ್ಪಂದನ ಕಾರ್ಯಕ್ರಮ ಇದಾಗಿದೆ. ಕಳೆದ ಸೆಪ್ಟೆಂಬರ್ ನಲ್ಲಿ ಗೃಹ ಕಚೇರಿ ಕೃಷ್ಣಾದಲ್ಲಿ ಮೊದಲ ಜನಸ್ಪಂದನ ಕಾರ್ಯಕ್ರಮ ನಡೆಸಿದ್ದು, ಹಲವು ಸಮಸ್ಯೆಗಳಿಗೆ ಸ್ಥಳದಲ್ಲೇ ಪರಿಹಾರ ಒದಗಿಸಿದ್ದರು. ಅಲ್ಲದೇ ಜನರ ಸಮಸ್ಯೆಗಳನ್ನು ಆಲಿಸಿ ಆಯಾ ಇಲಾಖೆ, ಜಿಲ್ಲಾಧಿಕಾರಿಗಳಿಗೆ ಕರೆ ಮಾಡಿ ತಿಳಿಸಿದ್ದರು. ನಾಳೆ ಎರಡನೇ ಜನಸ್ಪಂದನ ನಡೆಸಲಿದ್ದು,




ಲೋಕಸಭೆ ಚುನಾವಣೆ ಹಿನ್ನೆಲೆಯಲ್ಲಿ ಪಕ್ಷದ ಮತ್ತು ಸರಕಾರದ ವರ್ಚಸ್ಸು ಹೆಚ್ಚಿಸಿ, ಜನಪರ ಮತ್ತು ಸ್ಪಂದನಶೀಲ ಆಡಳಿತದ ವಿಶ್ವಾಸವನ್ನು ಜನರಲ್ಲಿ ಮೂಡಿಸುವುದು ಇದರ ಮುಖ್ಯ ಉದ್ದೇಶವಾಗಿದೆ.

36 ವಿವಿಧ ಇಲಾಖೆಗಳ ಪ್ರತ್ಯೇಕ ಕೌಂಟರ್ :ಸಿಎಂ ಜನಸ್ಪಂದನ ಕಾರ್ಯಕ್ರಮಕ್ಕಾಗಿ ವಿಧಾನಸೌಧ ಪೂರ್ವಭಾಗದ ಮೆಟ್ಟಿಲುಗಳ ಬಳಿ ಭರ್ಜರಿ ಸಿದ್ಧತೆ ನಡೆದಿದೆ. ರಾಜ್ಯದ ನಾನಾ ಭಾಗಗಳಿಂದ ಜನರು ಅಹವಾಲು ಹೊತ್ತು ತರುವ ಸಾಧ್ಯತೆ ಹಿನ್ನೆಲೆಯಲ್ಲಿ ಕಾರ್ಯಕ್ರಮವನ್ನು ವ್ಯವಸ್ಥಿತವಾಗಿ ನಿರ್ವಹಿಸಲು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ವತಿಯಿಂದ ತಯಾರಿ ಮಾಡಿಕೊಳ್ಳಲಾಗಿದೆ. ವಿಧಾನಸೌಧದ ಗ್ರ್ಯಾಂಡ್ ಸ್ಟೆಪ್ಸ್ ಮುಂಭಾಗ ಸಿಎಂ ಜನಸ್ಪಂದನಕ್ಕೆ ಬೃಹತ್ ಜರ್ಮನ್ ಟೆಂಟ್ ಹಾಕಲಾಗಿದೆ.

ಹಾಗೇ 20 ಬೃಹತ್ ಎಲ್ ಇಡಿ ಸ್ಕ್ರೀನ್ ಅಳವಡಿಕೆ ಮಾಡಲಾಗಿದೆ. ಇನ್ನು 10 ಸಾವಿರ ಜನರಿಗೆ ಆಸನದ ವ್ಯವಸ್ಥೆ ಮಾಡಲಾಗಿದೆ.

36 ವಿವಿಧ ಇಲಾಖೆಗಳಿಗೆ ಸಂಬಂಧಿಸಿದಂತೆ ಪ್ರತ್ಯೇಕ ಕೌಂಟರ್ ಓಪನ್ ಮಾಡಲಾಗಿದ್ದು, ಕೌಂಟರ್ ಗಳಲ್ಲಿ ಆಯಾ ಇಲಾಖೆಯ ಹಿರಿಯ ಅಧಿಕಾರಿಗಳೇ ಸಾರ್ವಜನಿಕ ಮನವಿ ಸ್ವೀಕರಿಸಲಿದ್ದಾರೆ.

ಜೊತೆಗೆ ಸಿಎಂ ಸಿದ್ದರಾಮಯ್ಯನವರೇ ಖುದ್ದು ಆ ಕೌಂಟರ್ ಗಳಿಗೆ ತೆರಳಿ ಅರ್ಜಿ ಪರಿಶೀಲನೆ ನಡೆಸಲಿದ್ದಾರೆ.

1902 ಸಂಖ್ಯೆಗೆ ಕರೆ ಮಾಡಿ ನೋಂದಾಯಿಸಿ: ಎಲ್ಲಾ ಇಲಾಖೆಯ ಹಿರಿಯ ಅಧಿಕಾರಿಗಳು ಜನಸ್ಪಂದನ ಕಾರ್ಯಕ್ರಮದ ಸ್ಥಳದಲ್ಲೇ ಇರುವಂತೆ ಈಗಾಗಲೇ ಸಿಎಂ ಸೂಚನೆ ನೀಡಿದ್ದು, ಸಾರ್ವಜನಿಕರು ತಮ್ಮ ಸಮಸ್ಯೆಯನ್ನು ಸಿಎಂ ಬಳಿ ಹೇಳಿಕೊಳ್ಳಲು ಅಧಾರ್ ಅಥವಾ ಪಡಿತರ ಕಾರ್ಡ್ ನೊಂದಿಗೆ ಆಗಮಿಸಿ ನೋಂದಣಿ ಮಾಡಿಕೊಳ್ಳಬೇಕು.

ಹಾಗೇ ಅನ್ ಲೈನ್ ನಲ್ಲೂ ನೋಂದಾಣಿ ಮಾಡಿಕೊಳ್ಳಬಹುದು. 1902 ಸಂಖ್ಯೆಗೆ ಕರೆ ಮಾಡಿ ನೋಂದಾಯಿಸಬಹುದು.

ಇನ್ನು ಮುಖ್ಯವಾಗಿ ಜನಸ್ಪಂದನಕ್ಕೆ ಆಗಮಿಸುವ ಸಾರ್ವಜನಿಕರಿಗೆ ಲಘು ಉಪಾಹಾರ ಮತ್ತು ನೀರಿನ ವ್ಯವಸ್ಥೆ ಮಾಡಲಾಗಿದೆ. ಅಲ್ಲದೇ ಜನಸ್ಪಂದನಕ್ಕೆ ಬರುವ ಸಾರ್ವಜನಿಕರಿಗೆ ಬಸ್ ವ್ಯವಸ್ಥೆ ಸಹ ಇರಲಿದೆ. ಮೆಜೆಸ್ಟಿಕ್ ಬಸ್ ನಿಲ್ದಾಣ ಹಾಗೂ ಸಂಗೊಳ್ಳಿ ರಾಯಣ್ಣ ರೈಲ್ವೇ ನಿಲ್ದಾಣದಿಂದ ವಿಧಾನಸೌಧಕ್ಕೆ ಬಸ್ ವ್ಯವಸ್ಥೆ ಮಾಡಲಾಗಿದೆ.

ಕಳೆದ ಬಾರಿ ಸಿಎಂ ಜನಸ್ಪಂದನ ಕಾರ್ಯಕ್ರಮದಲ್ಲಿ 4,130 ಅರ್ಜಿಗಳನ್ನು ಸಿಎಂ ಸ್ವೀಕರಿಸಿದ್ದರು. ಈ ಪೈಕಿ ಶೇ. 97ರಷ್ಟು ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದೆ ಎಂದು ಸಿಎಂ ಕಚೇರಿ ಮಾಹಿತಿ ನೀಡಿದೆ. ಇನ್ನು ಕಳೆದ ಬಾರಿಯ ಜನಸ್ಪಂದನದ ಅಂಕಿ ಅಂಶಗಳನ್ನ ನಾಳೆ ನೀಡುವ ಸಾಧ್ಯತೆ ಇದ್ದು, ಈ ಬಾರಿ ಇನ್ನೂ ಹೆಚ್ಚು ಅರ್ಜಿಗಳು ಬರುವ ನಿರೀಕ್ಷೆ ಇದೆ.

# ಪ್ರಿಯಕರನೊಂದಿಗೆ ಸೇರಿ ಗಂಡನ ಕೊಲೆ ಮಾಡಿದ ಪತ್ನಿ

ಹುಬ್ಬಳ್ಳಿ: ಪತ್ನಿ ತನ್ನ ಪ್ರಿಯಕರನೊಂದಿಗೆ ಸೇರಿ ಗಂಡನನ್ನು ಕೊಲೆ ಮಾಡಿದ ಘಟನೆ ಹುಬ್ಬಳ್ಳಿಯ ಎಪಿಎಂಸಿ–ಮಾರಡಗಿ ರೋಡ್‌ನಲ್ಲಿ ನಡೆದಿದೆ.

ಬಂಜಾರ ಕಾಲೋನಿ ನಿವಾಸಿ ಚಂದ್ರಶೇಖರ ಲಮಾಣಿ (40) ಕೊಲೆಯಾದ ಪತಿ. ಕಳೆದ ಜನವರಿ 10 ರಂದು ಎಪಿಎಂಸಿ ಮಾರಡಗಿ ರೋಡ್‌ನಲ್ಲಿ ಅಪರಿಚಿತ ಶವ ಪತ್ತೆಯಾಗಿತ್ತು. ಸ್ಥಳಕ್ಕೆ ಭೇಟಿ ನೀಡಿದ ನವನಗರ ಪೊಲೀಸರು ಮೃತನಾದ ವ್ಯಕ್ತಿಯ ಗುರುತು ಪತ್ತೆ ಹಚ್ಚಿದ್ದರು.

ಅತ್ತ ಪತ್ನಿ ಮಂಜುಳಾ ಗಂಡನ ಸಾವಿನ ಬಗ್ಗೆ ಸಂಶಯ ಇದೆ ಎಂದು ನವನಗರ ಪೊಲೀಸ್ ಠಾಣೆಗೆ ತೆರಳಿ ದೂರು ನೀಡಿದ್ದಳು.

ಪೊಲೀಸರು ಎಲ್ಲಾ ಆ್ಯಂಗಲ್‌ನಲ್ಲಿ ತನಿಖೆ ಮಾಡಿದ್ದಾರೆ. ಬಳಿಕ ಈ ಕೊಲೆಗೆ ಕಾರಣ ಯಾರು ಎಂಬುದನ್ನ ಪತ್ತೆಹಚ್ಚಿದ್ದಾರೆ.

ಪ್ರಿಯಕರ ರಿಯಾಜ್ ಅಹ್ಮದ್ ಮತ್ತು ಮಂಜುಳ ಪತಿ ಚಂದ್ರಶೇಖರ ಲಮಾಣಿಯನ್ನು ಪತ್ನಿ ಮಂಜುಳ ಮತ್ತು ಪ್ರಿಯಕರ ರಿಯಾಜ್ ಅಹ್ಮದ್ ಕೊಲೆ ಮಾಡಿದ್ದಾರೆ. ಅನೈತಿಕ ಸಂಬಂಧಕ್ಕೆ ವಿರೋಧ ಹಿನ್ನೆಲೆಯಲ್ಲಿ ಕೊಲೆ ಮಾಡಿರುವುದಾಗಿ ಸತ್ಯ ಕಕ್ಕಿದ್ದಾರೆ.

ನಮ್ಮಿಬ್ಬರ ಅನೈತಿಕ ಸಂಬಂಧ ಇತ್ತು. ಈ ವಿಷಯ ಗಂಡನಿಗೆ ಗೊತ್ತಾದ ನಂತರ ನನಗೆ ಕಿರುಕುಳ ನೀಡುತ್ತಿದ್ದ.




ಅಲ್ಲದೇ ನಮ್ಮ ಸಂಬಂಧಕ್ಕೆ ಅಡ್ಡಿಯಾಗಿದ್ದ ಗಂಡನನ್ನು ಪ್ರಿಯಕರ ಕೊಲೆ ಮಾಡಿದ್ದಾಗಿ ಮಂಜುಳ ಪೊಲೀಸರ ಮುಂದೆ ಸತ್ಯ ಒಪ್ಪಿಕೊಂಡಿದ್ದಾಳೆ.

ಅತ್ತ ನಾನೇ ಚಂದ್ರಶೇಖರನನ್ನ ಕರೆದುಕೊಂಡು ಹೋಗಿ ಕೊಲೆ ಮಾಡಿದ್ದೇನೆ.

ಕಳೆದ ಐದು ವರ್ಷಗಳಿಂದ ನಮ್ಮಿಬ್ಬರ ನಡುವೆ ಅನೈತಿಕ ಸಂಬಂಧ ಇತ್ತು. ಅದಕ್ಕೆ ಚಂದ್ರಶೇಖರ ವಿರೋಧ ಮಾಡ್ತಾ ಇದ್ದ.

ಆದ್ದರಿಂದ ಕೊಲೆ ಮಾಡದ್ದೇನೆ ಎಂದು ರಿಯಾಜ್ ಅಹ್ಮದ್ ನಿಜಾಂಶ ಹೇಳಿದ್ದಾನೆ. ಸದ್ಯ ಪತ್ನಿಯ ಅನೈತಿಕ ಸಂಬಂಧದಿಂದ ಗಂಡ ಕೊಲೆಯಾದ್ರೆ, ಮಾಡಬಾರದ ತಪ್ಪು ಮಾಡಿ ಪತ್ನಿ ಹಾಗೂ ಪ್ರಿಯಲ ಜೈಲು ಪಾಲಾಗಿದ್ದಾರೆ. ಇವರ ಈ ಕೃತ್ಯಕ್ಕೆ ಮೂರು ಮಕ್ಕಳು ಅನಾಥವಾಗಿವೆ.

# ದೂರುದಾರರ ಮನೆಯ ವಿದ್ಯುತ್ ಸಂಪರ್ಕ ಕಡಿತಗೊಳಿಸದಂತೆ ಹೆಸ್ಕಾಂಗೆ ನಿರ್ದೇಶನ

ಧಾರವಾಡ: ಧಾರವಾಡದ ವಾಸಿ ಉಷಾ ಆರ್.ಎಮ್. ಎಂಬುವವರು ಶಕ್ತಿ ನಗರದ ಅನುಗ್ರಹ ಮನೆ ನಂ.97 ರಲ್ಲಿ ವಾಸವಿದ್ದು ಅದರಲ್ಲಿ ಒಟ್ಟು 6 ಮನೆ ಬಾಗಗಳಿದ್ದವು. ಅವುಗಳ ಪೈಕಿ 2 ರಲ್ಲಿ ದೂರುದಾರಳು ಮತ್ತು ಅವಳ ಮಗ ವಾಸಿಸುತ್ತಿದ್ದರು. ಉಳಿದ 4 ಮನೆಗಳಲ್ಲಿ ಬಾಡಿಗೆದಾರರು ಇದ್ದರು.

ಗಂಡ ಹೆಂಡತಿಯ ಮಧ್ಯೆ ವ್ಯಾಜ್ಯ ಇದ್ದುದರಿಂದ ಬಾಡಿಗೆದಾರರು ಮನೆ ಖಾಲಿ ಮಾಡಿದ್ದರು. 6 ಮೀಟರಗಳ ವಿದ್ಯುತ್ ಬಳಕೆಯ ಶುಲ್ಕವನ್ನು ಕಟ್ಟಿಲ್ಲದ ಕಾರಣ ಧಾರವಾಡ ವಿದ್ಯಾಗಿರಿ ಹೆಸ್ಕಾಮ್ ನವರು ವಿದ್ಯುತ್ ಸರಬರಾಜನ್ನು ಬಂದ್ ಮಾಡಲು ಕ್ರಮ ಕೈಗೊಂಡಿದ್ದರು.

ತಮ್ಮ ವಾಸ್ತವ್ಯದ 2 ಮನೆಗಳ ವಿದ್ಯುತ್ ಸರಬರಾಜು ನಿಲ್ಲಿಸಿದರೆ ತನಗೆ ತೊಂದರೆಯಾಗುತ್ತದೆ ಅಂತಾ ಹೇಳಿ ಆ ರೀತಿ ಮಾಡದಂತೆ ವಿದ್ಯಾಗಿರಿ ಹೆಸ್ಕಾಮ್ ರವರಿಗೆ ಆದೇಶ ನೀಡಬೇಕೆಂದು ದೂರುದಾರಳು ಗ್ರಾಹಕರ ರಕ್ಷಣಾ ಕಾಯ್ದೆ ಅಡಿ ಧಾರವಾಡ ಜಿಲ್ಲಾ ಗ್ರಾಹಕರ ಆಯೋಗಕ್ಕೆ ದಿ:21/06/2023 ರಂದು ಈ ದೂರನ್ನು ಸಲ್ಲಿಸಿದ್ದರು.

ದೂರುದಾರಳು ಮತ್ತು ಅವರ ಗಂಡನಿಗೆ ಸಂಬಂಧಿಸಿದ ಒಟ್ಟು 6 ವಿದ್ಯುತ್ ಬಳಕೆಯ ಮೀಟರಗಳಿದ್ದು ಅವುಗಳ ವಿದ್ಯುತ್ ಬಿಲ್ಲನ್ನು ಕಟ್ಟಿಲ್ಲ. ವಿದ್ಯುತ್ ಬಳಕೆಯ ಬಾಕಿ ಬಿಲ್ಲ ಕಟ್ಟದೇ ದೂರುದಾರರಿಗೆ ಯಾವುದೇ ರೀತಿ ಸಹಾಯ ಮಾಡಲಾಗುವುದಿಲ್ಲ ಅಂತಾ ಎದುರುದಾರ ಹೆಸ್ಕಾಮನವರು ಆಕ್ಷೇಪಣೆ ಎತ್ತಿದ್ದರು.

ಸದರಿ ದೂರಿನ ಬಗ್ಗೆ ಕೂಲಂಕುಷವಾಗಿ ವಿಚಾರಣೆ ನಡೆಸಿದ ಆಯೋಗದ ಅಧ್ಯಕ್ಷರಾದ ಈಶಪ್ಪ. ಭೂತೆ ಹಾಗೂ ಸದಸ್ಯರಾದ ವಿ.ಅ. ಬೋಳಶೆಟ್ಟಿ ದೂರುದಾರಳು ಬಾಕಿ ಇರುವ ವಿದ್ಯುತ್ ಬಳಕೆಯ ಶುಲ್ಕ ಕಟ್ಟಲು ತಯಾರು ಇರುವುದಾಗಿ ಮತ್ತು ತಾನು ಉಪಯೋಗಿಸುತ್ತಿರುವ ಮೀಟರ ನಂ.14735 ಹಾಗೂ 73261ಗಳ ವಿದ್ಯುತ್ ಬಳಕೆಯ ಶುಲ್ಕವನ್ನು ನಿಯಮಿತವಾಗಿ ಕಟ್ಟುವುದಾಗಿ ಹೇಳಿದರು. ಬಾಕಿ ವಿದ್ಯುತ್ ಶುಲ್ಕ ಎದುರುದಾರ ಹೆಸ್ಕಾಮನವರಿಗೆ ದೂರುದಾರಳು ಕಟ್ಟಿ ಬಂದು ವರದಿ ಮಾಡಿದರು. ದೂರುದಾರಳೂ ಹೆಣ್ಣು ಮಗಳಾದ್ದರಿಂದ ಮಾನವೀಯತೆಯ ದೃಷ್ಟಿಯಿಂದ ಅವಳ ಹಾಗೂ ಅವಳ ಮಗನ ಬಳಕೆಯ 2 ವಿದ್ಯುತ್ ಮೀಟರಗಳಿಗೆ ಸರಬರಾಜು ಬಂದ್ ಮಾಡದಂತೆ ಎದುರುದಾರ ಹೆಸ್ಕಾಮನವರಿಗೆ ಆಯೋಗ ಆದೇಶಿಸಿದೆ.

ಇನ್ನು ಮುಂದೆ ವಿದ್ಯು ಬಳಕೆಯ ಶುಲ್ಕ ತಪ್ಪದೇ ಕಟ್ಟಿಕೊಂಡು ಹೋಗುವಂತೆ ದೂರುದಾರರಿಗೆ ಸೂಚಿಸಿದೆ.

# ಫೆ. 10 ರಂದು ಕಾಯಕ ಶರಣರ ಜಯಂತಿ

ಧಾರವಾಡ: ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಕಾಯಕ ಶರಣರ ಜಯಂತಿಯನ್ನು ಫೆಬ್ರವರಿ 10 ರಂದು ಬೆಳಿಗ್ಗೆ 11 ಗಂಟೆಗೆ ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ ಏರ್ಪಡಿಸಲಾಗಿದೆ.

ಕಾರ್ಯಕ್ರಮದಲ್ಲಿ ಕೇಂದ್ರ ಸಂಸದೀಯ ವ್ಯವಹಾರಗಳ, ಕಲ್ಲಿದ್ದಲು ಮತ್ತು ಗಣಿ ಸಚಿವರಾದ ಪ್ರಲ್ಹಾದ ಜೋಶಿ ಹಾಗೂ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ಘನ ಉಪಸ್ಥಿತರಿರುವರು. ಕಾರ್ಮಿಕ ಸಚಿವರು ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಎಸ್.ಲಾಡ್ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು.

ಮಾಜಿ ಮುಖ್ಯಮಂತ್ರಿ ಜಗದೀಶ ಶೆಟ್ಟರ್, ಕರ್ನಾಟಕ ವಿಧಾನ ಪರಿಷತ್ ಸರ್ಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ, ಶಾಸಕರು ಹಾಗೂ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳ ಚರಂಡಿ ಮಂಡಳಿಯ ಅಧ್ಯಕ್ಷ ವಿನಯ ಕುಲಕರ್ಣಿ, ಶಾಸಕ ಹಾಗೂ ಕರ್ನಾಟಕ ಕೊಳಚೆ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಅಬ್ಬಯ್ಯ ಪ್ರಸಾದ, ಶಾಸಕ ಹಾಘೂ ವಾಯವ್ಯ ಸಾರಿಗೆ ನಿಗಮದ ಅಧ್ಯಕ್ಷ ಭರಮಗೌಡ ಅಲಗೌಡ ಕಾಗೆ, ಶಾಸಕರು ಹಾಗೂ ಕರ್ನಾಟಕ ಕೈಮಗ್ಗ ನಿಗಮದ ಅಧ್ಯಕ್ಷರಾದ ಜೆ.ಎಂ.ಗಣೇಶ ಅವರು ವಿಶೇಷ ಅತಿಥಿಗಳಾಗಿ ಆಗಮಿಸುವರು. ಶಾಸಕರಾದ ಅರವಿಂದ ಬೆಲ್ಲದ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಶಾಸಕರಾದ ಎನ್.ಎಚ್ ಕೋನರಡ್ಡಿ, ಎಸ್.ವ್ಹಿ.ಸಂಕನೂರ, ಪ್ರದೀಪ ಶೆಟ್ಟರ, ಮಹೇಶ ಟೆಂಗಿನಕಾಯಿ, ಎಂ.ಆರ್.ಪಾಟೀಲ್, ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಯ ಮಹಾಪೌರರಾದ ವೀಣಾ ಚೇತನ ಭರದ್ವಾಡ ಅವರು ಭಾಗವಹಿಸುವರು.

ಶ್ರೀ ಮಾದಾರ ಚನ್ನಯ್ಯ ಹಾಗೂ ಶ್ರೀ ಮಾದಾರ ಧೂಳಯ್ಯ ಅವರ ಕುರಿತು ಉಪನ್ಯಾಸವನ್ನು ಹಾವೇರಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಉಪನ್ಯಾಸಕ ಡಾ. ಮಾಲತೇಶ ಎಮ್. ಪೂಜಾರ್, ಶ್ರೀ ಡೋಹರ ಕಕ್ಕಯ್ಯ ಅವರ ಕುರಿತು ಬೀದರನ ಅಕ್ಕಮಹಾದೇವಿ ಮಹಿಳಾ ಮಹಾವಿದ್ಯಾಲಯದ ಪ್ರಾಂಶಪಾಲ ಪ್ರೊ. ಎಸ್.ಜಿ. ಹುಗ್ಗಿ ಪಾಟೀಲ, ಶ್ರೀ ಸಮಗಾರ ಹರಳಯ್ಯ ಅವರ ಕುರಿತು ಉಪನ್ಯಾಸವನ್ನು ಹಾನಗಲ್ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನ ಗಣಕ ವಿಜ್ಞಾನ ವಿಭಾಗದ ಉಪ್ಯಾಸಕ ಪ್ರೊ. ರಾಜೇಶ್ ಹೊಂಗಲ್, ಶ್ರೀ ಉರಿಲಿಂಗ ಪೆದ್ದಿ ಅವರ ಕುರಿತು ಉಪನ್ಯಾಸವನ್ನು ಡಾ.ಬಿ.ಆರ್ ಅಂಬೇಡ್ಕರ್ ಸಮುದಾಯದ ಪ್ರಗತಿ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಲಕ್ಷ್ಮಣ ಬಕ್ಕಾಯಿ ಅವರು ವಿಶೇಷ ಉಪನ್ಯಾಸ ನೀಡುವರು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಕುಮಾರ ಬೆಕ್ಕೇರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಫೆ.13 ರಂದು ಪಿಂಚಣಿ ಅದಾಲತ್

ಬಳ್ಳಾರಿ: ಕಾರ್ಮಿಕರ ಭವಿಷ್ಯ ನಿಧಿ ಪ್ರಾದೇಶಿಕ ಕಚೇರಿ ಬಳ್ಳಾರಿ ಇವರ ವತಿಯಿಂದ ಪಿಂಚಣಿದಾರರ ಕುಂದುಕೊರತೆಗಳನ್ನು ನಿವಾರಿಸಲು ಫೆ.13 ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 1 ರವರೆಗೆ ಬಳ್ಳಾರಿ ಪ್ರಾದೇಶಿಕ ಕಚೇರಿಯಲ್ಲಿ ಪಿಂಚಣಿ ಅದಾಲತ್ ಏರ್ಪಡಿಸಲಾಗಿದೆ.

ಬಳ್ಳಾರಿ, ಕೊಪ್ಪಳ, ವಿಜಯನಗರ ಮತ್ತು ಚಿತ್ರದುರ್ಗ ಜಿಲ್ಲೆಗಳ ಪಿಂಚಣಿದಾರರು ತಮ್ಮ ಕುಂದುಕೊರತೆಗಳನ್ನು ಬಳ್ಳಾರಿಯ ಪ್ರಾದೇಶಿಕ ಕಚೇರಿಯ ಸಾರ್ವಜನಿಕ ಸಂಪರ್ಕ ಅಧಿಕಾರಿ, ಇವರಿಗೆ ಪತ್ರ ಅಥವಾ ಇ–ಮೇಲ್ ಮೂಲಕ ತಮ್ಮ ಪಿ.ಪಿ.ಒ ಸಂಖ್ಯೆ ವಿಳಾಸ, ದೂರವಾಣಿ, ಮೊಬೈಲ್ ಸಂಖ್ಯೆ, ಕುಂದು ಕೊರತೆಯ ಸ್ವರೂಪ ಇತ್ಯಾದಿಗಳನ್ನು ಬರೆದು ಪತ್ರ ಮೂಲಕ ಫೆ.10 ರೊಳಗೆ ಕಳುಹಿಸಬಹುದು. ಪತ್ರ, ಲಕೋಟೆಯ ಮೇಲೆ ಪಿಂಚಣಿ ಅದಾಲತ್ ಎಂದು ಬರೆಯಬೇಕು.

ಹೆಚ್ಚಿನ ಮಾಹಿತಿಗಾಗಿ ದೂ.08392–268943 ಗೆ ಸಂಪರ್ಕಿಸಬಹುದು ಎಂದು ಕ್ಷೇತ್ರಿಯ ಭವಿಷ್ಯನಿಧಿ ಆಯುಕ್ತ ಕೆ.ವೆಂಕಟ ಸುಬ್ಬಯ್ಯ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕ್ಯಾಪಿಟಲ್ ಸ್ಮಾಲ್ ಫೈನಾನ್ಸ್ ಬ್ಯಾಂಕ್ ಐಪಿಒ

ಹುಬ್ಬಳ್ಳಿ: ಕ್ಯಾಪಿಟಲ್ ಸ್ಮಾಲ್ ಫೈನಾನ್ಸ್ ಬ್ಯಾಂಕ್ ಲಿಮಿಟೆಡ್, ಫೆಬ್ರವರಿ 7, 2024ರ ಬುಧವಾರ 10 ರೂ. ಮುಖಬೆಲೆಯ ಈಕ್ವಿಟಿ ಷೇರುಗಳ ಆರಂಭಿಕ ಸಾರ್ವಜನಿಕ ಕೊಡುಗೆಯನ್ನು ತೆರೆಯುತ್ತದೆ. ಈ ಆಫರ್ ಫೆಬ್ರವರಿ 9, 2024 ರ ಶುಕ್ರವಾರ ಕೊನೆಗೊಳ್ಳುತ್ತದೆ.

ಕೊಡುಗೆಯ ದರ ಪಟ್ಟಿಯನ್ನು ಪ್ರತಿ ಷೇರಿಗೆ 445 ರೂ.ನಿಂದ 468 ರೂ.ಗೆ ನಿಗದಿಪಡಿಸಲಾಗಿದೆ. ಕನಿಷ್ಠ 32 ಈಕ್ವಿಟಿ ಷೇರುಗಳಿಗೆ ಮತ್ತು ನಂತರ 32 ಈಕ್ವಿಟಿ ಷೇರುಗಳ ಗುಣಕಗಳಲ್ಲಿ ಬಿಡ್ ಮಾಡಬಹುದು.

ಆರಂಭಿಕ ಸಾರ್ವಜನಿಕ ಕೊಡುಗೆಯು 450 ಕೋಟಿ ರೂ. ಈಕ್ವಿಟಿ ಷೇರುಗಳ ಹೊಸ ವಿತರಣೆ ಮತ್ತು ಮಾರಾಟಗಾರ ಷೇರುದಾರರಿಂದ 1,561,329 ಈಕ್ವಿಟಿ ಷೇರುಗಳ ಮಾರಾಟದ ಪ್ರಸ್ತಾಪ ಒಳಗೊಂಡಿದೆ.

ಹೊಸ ಕೊಡುಗೆಯಿಂದ ಬರುವ ನಿವ್ವಳ ಆದಾಯ'ವನ್ನು ಬ್ಯಾಂಕ್ ತನ್ನ ಭವಿಷ್ಯದ ಬಂಡವಾಳ ಅಗತ್ಯತೆಗಳನ್ನು ಪೂರೈಸುವ ನಿಟ್ಟಿನಲ್ಲಿ ಬ್ಯಾಂಕಿನ ಶ್ರೇಣಿ–1' ಬಂಡವಾಳ ನೆಲೆ ಹೆಚ್ಚಳಕ್ಕಾಗಿ ಬಳಸಲು ಪ್ರಸ್ತಾಪಿಸಿದೆ. ಬ್ಯಾಂಕ್‌ನ ಸಾಲದ ಉತ್ಪನ್ನಗಳು ಮತ್ತು ಆಸ್ತಿ ನೆಲೆ ಬೆಳೆಯುತ್ತಲೇ ಇರುವುದರಿಂದ, ಬ್ಯಾಂಕ್‌ಗೆ ತನ್ನ ವ್ಯವಹಾರಕ್ಕೆ ಸಂಬಂಧಿಸಿದಂತೆ ಅನ್ವಯವಾಗುವ ಬಂಡವಾಳ ಸಮರ್ಪಕ ಅನುಪಾತಗಳ ಪೂರೈಕೆಯನ್ನು ಮುಂದುವರಿಸಲು ಹೆಚ್ಚುವರಿ ಬಂಡವಾಳದ ಅಗತ್ಯವಿರುತ್ತದೆ.. ಬ್ಯಾಂಕ್ ತನ್ನ ಸಾಲದ ಮುಂಗಡಗಳನ್ನು ಹೆಚ್ಚಿಸಲು ಉದ್ದೇಶಿಸಿದೆ, ಇದಕ್ಕೆ ಅನ್ವಯವಾಗುವ ಬಂಡವಾಳದ ಸಮರ್ಪಕತೆಯ ಅವಶ್ಯಕತೆಗಳನ್ನು ಅನುಸರಿಸಲು ಶ್ರೇಣಿ –1 ಬಂಡವಾಳದ ಅಗತ್ಯವಿರುತ್ತದೆ. ಇದಲ್ಲದೆ, ಹೊಸ ವಿತರಣೆಯಿಂದ ಬರುವ ಆದಾಯವನ್ನು ಕೊಡುಗೆಗೆ ಸಂಬಂಧಿಸಿದ ವೆಚ್ಚಗಳನ್ನು ಪೂರೈಸಲು ಸಹ ಬಳಸಲಾಗುತ್ತದೆ.

ಈ ಮಾರಾಟದ ಪ್ರಸ್ತಾಪವು ಒಮಾನ್ ಇಂಡಿಯಾ ಜಂಟಿ ಹೂಡಿಕೆ ನಿಧಿ IIನಿಂದ 836,728 ಈಕ್ವಿಟಿ ಷೇರುಗಳು; ಅಮಿಕಸ್ ಕ್ಯಾಪಿಟಲ್ ಪ್ರೈವೇಟ್ ಈಕ್ವಿಟಿ I ಎಲ್‌ಎಲ್‌ಪಿ'ಯಿಂದ 151,153 ಈಕ್ವಿಟಿ ಷೇರುಗಳು; ಅಮಿಕಸ್ ಕ್ಯಾಪಿಟಲ್ ಪಾರ್ಟ್ನರ್ಸ್ ಇಂಡಿಯಾ ಫಂಡ್ I' ನಿಂದ 17,544 ಈಕ್ವಿಟಿ ಷೇರುಗಳನ್ನು ಮತ್ತು ಕರಡು ದಾಖಲೆ ಪತ್ರದಲ್ಲಿ ಪಟ್ಟಿ ಮಾಡಲಾದ ನಿರ್ದಿಷ್ಟ ಹೂಡಿಕೆದಾರರಿಂದ 555,904 ಈಕ್ವಿಟಿ ಷೇರುಗಳನ್ನು ಒಳಗೊಂಡಿದೆ

ಈಕ್ವಿಟಿ ಷೇರುಗಳನ್ನು ಫೆಬ್ರವರಿ 1, 2024ರ ಕರಡು ದಾಖಲೆ ಪತ್ರ ("ಆರ್‌ಹೆಚ್‌ಪಿ") ಮೂಲಕ ಪಂಜಾಬ್ ಮತ್ತು ಚಂಡೀಗಢದ ಕಂಪನಿಗಳ ರಿಜಿಸ್ಟ್ರಾರ್‌ಗೆ ("ಆರ್‌ಒಸಿ") ಸಲ್ಲಿಸಲಾಗುತ್ತದೆ. ಆರ್‌ಎಚ್‌ಪಿ' ಮೂಲಕ ವಿತರಿಸಲಾದ ಈಕ್ವಿಟಿ ಷೇರುಗಳನ್ನು ಬಿಎಸ್‌ಇ ಲಿಮಿಟೆಡ್ ("ಬಿಎಸ್‌ಇ") ಮತ್ತು ನ್ಯಾಷನಲ್ ಸ್ಟಾಕ್ ಎಕ್ಸ್ಚೇಂಜ್ ಆಫ್ ಇಂಡಿಯಾ ಲಿಮಿಟೆಡ್ ("ಎನ್‌ಎಸ್‌ಇ" ಜೊತೆಗೆ ಬಿಎಸ್‌ಇ, "ಸ್ಟಾಕ್ ಎಕ್ಸ್ಚೇಂಜ್‌ಗಳು") ಸ್ಟಾಕ್ ಎಕ್ಸ್‌ಚೇಂಜ್‌ಗಳಲ್ಲಿ ನೋಂದಾಯಿಸಲು ಪ್ರಸ್ತಾಪಿಸಲಾಗಿದೆ. ಕೊಡುಗೆಯ ಉದ್ದೇಶಗಳಿಗಾಗಿ, ಬಿಎಸ್‌ಇ ಲಿಮಿಟೆಡ್ ನಿಯೋಜಿತ ಷೇರು ವಿನಿಮಯ ಸಂಸ್ಥೆಯಾಗಿರುತ್ತದೆ.

ನುವಾಮಾ ವೆಲ್ತ್ ಮ್ಯಾನೇಜ್ಮೆಂಟ್ ಲಿಮಿಟೆಡ್' (ಈ ಹಿಂದೆ ಎಡೆಲ್ವೀಸ್ ಸೆಕ್ಯುರಿಟೀಸ್ ಲಿಮಿಟೆಡ್ ಎಂದು ಕರೆಯಲಾಗುತ್ತಿತ್ತು), ಡ್ಯಾಮ್ ಕ್ಯಾಪಿಟಲ್ ಅಡ್ವೈಸರ್ಸ್ ಲಿಮಿಟೆಡ್' ಮತ್ತು ಇಕ್ವಿರಸ್ ಕ್ಯಾಪಿಟಲ್ ಪ್ರೈವೇಟ್ ಲಿಮಿಟೆಡ್' ಈ ಕೊಡುಗೆಗೆ ಬುಕ್ ರನ್ನಿಂಗ್ ಲೀಡ್ ಮ್ಯಾನೇಜರ್‌ಗಳು.

# ರಾಜ್ಯ ಮಟ್ಟದ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಕಾರ್ಯಕ್ರಮ

ಧಾರವಾಡ: ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ, ಶಾಲಾ ಶಿಕ್ಷಣ ಇಲಾಖೆಯ ಅಪರ ಆಯುಕ್ತರ ಕಚೇರಿ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರ ಕಾರ್ಯಲಯ ಹಾಗೂ ಜನತಾ ಶಿಕ್ಷಣ ಸಮಿತಿಯ ಸಂಯುಕ್ತ ಆಶ್ರಯದಲ್ಲಿ ರಾಜ್ಯ ಮಟ್ಟದ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಕಾರ್ಯಕ್ರಮವನ್ನು ಫೆಬ್ರವರಿ 8 ಮತ್ತು 9 ರಂದು ಬೆಳಿಗ್ಗೆ 10 ಗಂಟೆಗೆ ವಿದ್ಯಾಗಿರಿ ಜೆ.ಎಸ್.ಎಸ್. ಆವರಣದ ಸನ್ನಿಧಿ ಕಲಾಕ್ಷೇತ್ರದಲ್ಲಿ ಏರ್ಪಡಿಸಲಾಗಿದೆ.

ಮುರುಘಾಮತದ ಡಾ. ಮಲ್ಲಿಕಾರ್ಜುನ ಮಹಾಸ್ವಾಮಿಗಳು ಕಾರ್ಯಕ್ರಮದಲ್ಲಿ ದಿವ್ಯ ಸಾನಿಧ್ಯ ವಹಿಸುವರು.

ಕಾರ್ಯಕ್ರಮದಲ್ಲಿ ಕೇಂದ್ರ ಸಂಸದೀಯ ವ್ಯವಹಾರಗಳ, ಕಲ್ಲಿದ್ದಲು ಮತ್ತು ಗಣಿ ಸಚಿವರಾದ ಪ್ರಲ್ಹಾದ ಜೋಶಿ ಹಾಗೂ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ಘನ ಉಪಸ್ಥಿತರಿರುವರು. ಕಾರ್ಮಿಕ ಸಚಿವರು ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಎಸ್.ಲಾಡ್ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು.

ಹಾಗೂ ಮಾಜಿ ಮುಖ್ಯಮಂತ್ರಿ ಜಗದೀಶ ಶೆಟ್ಟರ್, ಕರ್ನಾಟಕ ವಿಧಾನ ಪರಿಷತ್ ಸರ್ಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ, ಶಾಸಕರು ಹಾಗೂ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳ ಚರಂಡಿ ಮಂಡಳಿಯ ಅಧ್ಯಕ್ಷ ವಿನಯ ಕುಲಕರ್ಣಿ, ಶಾಸಕ ಹಾಗೂ ಕರ್ನಾಟಕ ಕೊಳಚೆ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಅಬ್ಬಯ್ಯ ಪ್ರಸಾದ, ಶಾಸಕ ಹಾಘೂ ವಾಯವ್ಯ ಸಾರಿಗೆ ನಿಗಮದ ಅಧ್ಯಕ್ಷ ಭರಮಗೌಡ ಅಲಗೌಡ ಕಾಗೆ, ಶಾಸಕರು ಹಾಗೂ ಕರ್ನಾಟಕ ಕೈಮಗ್ಗ ನಿಗಮದ ಅಧ್ಯಕ್ಷರಾದ ಜೆ.ಎಂ.ಗಣೇಶ ಅವರು ವಿಶೇಷ ಅತಿಥಿಗಳಾಗಿ ಆಗಮಿಸುವರು. ಶಾಸಕರಾದ ಅರವಿಂದ ಬೆಲ್ಲದ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಶಾಸಕರಾದ ಎನ್.ಎಚ್ ಕೋನರಡ್ಡಿ, ಎಸ್.ವ್ಹಿ.ಸಂಕನೂರ, ಪ್ರದೀಪ ಶೆಟ್ಟರ, ಮಹೇಶ ಟೆಂಗಿನಕಾಯಿ, ಎಂ.ಆರ್.ಪಾಟೀಲ್, ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಯ ಮಹಾಪೌರರಾದ ವೀಣಾ ಚೇತನ ಭರದ್ವಾಡ ಅವರು ಭಾಗವಹಿಸುವರು.

# ಶಾಲಾ ಶಿಕ್ಷಣ ಇಲಾಖೆ ಧಾರವಾಡ: ರಾಜ್ಯಮಟ್ಟದ ಪ್ರತಿಭಾ ಕಾರಂಜಿ; ವೈಯಕ್ತಿಕ ಸಾಮೂಹಿಕ ಸ್ಪರ್ಧೆಗಳ ವಿವಿರ

ಧಾರವಾಡ: ಶಾಲಾ ಶಿಕ್ಷಣ ಇಲಾಖೆಯು ಧಾರವಾಡ ನಗರದಲ್ಲಿ ನಾಳೆಯಿಂದ ಆಯೋಜಿಸಿರುವ ರಾಜ್ಯ ಮಟ್ಟದ ಪ್ರತಿಭಾ ಕಾರಂಜಿ ಮತ್ತು ಕಲೋತ್ಸವ ಕಾರ್ಯಕ್ರಮದಲ್ಲಿ 23 ವೈಯಕ್ತಿಕ ಹಾಗೂ ಮೂರು ಸಾಮೂಹಿಕ ಸ್ಪರ್ಧೆಗಳನ್ನು ಆಯೋಜಿಸಿದೆ.

ಪ್ರತಿ ಸ್ಪರ್ಧೆಗಳಲ್ಲಿ ವಿಜೇತರಾಗುವ ವಿದ್ಯಾರ್ಥಿಗಳಿಗೆ ಪ್ರಥಮ, ದ್ವಿತೀಯ, ತೃತೀಯ ಮತ್ತು ಐದು ಸಮಾಧಾನಕರ ಬಹುಮಾನಗಳನ್ನು ವಿತರಿಸಲಾಗುತ್ತಿದೆ.



1) ಭಾಷಣ ಸ್ಪರ್ಧೆ: ಇಂದು ಫೆ.8 ರಿಂದ ಆರಂಭವಾಗುವ, ಈ ಸ್ಪರ್ಧೆಯಲ್ಲಿ ಎಲ್ಲ 35 ಶೈಕ್ಷಣಿಕ ಜಿಲ್ಲೆಗಳ ವಿದ್ಯಾರ್ಥಿಗಳು ಭಾಗವಹಿಸುತ್ತಿದ್ದು, ಕನ್ನಡ, ಇಂಗ್ಲೀಷ, ಹಿಂದಿ, ಉರ್ದು, ಮರಾಠಿ, ತುಳು, ಕೊಂಕಣಿ, ತೆಲಗು, ತಮಿಳು ಬಾಷೆಯಲ್ಲಿ ಭಾಷಣ ಸ್ಪರ್ಧೆಗಳು ಜೆ.ಎಸ್.ಎಸ್.ಕಾಲೇಜು ಆವರಣದ ಶ್ರೀ ಮಂಜುನಾಥೇಶ್ವರ ಕನ್ನಡ ಮಾಧ್ಯಮ ಪ್ರೌಢ ಶಾಲೆಯ ಕಟ್ಟಡದಲ್ಲಿ ಜರುಗಲಿವೆ.

2) ಧಾರ್ಮಿಕ ಪಠಣ ಸ್ಪರ್ಧೆ: ಇಂದು ಫೆ.8 ರಿಂದ ಆರಂಭವಾಗುವ, ಈ ಸ್ಪರ್ಧೆಯಲ್ಲಿ ಎಲ್ಲ 35 ಶೈಕ್ಷಣಿಕ ಜಿಲ್ಲೆಗಳ ವಿದ್ಯಾರ್ಥಿಗಳು ಭಾಗವಹಿಸುತ್ತಿದ್ದು, ಅರೇಬಿಕ್ ಭಾಷೆಯಲ್ಲಿ ಧಾರ್ಮಿಕ ಪಠಣ ಸ್ಪರ್ಧೆಗಳು ಜೆ.ಎಸ್.ಎಸ್. ಕಾಲೇಜು ಆವರಣದ ಶ್ರೀ ಮಂಜುನಾಥೇಶ್ವರ ಕನ್ನಡ ಮಾಧ್ಯಮ ಪ್ರೌಢ ಶಾಲೆಯ ಕಟ್ಟಡದಲ್ಲಿ ಜರುಗಲಿವೆ.

3) ಜಾನಪದ, ಭಾವಗೀತೆ ಸ್ಪರ್ಧೆ: ಇಂದು ಫೆ.8 ರಿಂದ ಆರಂಭವಾಗುವ, ಈ ಸ್ಪರ್ಧೆಯಲ್ಲಿ ಎಲ್ಲ 35 ಶೈಕ್ಷಣಿಕ ಜಿಲ್ಲೆಗಳ ವಿದ್ಯಾರ್ಥಿಗಳು ಭಾಗವಹಿಸುತ್ತಿದ್ದು, ಜಾನಪದ ಗೀತೆ ಮತ್ತು ಭಾವಗೀತೆ ಸ್ಪರ್ಧೆಗಳು ಜೆ.ಎಸ್.ಎಸ್.ಕಾಲೇಜು ಆವರಣದ ಶ್ರೀ ಮಂಜುನಾಥೇಶ್ವರ ಕನ್ನಡ ಮಾಧ್ಯಮ ಪ್ರೌಢ ಶಾಲೆಯ ಕಟ್ಟಡದಲ್ಲಿ ಜರುಗಲಿವೆ.

4) ಭರತ ನಾಟ್ಯ ಸ್ಪರ್ಧೆ: ಇಂದು ಫೆ.8 ರಿಂದ ಆರಂಭವಾಗುವ, ಈ ಸ್ಪರ್ಧೆಯಲ್ಲಿ ಎಲ್ಲ 35 ಶೈಕ್ಷಣಿಕ ಜಿಲ್ಲೆಗಳ ವಿದ್ಯಾರ್ಥಿಗಳು ಭಾಗವಹಿಸುತ್ತಿದ್ದು, ಭರತ ನಾಟ್ಯ ಸ್ಪರ್ಧೆಗಳನ್ನು ಜೆ.ಎಸ್.ಎಸ್.ಕಾಲೇಜು ಆವರಣದ ಧರ್ಮಸ್ಥಳ ರತ್ನಮ್ಮ ಹೆಗಡೆ ಭವನದಲ್ಲಿ ಜರುಗಲಿವೆ.

5) ಛದ್ಮವೇಶ, ಮಿಮಿಕ್ರಿ, ಗಜಲ, ಆಶುಭಾಷಣ ಸ್ಪರ್ಧೆಗಳು: ಈ ಎಲ್ಲ ಸ್ಪರ್ಧೆಗಳು ನಾಳೆ ಫೆ.8 ರಿಂದ ಆರಂಭವಾಗಲಿದ್ದು, ಈ ಸ್ಪರ್ಧೆಯಲ್ಲಿ ಎಲ್ಲ 35 ಶೈಕ್ಷಣಿಕ ಜಿಲ್ಲೆಗಳ ವಿದ್ಯಾರ್ಥಿಗಳು ಭಾಗವಹಿಸುತ್ತಿದ್ದು, ಸ್ಪರ್ಧೆಗಳನ್ನು ಜೆ.ಎಸ್.ಎಸ್.ಕಾಲೇಜು ಆವರಣದ ಶ್ರೀ ಮಂಜುನಾಥೇಶ್ವರ ಆಂಗ್ಲ ಮಾಧ್ಯಮ ಪ್ರೌಢ ಶಾಲೆಯ ಕಟ್ಟಡದಲ್ಲಿ ಆಯೋಜಿಸಲಾಗಿದೆ.

6) ಚಿತ್ರಕಲೆ, ಚರ್ಚಾಸ್ಪರ್ಧೆ, ರಂಗೋಲಿ, ಕವನವಾಚನ ಸ್ಪರ್ಧೆಗಳು: ಈ ಎಲ್ಲ ಸ್ಪರ್ಧೆಗಳು ಇಂದು ಫೆ.8 ರಿಂದ ಆರಂಭವಾಗಲಿದ್ದು, ಈ ಸ್ಪರ್ಧೆಯಲ್ಲಿ ಎಲ್ಲ 35 ಶೈಕ್ಷಣಿಕ ಜಿಲ್ಲೆಗಳ ವಿದ್ಯಾರ್ಥಿಗಳು ಭಾಗವಹಿಸುತ್ತಿದ್ದು, ಸ್ಪರ್ಧೆಗಳನ್ನು ಜೆ.ಎಸ್.ಎಸ್.ಕಾಲೇಜು ಆವರಣದ ಶ್ರೀ ಮಂಜುನಾಥೇಶ್ವರ ಕನ್ನಡ ಮಾಧ್ಯಮ ಪ್ರೌಢ ಶಾಲೆಯ ಕಟ್ಟಡದಲ್ಲಿ ಆಯೋಜಿಸಲಾಗಿದೆ.

7) ಸಾಮೂಹಿಕ ವಿಭಾಗದ ಸ್ಪರ್ಧೆಗಳು;* ಈ ವಿಭಾಗದಲ್ಲಿ ಜಾನಪದ ನೃತ್ಯ, ಕವ್ವಾಲಿ, ಕ್ವಿಜ್ ಸ್ಪರ್ಧೆಗಳನ್ನು ಆಯೊಜಿಸಲಾಗುತ್ತಿದ್ದು, ಎಲ್ಲ 35 ಶೈಕ್ಷಣಿಕ ಜಿಲ್ಲೆಗಳ ವಿದ್ಯಾರ್ಥಿಗಳು ಭಾಗವಹಿಸುತ್ತಿವೆ.

ಜಾನಪದ ನೃತ್ಯ ಸ್ಪರ್ಧೆಯನ್ನು ಜೆ.ಎಸ್. ಎಸ್.ಕಾಲೇಜು ಆವರಣದ ಸನ್ನಿಧಿ ಕಲಾಕ್ಷೇತ್ರ ವೇದಿಕೆಯಲ್ಲಿ ಆಯೋಜಿಸಲಾಗಿದೆ. ಕವ್ವಾಲಿ ಸ್ಪರ್ಧೆಯನ್ನು ಶ್ರೀ ಮಂಜುನಾಥೇಶ್ವರ ಆಂಗ್ಲ ಮಾಧ್ಯಮ ಪ್ರೌಢ ಶಾಲೆಯ ಕಟ್ಟಡದ 8ಎ ಕೊಠಡಿಯಲ್ಲಿ ಆಯೋಜಿಸಲಾಗಿದೆ. ಮತ್ತು ಕ್ವಿಜ್ ಸ್ಪರ್ಧೆಯನ್ನು ಜೆ.ಎಸ್.ಎಸ್. ಕಾಲೇಜು ಆವರಣದ ಉತ್ಸವ ಹಾಲ್ದಲ್ಲಿ ಆಯೋಜಿಸಲಾಗಿದೆ.

ಸ್ಪರ್ಧಾಳುಗಳಿಗೆ ಅಗತ್ಯ ಮಾಹಿತಿ ನೀಡಲು ಜೆಎಸ್‌ಎಸ್ ಕಾಲೇಜು ಆವರಣದಲ್ಲಿ ಸುಮಾರು ಎಂಟು ಮಾಹಿತಿ ಕೇಂದ್ರಗಳನ್ನು ತೆರಯಲಾಗಿದೆ. 26 ವಿವಿಧ ಸ್ಪರ್ಧೆಗಳಲ್ಲಿ 1229 ಸ್ಪರ್ಧಾಳುಗಳು ಭಾಗವಹಿಸುತ್ತಿದ್ದು, 78 ಜನ ತಿಪುಗಾರರು ಫಲಿತಾಂಶ ನೀಡಲಿದ್ದಾರೆ ಎಂದು ಉಪನಿರ್ದೇಶಕ ಎಸ್.ಎಸ್.ಕೆಳದಿಮಠ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರೇಮಿ ಜತೆ ಓಡಿಹೋದ 2 ಮಕ್ಕಳ ತಾಯಿ: ಸಿಟ್ಟಿಗೆದ್ದ ಗಂಡನಿಂದ ಮನೆ ಧ್ವಂಸ

ಬೆಳಗಾವಿ: ಯಮಕನಮರಡಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ವಿವಾಹಿತ ಪ್ರೇಮಿಗಳು ಪರಾರಿಯಾದ ಘಟನೆ ಹುಕ್ಕೇರಿ ತಾಲೂಕಿನ ಜಿನ್ರಾಳ ಗ್ರಾಮದಲ್ಲಿ ನಡೆದಿದ್ದು, ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

ಹುಕ್ಕೇರಿ ತಾಲೂಕಿನ ಜಿನ್ರಾಳ ಗ್ರಾಮದಲ್ಲಿ ಇಬ್ಬರು ವಿವಾಹಿತರ ನಡುವಿನ ಪ್ರೇಮ ಕಥೆ. ಆದರೆ, ಸಮಸ್ಯೆ ಆಗಿದ್ದು ವೃದ್ಧ ಅಜ್ಜಿ, ತಾಯಿ ಮತ್ತು ಇತರರಿಗೆ. ಆತ ಇನ್ನೊಬ್ಬನ ಹೆಂಡತಿಯನ್ನು ಹಾರಿಸಿಕೊಂಡು ಹೋಗಿದ್ದ. ಇದರಿಂದ ಸಿಟ್ಟಿಗೆದ್ದ ಗಂಡ ಆತನ ಮನೆಯನ್ನೇ ಧ್ವಂಸಗೊಳಿಸಲು ಮುಂದಾಗಿದ್ದಾನೆ. ಮನೆಯ ಮೇಲೆ ಕಲ್ಲು ತೂರಿ, ಪೀಠೋಪಕರಣ, ಅಡುಗೆ ಸಾಮಗ್ರಿ ಸೇರಿದಂತೆ ಎಲ್ಲ ವಸ್ತುಗಳನ್ನು ಧ್ವಂಸ ಮಾಡಿದ್ದಾರೆ.

30ಕ್ಕೂ ಅಧಿಕ ಜನರು ಇರುವ ತಂಡ ಮನೆಯ ಮೇಲೆ ದಾಳಿ ಮಾಡಿದೆ.

ದುಷ್ಕರ್ಮಿಗಳು ಕೈಯಲ್ಲಿ ಕುಡುಗೋಲು, ಕೊಡ್ಲಿ, ಕಟ್ಟಿಗೆ ಹಿಡಿದುಕೊಂಡು ದಾಳಿ ಮಾಡಿದ್ದಾರೆ. ಹುಕ್ಕೇರಿ ತಾಲೂಕಿನ ಜಿನ್ರಾಳ ಗ್ರಾಮದಲ್ಲಿ ಇಬ್ಬರು ವಿವಾಹಿತೆ ತಾನು ಪ್ರೇಮಿಸುತ್ತಿದ್ದ ವಿವಾಹಿತ ಪುರುಷನೊಂದಿಗೆ ಪರಾರಿಯಾಗಿದ್ದಾಳೆ.



ಇದರಿಂದ ಸಿಟ್ಟಿಗೆದ್ದ ಗಂಡನ ಮನೆಯವರು ಪ್ರೇಮಿ ಯುವಕನ ಮನೆಗೆ ತಂಡ ಕಟ್ಟಿಕೊಂಡು ಹೋಗಿ ದಾಳಿ ಮಾಡಿದ್ದಾರೆ.

ಜಿನ್ರಾಳದ ರೇಣುಕಾ ವಾಲಿಕಾರ ಮತ್ತು ಲಗಮಣ್ಣ ವಾಲಿಕಾರ (34) ಎಂಬವರ ಮಧ್ಯೆ ಕಳೆದ ಕೆಲವು ಸಮಯದಿಂದ ಪ್ರೀತಿ–ಪ್ರಣಯ ಹರಡಿತ್ತು. ರೇಣುಕಾಗೆ ಮದುವೆಯಾಗಿ ಇಬ್ಬರು ಮಕ್ಕಳು ಇದ್ದಾರೆ. ಲಗಮಣ್ಣ ವಾಲಿಕಾರ ವಿವಾಹಿತ. ಅವನಿಗೆ ಮಗನಿದ್ದಾನೆ. ಅವರಿಬ್ಬರೂ ಪರಸ್ಪರ ಮಾತನಾಡಿಕೊಂಡು ಮಂಗಳವಾರ ರಾತ್ರಿ ಊರಿಂದಲೇ ಪರಾರಿಯಾಗಿದ್ದಾರೆ. ಇದರಿಂದ ಕೆರಳಿದ ಗಂಡನ ಮನೆಯವರು ರೇಣುಕಾಳ ಪ್ರೇಮಿಯ ಮನೆ ಮೇಲೆ ದಾಳಿ ಮಾಡಿದ್ದಾರೆ. ಲಗಮಣ್ಣ ವಾಲಿಕಾರ ಮನೆಯಲ್ಲಿ ತಾಯಿ ಶಾಂತವ್ವ ಮತ್ತು ಇತರರು ವಾಸವಾಗಿದ್ದಾರೆ. ರೇಣುಕಾ ಲಗಮಣ್ಣ ಜತೆ ಪರಾರಿಯಾಗಿದ್ದನ್ನು ತಿಳಿದ ಗಂಡನ ಮನೆಯವರು ಸೇರಿ ಶಾಂತವ್ವ ವಾಸವಿದ್ದ ಮನೆ ಮೇಲೆ ದಾಳಿ ಮಾಡಿದ್ದಾರೆ. ಮನೆಯಲ್ಲಿ ಲಗಮಣ್ಣ ವಾಲೀಕಾರನ ತಾಯಿ, ಅಜ್ಜಿ ಮತ್ತು ಹೆಂಡತಿ ಹಾಗೂ ಮಗ ಇದ್ದರು. ಅವರು ಹತ್ತಾರು ಮಂದಿ ಮನೆಯತ್ತ ಧಾವಿಸಿ ಬರುತ್ತಿರುವ ಸುದ್ದಿ ಕೇಳಿ ಪಕ್ಕದ ಮನೆಯಲ್ಲಿ ಅಡಗಿ ಕುಳಿತಿದ್ದರು. ಹೀಗಾಗಿ ಅವರ ಪ್ರಾಣಕ್ಕೆ ಏನೂ ಅಪಾಯ ಉಂಟಾಗಿಲ್ಲ. ಮಗ ಮಾಡಿದ ತಪ್ಪಿಗೆ ತಾಯಿಯ ಮನೆಯನ್ನ ನಾಶ ಮಾಡಿದ ದುಷ್ಕರ್ಮಿಗಳು ಮನೆಯನ್ನು ಬಹುತೇಕ ಧ್ವಂಸಗೊಳಿಸಿದ್ದಾರೆ.

ಮಹಿಳೆಯ ಮಾವ ಸಾಮಯ್ಯ ವಾಲಿಕಾರ, ಕೆಂಪಣ್ಣ ವಾಲಿಕಾರ, ರೇಣುಕಾ ಗಂಡ ದುಂಡಪ್ಪ ಫಕ್ಕೀರಪ್ಪ ವಾಲಿಕಾರ, ಭಾಮೈದ ನಿಂಗಪ್ಪ ವಾಲಿಕಾರ, ಭರಮಾ ವಾಲಿಕಾರ, ಹನುಮಂತ ಲಗಮಾ ವಾಲಿಕಾರ, ನಿಂಗಪ್ಪ ಲಗಮಾ ವಾಲಿಕಾರ, ಲಗಮಾ ಯಲಗುಂಡ ವಾಲಿಕಾರ ಸೇರಿ ಹಲವರಿಂದ ದಾಳಿ ನಡೆದಿದೆ ಎಂದು ದೂರು ನೀಡಲಾಗಿದೆ.

ಕರ್ನಾಟಕ ಸರ್ಕಾರ
ಪಟ್ಟಣ ಪಂಚಾಯತ ಕಾರ್ಯಲಯ, ಚಿಂಚಲಿ–591217
ಜಿಲ್ಲೆ : ಬೆಳಗಾವಿ, ರಾಜ್ಯ: ಕರ್ನಾಟಕ
Website: www.chinchallitown.gov.in E-Mail ltstaff_ulb_chinchallitown@yahoo.co.in

ಕ್ರ.ಸಂ.ಪ.ಪಂ.ಚಿ./ತಾಂತ್ರಿಕ/ಸಿಆರ್–2023–24/ ದಿನಾಂಕ:05–02–2024

**ಅಲ್ಪಾವಧಿ ಟೆಂಡರ ಪ್ರಕಟಣೆ (ಕೆ.ಪಿ.ಪಿ. ಪೋರ್ಟಲ್ ಮೂಲಕ)**

ಚಿಂಚಲಿ ಪಟ್ಟಣ ಪಂಚಾಯತಗೆ ಸನ್ 2023–24 ನೇ ಸಾಲಿನ ಎಸ್.ಎಫ್.ಸಿ ಮುಕ್ತನಿಧೀ, ಮತ್ತು 15 ನೇ ಹಣಕಾಸು ಆಯೋಗದ ಹಾಗೂ ಸನ್ 2021–22 ನೇ ಸಾಲಿನ 15 ನೇ ಹಣಕಾಸು ಆಯೋಗದ ಉಳಿತಾಯ ಅನುದಾನದಲ್ಲಿ ಕಾಮಗಾರಿಗಳ ಕುರಿತು ಕೆ.ಪಿ.ಪಿ. ಪೋರ್ಟಲ್‌ನಲ್ಲಿ ಇಂಡೆಂಟ್ ನಂ. IND0955, 13418, 8584/Call-3 ಮುಖಾಂತರ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಆಧ್ಯಾದೇಶ 1999 ಮತ್ತು ನಿಯಮಗಳು 2000 ದಂತೆ ಕರ್ನಾಟಕ ಲೋಕೋಪಯೋಗಿ ಮತ್ತು ಕೆ.ಪಿ.ಪಿ. ಪೋರ್ಟಲ್‌ನಲ್ಲಿ ನೊಂದಾಯಿತ ಅರ್ಹ ಸಿವಿಲ್/ಸಂಸ್ಥೆ ಗುತ್ತಿಗೆದಾರರುಗಳಿಂದ ಐಟಂವಾರು ಟೆಂಡರಗಳನ್ನು ಅಹ್ವಾನಿಸಲಾಗಿದ್ದು, ಗುತ್ತಿಗೆದಾರರು ತಮ್ಮ ದರ ನಮೂದಿಸಿದ ಟೆಂಡರಗಳನ್ನು ಕೆ.ಪಿ.ಪಿ. ಪೋರ್ಟಲ್ ಈ ಕೆಳಗೆ ನಿಗದಿಪಡಿಸಿದ ದಿನಾಂಕಗಳಂದು ಸಂಜೆ:4.00 ಗಂಟೆಯೊಳಗೆ ಆನ್‌ಲೈನ್ ಸಲ್ಲಿಸತಕ್ಕದ್ದು ಕಾಮಗಾರಿಗಳ ವಿವರ ವೆಬ್‌ಸೈಟ www.chinchalitown.mrc.gov.in ಮತ್ತು https://kppp.karnataka.gov.in/ ಗಳಲ್ಲಿ ವಿಕ್ಷಿಸಬಹುದಾಗಿದ್ದು, ಟೆಂಡರ ಸಲ್ಲಿಸಲು ಕೊನೆಯ ದಿನಾಂಕ:13–02–2024 ಹಾಗೂ ಟೆಂಡರ ತೆರೆಯುವ ದಿನಾಂಕ:14–02–2024 ನಿಗದಿಪಡಿಸಿಲಾಗಿದೆ.

ಸಹಿ/–ಮುಖ್ಯಾಧಿಕಾರಿಗಳು
ಪಟ್ಟಣ ಪಂಚಾಯತ ಚಿಂಚಲಿ

DIPR/BGM/RO-NO-1072/KSMCA/2023-24

# ಸಂವಿಧಾನ ಜಾಗೃತಿ ಜಾಥಾ: ಸಿರುಗುಪ್ಪ ಪಟ್ಟಣದಲ್ಲಿ ಸಂಭ್ರಮದ ಸೊಬಗು

ಬಳ್ಳಾರಿ: ಸಂವಿಧಾನ ಅಂಗೀಕಾರಗೊಂಡು 75 ವರ್ಷ ಪೂರೈಸಿದ ಹಿನ್ನಲೆಯಲ್ಲಿ ರಾಜ್ಯ ಸರ್ಕಾರದ ನಿರ್ದೇಶನದಂತೆ, ಸಂವಿಧಾನ ಜಾಗೃತಿ ಜಾಥಾವು ಜಿಲ್ಲೆಯಾದ್ಯಂತ ನಡೆಯುತ್ತಿದ್ದು, ಇದರ ಅಂಗವಾಗಿ ಮಂಗಳವಾರದಂದು ಸಿರುಗುಪ್ಪ ತಾಲ್ಲೂಕಿನ ಬಲಕುಂದಿ, ಹಳೇಕೋಟೆ ಗ್ರಾಮಗಳ ಗ್ರಾಮ ಪಂಚಾಯಿತಿಗಳ ಮಾರ್ಗದಲ್ಲಿ ಮತ್ತು ಕೊನೆಯಲ್ಲಿ ಸಿರುಗುಪ್ಪ ಪಟ್ಟಣದ ವಿವಿಧ ವಾರ್ಡ್ಗಳಲ್ಲಿ ಸಂಚರಿಸಿ ಸಂಭ್ರಮದ ವಾತಾವರಣ ಮನೆಮಾಡಿತು.

ಜಾಥಾವನ್ನು ಪ್ರತೀ ಗ್ರಾಮ ಪಂಚಾಯಿತಿಗಳಲ್ಲಿಯೂ ಕಳಶ, ಪೂರ್ಣ ಕುಂಭ ಹೊತ್ತ ಮಹಿಳೆಯರು, ವಿವಿಧ ಸಂಸ್ಕೃತಿಕ ಕಲಾವಿದರು, ಶಾಲಾ ಶಿಕ್ಷಕರು ಮತ್ತು ವಿದ್ಯಾರ್ಥಿಗಳು, ಗ್ರಾಮದ ಜನಪ್ರತಿನಿಧಿಗಳು, ಊರಿನ ಮುಖಂಡರು ಹಾಗೂ ಸಾರ್ವಜನಿಕರು ಅದ್ದೂರಿಯಾಗಿ



ಸ್ವಾಗತಿಸಿದರು.

ಸಿರುಗುಪ್ಪ ಪಟ್ಟಣದ ಮುಖ್ಯ ರಸ್ತೆಯಲ್ಲಿ ನಿರಂತರ ಒಂದು ಕಿಲೋಮೀಟರ್ ಉದ್ದಕ್ಕೂ ಜನಗಳಿಂದ ಕೂಡಿದ ಸಂವಿಧಾನದ ಜಾಗೃತಿ ಜಾಥಾದ ಮೆರವಣಿಗೆಯಲ್ಲಿ ಎಲ್ಲಾ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳು, ವಿವಿಧ ಸಂಘ ಸಂಸ್ಥೆಗಳ ಮುಖಂಡರು, ತಹಶೀಲ್ದಾರರು, ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕಾಧಿಕಾರಿಗಳು, ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗ, ಮುಖಂಡರು ಪಾಲ್ಗೊಂಡಿದ್ದು ವಿಶೇಷವಾಗಿತ್ತು.

ಹಳೇಕೋಟೆ ಗ್ರಾಮದಲ್ಲಿ ಗ್ರಾಮಸ್ಥ ನಂದೀಶ ಅವರು ಮಾತನಾಡಿ, ಪ್ರತಿಯೊಬ್ಬರೂ ಸಂವಿಧಾನದ ಬಗ್ಗೆ ಅರಿಯಬೇಕು. ಡಾ.ಬಿ.ಆರ್. ಅಂಬೇಡ್ಕರ್ ಅವರು ಬರೆದ ಸಂವಿಧಾನವು ಸರ್ವರ ಅಭಿವೃದ್ಧಿಯನ್ನು ಒಳಗೊಂಡಿದೆ. ಶಿಕ್ಷಕರು ವಿದ್ಯಾರ್ಥಿಗಳಿಗೆ ಸಂವಿಧಾನದ ಬಗ್ಗೆ ಜಾಗೃತಿ ಮೂಡಿಸಬೇಕು ಎಂದು ಅಭಿಪ್ರಾಯ ಪಟ್ಟರು.

ಹಳೇಕೋಟೆ ಗ್ರಾಮದ ಶಿಕ್ಷಕ ದುರ್ಗಪ್ಪ ಅವರು ಮಾತನಾಡಿ, ಸಂವಿಧಾನವು ಪ್ರತಿಯೊಬ್ಬ ಪ್ರಜೆಗೂ ವ್ಯಕ್ತಿ ಗೌರವ, ಸಮಾನತೆ, ಸ್ವಾತಂತ್ರ್ಯ ನೀಡಿದೆ. ಆದ್ದರಿಂದ ಸಂವಿಧಾನವನ್ನು ಎಲ್ಲರೂ ಗೌರವಿಸಬೇಕು ಎಂದು ಕರೆ ನೀಡಿದರು.

ಜಾಥಾದುದ್ದಕ್ಕೂ ಸಂವಿಧಾನದ ಆಶಯ ಮತ್ತು ಮೌಲ್ಯಗಳ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಯಿತು. ಸಂವಿಧಾನ ರಚನಾ ಸಭೆ ಹಾಗೂ ಸಂವಿಧಾನದ ಕುರಿತ ವೀಡಿಯೋ ತುಣುಕುಗಳನ್ನು ಸಾರ್ವಜನಿಕರಿಗೆ ಪ್ರದರ್ಶಿಸಲಾಯಿತು. ಸಂವಿಧಾನ ಪ್ರಸ್ತಾವನೆಯ ಪ್ರತಿಜ್ಞಾ ವಿಧಿಯನ್ನು ಸ್ವೀಕರಿಸಿ ಜಾಥಾದ ಉದ್ದಕ್ಕೂ ಸಂವಿಧಾನ ಪ್ರಸ್ತಾವನೆಯ ಪ್ರತಿಗಳನ್ನು ಹಂಚಿಕೆ ಮಾಡಲಾಗಿದೆ.

ಈ ಸಂದರ್ಭದಲ್ಲಿ ಸಿರುಗುಪ್ಪ ತಹಶೀಲ್ದಾರ ವಿಶ್ವನಾಥ, ತಾಲ್ಲೂಕು ಪಂಚಾಯಿತಿಂ ಕಾರ್ಯನಿರ್ವಾಹಕಾಧಿಕಾರಿಗಳು, ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಮಾಜ ಕಲ್ಯಾಣ ಇಲಾಖೆಯ ಸಿಬ್ಬಂದಿ ವರ್ಗದವರು, ಶಾಲಾ ವಿದ್ಯಾರ್ಥಿಗಳು, ಶಿಕ್ಷಕರು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ವಿವಿಧ ಇಲಾಖೆಗಳ ಸಿಬ್ಬಂದಿ ವರ್ಗದವರು, ಗ್ರಾಮ ಪಂಚಾಯಿತಿಗಳ ಜನಪ್ರತಿನಿಧಿಗಳು ಹಾಗೂ ಸಾರ್ವಜನಿಕರು ಪಾಲ್ಗೊಂಡಿದ್ದರು.

## ಸಂವಿಧಾನ ಜಾಗೃತಿ ಜಾಥಾ

ಬೆಳಗಾವಿ: ಸಂವಿಧಾನದ ಮೌಲ್ಯ ಮತ್ತು ಅದರ ಆಶಯಗಳನ್ನು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಮತ್ತು ಸಮಾಜ ಕಲ್ಯಾಣ ಇಲಾಖೆ ಬೆಳಗಾವಿ ಇವರ ಸಂಯುಕ್ತ ಆಶ್ರಯದಲ್ಲಿ ಜಿಲ್ಲೆಯ ಎಲ್ಲ ಗ್ರಾಮ ಪಂಚಾಯತಿ ಮತ್ತು ನಗರ ಸ್ಥಳೀಯ ಸಂಸ್ಥೆಗಳಿಗೆ ಸ್ತಬ್ದ ಚಿತ್ರಗಳನ್ನೊಳಗೊಂಡ ವಿಶೇಷ ರಥಗಳೆರೆಡು ಏಕಕಾಲಕ್ಕೆ ಎರಡು ಮಾರ್ಗದಲ್ಲಿ ಸಂಚರಿಸುವದರ ಮೂಲಕ ಸಂವಿಧಾನ ಜಾಗೃತಿ ಜಾಥ ಹಮಿಕೊಳ್ಳಲಾಗಿದೆ.



ಗಣರಾಜ್ಯೋತ್ಸವದ ದಿನದಂದು ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ ಜಾರಕಿಹೊಳಿ ಅವರು ಸ್ಥಬ್ದಚಿತ್ರದ ಮೆರವಣಿಗೆಗೆ ಚಾಲನೆ ನೀಡಿದರು.

ಫೆ.6 ರಂದು ಮೊದಲ ಮಾರ್ಗದ ರಥವು ಹುಕ್ಕೇರಿ ತಾಲೂಕಿನ ಕಣಗಲಾ, ನಿಪ್ಪಾಣಿ ತಾಲೂಕಿನ ಯರನಾಳ, ಶೆಂಡೂರ, ಶಿರಗುಪ್ಪಿ, ನಿಪ್ಪಾಣಿ, ಕೊಡಣಿ, ಯಮಗರ್ಣಿ, ಲಖನಾಪೂರ ಗ್ರಾಮ ಪಂಚಾಯತಿ ಮೂಲಕ ಸಂಚರಿಸಿ ಫೆ.07 ರಂದು ನಿಪ್ಪಾಣಿ ತಾಲೂಕಿನ ಜಾತ್ರಾಟ, ಸೌಂದಲಗಾ, ಕುರಲಿ, ಆಡಿ, ಅಪ್ಪಾಚಿವಾಡಿ, ಕೊಗನೊಳ್ಳಿ, ಬೆನ್ನಾಡಿ, ಕುನ್ನೂರ, ಮಾಗನೂರ, ಬರವಾಡ, ಕಾರದ್ವಾಡ, ಕಾರದಗಾ ಮತ್ತು ಡೋಣೆವಾ ಡಿಗ್ರಾಮ ಪಂಚಾಯತಿಗಳಿಗೆ ತೆರಳಿದೆ.

ಅದೇ ರೀತಿಯಾಗಿ ಎರಡನೇ ಮಾರ್ಗ ದರಥವು ರಾಮದುರ್ಗ ತಾಲೂಕಿನ ಕೆ.ಜುನೇಪೇಠ, ಅರಟಗಲ್, ಬಂದರಹಳ್ಳಿ, ಗೋರಬಾಳ, ಶಿರಸಂಗಿ, ಹೂಲಿಕಟ್ಟಿ, ಹೂಲಿ, ಕಾಗದಾಳ, ಚುಳ್ಕಿ ಮತ್ತು ಉಗರಗೋಳ ಗ್ರಾಮ ಪಂಚಾಯತಿಗಳ ಮೂಲಕ ಸಂಚರಿಸಿ ಸವದತ್ತಿ ತಾಲೂಕಿನ ಹಂಚಿನಾಳ, ಹಿರೇಕುಂಬಿ, ಬೆಟಸೂರ, ಸವದತ್ತಿ–ಯಲ್ಲಮ್ಮ, ಗೊರವನಕೊಳ್ಳ, ಶಿಂದೋಗಿ, ಮುನವಳ್ಳಿ, ತೆಗ್ಗಿಹಾಳ ಮತ್ತು ಮಾಬನೂರ ಗ್ರಾಮ ಪಂಚಾಯತಿಗಳಿಗೆ ತೆರಳಿತು.

ಸಂವಿಧಾನ ಜಾಗೃತಿ ಜಾಥಾದಲ್ಲಿ ಅಧಿಕ ಸಂಖ್ಯೆಯಲ್ಲಿ ಸಾರ್ವಜನಿಕರು, ಸ್ವ–ಸಹಾಯ ಸಂಘಗಳು, ಜನಪ್ರತಿನಿಧಿಗಳು, ವಿದ್ಯಾರ್ಥಿಗಳು ಭಾಗವಹಿಸಿ ಯಶಸ್ವಿಗೊಳಿಸಿದರು.



## ಸೊರಬದಲ್ಲಿ ಸಂವಿಧಾನ ಜಾಗೃತಿ ಜಾಥಾ ಪ್ರಯುಕ್ತ ಆಟೋ ರ್‍ಯಾಲಿ

ಶಿವಮೊಗ್ಗ: ಸಂವಿಧಾನ ಜಾಗೃತಿ ಜಾಥಾ ಪ್ರಯುಕ್ತ ಸೊರಬದಲ್ಲಿ ಸಮಾಜ ಕಲ್ಯಾಣ ಇಲಾಖೆ ಮತ್ತು ಪುರಸಭೆ ವತಿಯಿಂದ ಫೆ.6 ರಂದು ಆಟೋ ರ್‍ಯಾಲಿ ನಡೆಸಿ ಸಂವಿಧಾನದ ಕುರಿತು ಅರಿವು ಮೂಡಿಸಲಾಯಿತು. ರ್‍ಯಾಲಿಯು ಸೊರಬ ಪುರಸಭೆ ಮುಂಭಾಗದಿಂದ ಹೊರಟು ಪಟ್ಟಣದ ಪ್ರಮುಖ ವೃತ್ತಗಳಲ್ಲಿ ಸಾಗಿ ಬಂದಿತು.

ರ್‍ಯಾಲಿಯಲ್ಲಿ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಇಕ್ಬಾಲ್ ಜಾತಿಗೇರ್, ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಪುರಸಭೆ ಸಿಬ್ಬಂದಿಗಳು, ಆಟೋ ಚಾಲಕರು, ಸಾರ್ವಜನಿಕರು ಪಾಲ್ಗೊಂಡಿದ್ದರು.

# ಮಹನೀಯರ ಜಯಂತಿ ಅರ್ಥಪೂರ್ಣ ಆಚರಣೆಗೆ ನಿರ್ಧಾರ

ಬಳ್ಳಾರಿ: ಜಿಲ್ಲಾಡಳಿತದಿಂದ ಸಂತ ಸೇವಾಲಾಲ್, ಸವಿತಾ ಮಹರ್ಷಿ, ಛತ್ರಪತಿ ಶಿವಾಜಿ ಮತ್ತು ಸರ್ವಜ್ಞ ಜಯಂತಿ ಸೇರಿದಂತೆ ಮಹನೀಯರ ಜಯಂತಿಗಳನ್ನು ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಮೊಹಮ್ಮದ್ ಝುಬೇರ್ ಅವರು ಹೇಳಿದರು.

ಬುಧವಾರದಂದು, ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ಮಹನೀಯರ ಜಯಂತಿ ಪೂರ್ವಭಾವಿ ಸಭೆಯಲ್ಲಿ ನಿರ್ಧಾರ ಕೈಗೊಳ್ಳಲಾಯಿತು.

ಫೆ.15 ರಂದು ಶ್ರೀ ಸಂತ ಸೇವಾಲಾಲ್ ಜಯಂತಿಯನ್ನು ವಾಲ್ಮೀಕಿ ಸಮುದಾಯ ಭವನದಲ್ಲಿ, ಫೆ.16 ರಂದು ಸವಿತಾ ಮಹರ್ಷಿ ಜಯಂತಿಯನ್ನು ಬಿಡಿಎಎ ಫುಟ್ಬಾಲ್ ಮೈದಾನ ಸಭಾಂಗಣದಲ್ಲಿ, ಫೆ.19 ರಂದು ಸಂಜೆ ಛತ್ರಪತಿ ಶಿವಾಜಿ ಜಯಂತಿಯನ್ನು ಬಿಡಿಎಎ ಫುಟ್ಬಾಲ್



ಮೈದಾನ ಸಭಾಂಗಣ ಮತ್ತು ಫೆ.20 ರಂದು ಸರ್ವಜ್ಞ ಜಯಂತಿಯನ್ನೂ ಬಿಡಿಎಎ ಫುಟ್ಬಾಲ್ ಮೈದಾನ ಸಭಾಂಗಣದಲ್ಲಿ ಅರ್ಥಪೂರ್ಣ ಆಚರಣೆಗೆ ಕ್ರಮ ವಹಿಸಲಾಗುವುದು ಎಂದರು.

ಜಯಂತಿ ಕಾರ್ಯಕ್ರಮಗಳಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳು ಕಡ್ಡಾಯವಾಗಿ ಹಾಜರಿರಬೇಕು. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಹಾಗೂ ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಸೂಚಿಸಿದರು.

ಜಯಂತಿ ಆಚರಣೆ ಸಂದರ್ಭದಲ್ಲಿ ಶಿಷ್ಟಾಚಾರ ಪಾಲನೆ, ಆಹ್ವಾನ ಪತ್ರಿಕೆ, ವಿಶೇಷ ಉಪನ್ಯಾಸ, ವಚನ ಗಾಯನ ಸೇರಿದಂತೆ ಎಲ್ಲವೂ ಸರಿಯಾಗಿ ನಿರ್ವಹಿಸಬೇಕು. ಅದೇ ರೀತಿ ವೇದಿಕೆ, ಕುಡಿಯುವ ನೀರು, ಧ್ವನಿವರ್ಧಕ, ಸ್ವಚ್ಚತೆ ಮತ್ತು ಸೂಕ್ತ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡುವಂತೆಯೂ ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಿದರು.

ಮಹಾನ್ ವ್ಯಕ್ತಿಗಳ ವಿಚಾರಧಾರೆಗಳನ್ನು ಇಂದಿನ ಪೀಳಿಗೆಗೆ ಪರಿಚಯಿಸುವ ಅಗತ್ಯವಿದ್ದು, ಈ ನಿಟ್ಟಿನಲ್ಲಿ ನುರಿತ ಉಪನ್ಯಾಸಕರಿಂದ ವಿಶೇಷ ಉಪನ್ಯಾಸ ಆಯೋಜಿಸಲಾಗುವುದು. ಜಯಂತಿ ಮೆರವಣಿಗೆಯಲ್ಲಿ ವಿವಿಧ ಸಾಂಸ್ಕೃತಿಕ ಕಲಾತಂಡಗಳನ್ನು ನಿಯೋಜಿಸಲಾಗುವುದು. ಸಮುದಾಯದಲ್ಲಿ ಅತಿಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳು ಮತ್ತು ಪಿಹೆಚ್ಡಿ ಪದವಿ ಪಡೆದ ಅಭ್ಯರ್ಥಿಗಳಿದ್ದರೆ ಸನ್ಮಾನಿಸಲಾಗುವುದು ಎಂದರು.

ಸಭೆಯಲ್ಲಿ ಸಮುದಾಯದ ಮುಖಂಡರು, ಜನ ಪ್ರತಿನಿಧಿಗಳು ಜಯಂತಿಗಳ ಆಚರಣೆಯ ಕುರಿತು ತಮ್ಮ ಸಲಹೆ ನೀಡಿದರು.

ಈ ವೇಳೆ ಕನ್ನಡ ಮತ್ತು ಸಾಂಸ್ಕೃತಿಕ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು, ಸಮುದಾಯದ ಮುಖಂಡರು, ಜನ ಪ್ರತಿನಿಧಿಗಳು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

## ದೇಶದ 12 ಜ್ಯೋತಿರ್ ಲಿಂಗಗಳಿಗೆ ಬೈಕ್ ಮೂಲಕ ಸಾಹಸಮಯವಾಗಿ ಧಾರ್ಮಿಕ ಯಾತ್ರೆ ಕೈಗೊಂಡ ಮೈಕ್ರೋಲ್ಯಾಬ್ಸ್ ನ ಪ್ರವೀಣ್ ಸಿಂಗ್

ಬೆಂಗಳೂರು: ದೇಶದ ಪ್ರತಿಷ್ಠಿತ ಔಷಧಿ ಕಂಪೆನಿಯಾದ ಮೈಕ್ರೋ ಲ್ಯಾಬ್ಸ್ ಮಾರುಕಟ್ಟೆ ಮತ್ತು ಮಾರಾಟ ವಿಭಾಗದ ಉಪಾಧ್ಯಕ್ಷ ಪ್ರವೀಣ್ ಸಿಂಗ್ ಅಸಮಾನ್ಯ ಅಭಿಯಾನವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ್ದಾರೆ. ಭಾರತದಾದ್ಯಂತ ಇರುವ 12 ಜ್ಯೋತಿರ್ಲಿಂಗಗಳನ್ನು ಬೈಕ್ ಮೂಲಕ ಸುತ್ತಾಡಿ ಗಮನ ಸೆಳೆದಿದ್ದಾರೆ. ಧಾರ್ಮಿಕ ಪ್ರವಾಸಕ್ಕೆ ಹೊಸ ಆಯಾಮ ನೀಡಿದ್ದಾರೆ.

ಪ್ರವೀಣ್ ಸಿಂಗ್ ಅವರಿಗೆ ಬೈಕ್ ರೈಡಿಂಗ್ ಪ್ರವೃತ್ತಿಯಾಗಿದ್ದು, "ಉದ್ದೇಶದಿಂದ ಬೈಕ್ ಚಾಲನೆ–ರೈಡ್ ವಿತ್ ಪರ್ಪಸ್" ಎಂಬುದು ಅವರ ಧ್ಯೇಯವಾಕ್ಯ. ಇದೇ ಸದಾಶಯದೊಂದಿಗೆ ಅವರು ಸಾಂಸ್ಕೃತಿಕ ಮತ್ತು ಧಾರ್ಮಿಕ ಶ್ರೀಮಂತಿಕೆಯ ಸ್ಥಳಗಳಿಗೆ ಭೇಟಿ ನೀಡುತ್ತಾರೆ. 12 ಜ್ಯೋತಿರ್ಲಿಂಗಗಳನ್ನು ಭಗವಾನ್ ಶಿವನ ಅಭಿವ್ಯಕ್ತಿಗಳಾಗಿ ಪೂಜಿಸಲಾಗುತ್ತದೆ.

ಈ ದೇವಾಲಯಗಳಲ್ಲಿನ ಪ್ರಾಥಮಿಕ ಚಿತ್ರಣವೆಂದರೆ ಲಿಂಗ. ಇದು ಶಿವನ ಅನಂತ ಸ್ವಭಾವವನ್ನು ಸಂಕೇತಿಸುತ್ತದೆಯಲ್ಲದೇ ದೈವಿಕ ಶಕ್ತಿಯನ್ನು ಹೊರ ಸೂಸುತ್ತದೆ. ಜ್ಯೋತಿರ್ ಲಿಂಗ ಶಬ್ದ ಶಿವನ ವಿಕಿರಣಗಳ ಸೂಚಕವಾಗಿವೆ. ಈ



ಸ್ಥಳಗಳು ದೈವಿಕ ಬೆಳಕು ಮತ್ತು ಮಹತ್ವವನ್ನು ಸಾರುತ್ತವೆ.

ಇಂತಹ ಮಹತ್ವದ ಮತ್ತು ಪವಿತ್ರ ಯಾತ್ರಾ ಸ್ಥಳಗಳಾದ 12 ಜ್ಯೋತಿರ್ ಲಿಂಗಗಳ ದರ್ಶನವನ್ನು ಪ್ರವೀಣ್ ಅವರು 20 ದಿನಗಳಲ್ಲಿ ಪೂರ್ಣಗೊಳೀಸಿದರು.

ಒಟ್ಟು 8,500 ಕಿಲೋಮೀಟರ್ ಗೂ ಅಧಿಕ ದೂರದ ಪಯಣವನ್ನು ಫಲಪ್ರದವಾಗಿ ಪೂರ್ಣಗೊಳಿಸಿದರು. ಇದು ಕೇವಲ ಬೈಕ್ ಸವಾರಿಯಲ್ಲ. ನಮ್ಮ ಸಂಸ್ಕೃತಿಯಲ್ಲಿ ಹುದುಗಿರುವ ಆಧ್ಯಾತ್ಮಿಕ ಪರಂಪರೆಯನ್ನು ಬೆಳಗಿಸುವ, ಜ್ಯೋತಿರ್ಲಿಂಗಗಳು ದೈವಿಕ ಶಕ್ತಿಯ ರೂಪಕಗಳು.

ಯುವ ಸಮೂಹವನ್ನು ಪ್ರೇರೇಪಿಸುವುದು ನಮ್ಮ ಗುರಿಯಾಗಿದೆ. ಶ್ರೀಮಂತ ಪರಂಪರೆಯನ್ನು ರಕ್ಷಿಸುವ ಉದ್ದೇಶದಿಂದ ಇಂತಹ ಧಾರ್ಮಿಕ ಸಾಹಸ ಯಾತ್ರೆ ಕೈಗೊಂಡಿದ್ದಾಗಿ ಅವರು ಹೇಳಿದರು.

ಮೈಕ್ರೋ ಲ್ಯಾಬ್ಸ್ ನ ಮಾನವ ಸಂಪನ್ಮೂಲ ವಿಭಾಗದ ಉಪಾಧ್ಯಕ್ಷ ವಿ.ಆರ್. ರಾಮಕೃಷ್ಣ ಮಾತನಾಡಿ, "ಬೈಕ್ ಸವಾರಿ ವಾರಾಂತ್ಯದಲ್ಲಿ ಊಟ, ಉಪಹಾರಕ್ಕಾಗಿ ಅಲ್ಲ, ಜನಪ್ರಿಯ ತಾಣಗಳ ವೀಕ್ಷಣೆಗೂ ಅಲ್ಲ. ಆದರೆ ಪ್ರವೀಣ್ ಅವರು ಸ್ಫೂರ್ತಿದಾಯಕವಾಗಿ ಧಾರ್ಮಿಕ ಪ್ರವಾಸವನ್ನು ಯಶಸ್ವಿಯಾಗಿ ಪೂರ್ಣ ಗೊಳಿಸಿದ್ದಾರೆ. ವೈಯಕ್ತಿಕ ಭಾವನೆಗಳನ್ನು ಸಾಕಾಗೊಳಿಸುವ ಜೊತೆಗೆ ಕೆಲಸದ ಬದ್ಧತೆಯನ್ನು ಸಮರ್ಥವಾಗಿ ಸಮತೋಲನವೊಗಳಿಸುವ ಪ್ರವೀಣ್ ಅವರಂತಹ ವ್ಯಕ್ತಿಗಳನ್ನು ನಾವು ಪ್ರಶಂಸಿಸುತ್ತೇವೆ ಎಂದರು.



## ಸಂವಿಧಾನ ಜಾಗೃತಿ ಜಾಥಾ

ಶಿವಮೊಗ್ಗ: ಸಮಾಜ ಕಲ್ಯಾಣ ಇಲಾಖೆ ಮತ್ತು ಸಾಗರದ ಸಂಜಯ್ ಮೆಮೋರಿಯಲ್ ಪಾಲಿಟೆಕ್ನಿಕ್ ಕಾಲೇಜು ವತಿಯಿಂದ ಕಾಲೇಜಿನ ಆವರಣದಿಂದ ಇಂದು ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮವನ್ನು ಏರ್ಪಡಿಸಿ ಸಂವಿಧಾನದ ಕುರಿತು ಅರಿವು ಮೂಡಿಸಲಾಯಿತು. ಈ ವೇಳೆ ನಗರಸಭೆ ಆಯುಕ್ತರಾದ ನಾಗಪ್ಪ, ಕಾಲೇಜಿನ ಪ್ರಾಂಶುಪಾಲ ವಿಶ್ವನಾಥ ಹೆಗಡೆ, ಡಿಎಸ್ಎಸ್ ತಾಲ್ಲೂಕು ಸಂಚಾಲಕ ಲಕ್ಷ್ಮಣ್ ಸಾಗರ, ಉಪನ್ಯಾಸಕ ರವಿ ಜಂಬಗಾರು,ವಿದ್ಯಾರ್ಥಿಗಳು, ಸಾರ್ವಜನಿಕರು ಭಾಗವಹಿಸಿದ್ದರು.

## ಬಳ್ಳಾರಿ: ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ಫೆ.09 ರಂದು ಜೀತ ಪದ್ಧತಿ ನಿರ್ಮೂಲನಾ ದಿನ ಆಚರಣೆಗೆ ಸೂಚನೆ

ಬಳ್ಳಾರಿ: ಜಿಲ್ಲೆಯ ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ಫೆ.09 ರಂದು ಜೀತ ಪದ್ಧತಿ ನಿರ್ಮೂಲನಾ ದಿನಾಚರಣೆ ಆಚರಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಮೊಹಮ್ಮದ್ ಝುಬೇರ್ ಅವರು ತಿಳಿಸಿದ್ದಾರೆ.

ಜೀತ ಪದ್ಧತಿಯಲ್ಲಿ ಹಾಗೂ ವರ್ತಮಾನದಲ್ಲಿ ಮಾನವ ಕಳ್ಳ ಸಾಗಾಣಿಕೆ ಇಂತಹ ಮಾನವ ಹಕ್ಕುಗಳ ಉಲ್ಲಂಘನೆ ಅಪರಾಧ ತಡೆಗಳಿಗಾಗಿ ಜೀತ ಪದ್ಧತಿ(ರದ್ದತಿ) ಕಾಯ್ದೆ 1976 ಯನ್ನು ದೇಶಾದ್ಯಂತ ಜಾರಿ ಮಾಡಲು ದಿನಾಂಕ:09.02.1976 ರಂದು ಅಂದಿನ ರಾಷ್ಟ್ರಪತಿಗಳು ಅಂಕಿತ ಹಾಕಿರುತ್ತಾರೆ. ಅಂದಿನಿಂದ ರಾಜ್ಯದಲ್ಲಿ ಜೀತ ಪದ್ಧತಿ ನಿರ್ಮೂಲನೆಗಾಗಿ ಜೀತ ಪದ್ಧತಿ ನಿರ್ಮೂಲನಾ ದಿನಾಚರಣೆಯನ್ನು ಆಚರಿಸುವ ಸಂಬಂಧ ದಿನಾಂಕ:18.02.2023 ರಂದು ಕರ್ನಾಟಕ ಗೆಜೆಟ್ನಲ್ಲಿ ಅಧಿಸೂಚನೆಯೂ ಹೊರಡಿಸಲಾಗಿದೆ.

ಆದ್ದರಿಂದ ಜಿಲ್ಲೆಯ ಎಲ್ಲಾ ಕಚೇರಿಗಳಲ್ಲಿ ಕಡ್ಡಾಯವಾಗಿ ಫೆ.09 ರಂದು ಜೀತ ಪದ್ಧತಿ ನಿರ್ಮೂಲನಾ ದಿನಾಚರಣೆ ಆಚರಿಸಬೇಕು ಎಂದು ಅವರು ತಿಳಿಸಿದ್ದಾರೆ.

## ಜಿಲ್ಲಾ ಉಸ್ತುವಾರಿ ಸಚಿವರ ಸಂತಾಪ

ಮಂಗಳೂರು: ಹಿರಿಯ ದಲಿತ ಮುಖಂಡ ಪದ್ಮನಾಭ ನರಿಂಗಾನ ಅವರ ನಿಧನಕ್ಕೆ ಜಿಲ್ಲಾ ಉಸ್ತುವಾರಿ ಸಚಿವರಾದ ದಿನೇಶ್ ಗುಂಡೂರಾವ್ ಸಂತಾಪ ವ್ಯಕ್ತಪಡಿಸಿದ್ದಾರೆ. ಸಾಮಾನ್ಯ ಬಡತನದ ಕುಟುಂಬದಿಂದ ಬಂದ ಪದ್ಮನಾಭ ಅವರು ಶ್ರಮ ಹಾಗೂ ಬದ್ಧತೆಯಿಂದ ಸಾಮಾಜಿಕ ಕ್ಷೇತ್ರ ಹಾಗೂ ರಾಜಕೀಯ ಕ್ಷೇತ್ರದಲ್ಲಿ ಮೇಲೆ ಬಂದವರು. ಗ್ರಾಮ ಪಂಚಾಯತ್ ಸದಸ್ಯರಾಗಿ, ಸಹಕಾರಿ ಸಂಘಗಳ ನಿರ್ದೇಶಕರಾಗಿ, ಸಾಮಾಜಿಕಢ ಹೋರಾಟಗಳಲ್ಲಿ ಪದ್ಮನಾಭ ನರಿಂಗಾನ ಅವರ ಪರಿಶ್ರಮ ಮತ್ತು ಸೇವೆ ಶ್ಲಾಘನೀಯ ಎಂದು ಸಚಿವರು ಸಂತಾಪದಲ್ಲಿ ತಿಳಿಸಿದ್ದಾರೆ.

## ಫೆ.9–10 ಜಿಲ್ಲಾ ಉಸ್ತುವಾರಿ ಸಚಿವರ ಪ್ರವಾಸ

ಮಂಗಳೂರು: ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವರಾದ ದಿನೇಶ್ ಗುಂಡೂರಾವ್ ಅವರು ಫೆ.9 ಮತ್ತು 10ರಂದು ದಕ್ಷಿಣ ಕನ್ನಡ ಜಿಲ್ಲೆಗೆ ಭೇಟಿ ನೀಡಲಿದ್ದಾರೆ.

ಫೆಬ್ರವರಿ 9 ಶುಕ್ರವಾರ ಬೆಳಿಗ್ಗೆ 8.15ಕ್ಕೆ– ಮಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ, 8.45ಕ್ಕೆ– ಸಕ್ರ್ಯೂಟ್ ಹೌಸ್, 10 ಗಂಟೆಗೆ – ದಕ್ಷಿಣ ಕನ್ನಡ ಜಿಲ್ಲಾ ಕಾಂಗ್ರೆಸ್ ಪಕ್ಷದ ಮುಂಚೂಣಿ ಘಟಕಗಳ ಪದಾಧಿಕಾರಿಗಳೊಂದಿಗೆ ಸಭೆ. ರಾತ್ರಿ 8 ಗಂಟೆಗೆ ಉಡುಪಿಗೆ ತೆರಳುವರು. ಫೆಬ್ರವರಿ 10 ಶನಿವಾರ ಸಂಜೆ ನಗರದ ತಣ್ಣೀರುಬಾವಿಗೆ ಆಗಮಿಸುವ ಸಚಿವರು, ಸಂಜೆ 5.30ಕ್ಕೆ ಗಾಳಿಪಟ ಹಬ್ಬದಲ್ಲಿ ಭಾಗವಹಿಸಿ, ರಾತ್ರಿ 8.10ಕ್ಕೆ ಮಂಗಳೂರು ವಿಮಾನ ನಿಲ್ದಾಣದಿಂದ ಬೆಂಗಳೂರಿಗೆ ತೆರಳುವರು.

## ಮೂಡಬಿದ್ರೆ: 14ರಂದು ಲೋಕಾಯುಕ್ತ ಜನಸಂಪರ್ಕ ಸಭೆ

ಮಂಗಳೂರು: ಲೋಕಾಯುಕ್ತ ಮಂಗಳೂರು ವಿಭಾಗದ ಪೊಲೀಸ್ ಅಧೀಕ್ಷಕರು, ಉಪಾಧೀಕ್ಷಕರು ಹಾಗೂ ನಿರೀಕ್ಷಕರು ಇದೇ ಅಕ್ಟೋಬರ್ 14ರ ಬುಧವಾರ ಬೆಳಿಗ್ಗೆ 11 ಗಂಟೆಯಿಂದ ಮೂಡಬಿದ್ರೆಯ ತಾಲೂಕು ಕಚೇರಿಯಲ್ಲಿ ಲೋಕಾಯುಕ್ತ ಜನ ಸಂಪರ್ಕ ಸಭೆಯನ್ನು ಹಮ್ಮಿಕೊಂಡಿದ್ದಾರೆ.

ಸರ್ಕಾರಿ ಕಚೇರಿಗಳಲ್ಲಿ ಅಧಿಕೃತ ಕೆಲಸಗಳಲ್ಲಿ ವಿಳಂಬ ಮತ್ತು ಇನ್ನಿತರೆ ತೊಂದರೆ ನೀಡುತ್ತಿರುವ ಸರ್ಕಾರಿ ಅಧಿಕಾರಿ ಅಥವಾ ನೌಕರರ ವಿರುದ್ಧ ಈ ಸಭೆಯಲ್ಲಿ ದೂರು ನೀಡಬಹುದಾಗಿದೆ. ಹೆಚ್ಚಿನ ಮಾಹಿತಿಗೆ ಪೊಲೀಸ್ ಅಧೀಕ್ಷಕರ ಕಚೇರಿ:0824–2950997, 9364062517, ಪೊಲೀಸ್ ಉಪಾಧಿಕ್ಷಕರ ಕಚೇರಿ–1: 0824–2453420, 9364062579, ಪೊಲೀಸ್ ಉಪಾಧೀಕ್ಷಕರ ಕಚೇರಿ–2: 0824–2453420. ಪೊಲೀಸ್ ನಿರೀಕ್ಷಕರ ಕಚೇರಿ:0824–2427237 ಸಂಖ್ಯೆಗಳನ್ನು ಸಂಪರ್ಕಿಸುವಂತೆ ಕರ್ನಾಟಕ ಲೋಕಾಯುಕ್ತ ಮಂಗಳೂರು ವಿಭಾಗದ ಪೊಲೀಸ್ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಾ.11ರಿಂದ ವೃತ್ತಿ ಪೂರಕ ಪರೀಕ್ಷೆ

ಮಂಗಳೂರು: ಸರ್ಕಾರಿ ಮಹಿಳಾ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ 2017–19ನೇ ಸಾಲಿನಲ್ಲಿ 2 ವರ್ಷದ ಅವಧಿಯ ವೃತ್ತಿಗಳಿಗೆ ಪ್ರವೇಶ ಪಡೆದು ಪರೀಕ್ಷೆಯಲ್ಲಿ ಅನುತ್ತೀರ್ಣರಾಗಿರುವ ಸೆಮಿಸ್ಟರ್ ಪದ್ಧತಿಯ ಅಭ್ಯರ್ಥಿಗಳಿಗೆ ಮಾರ್ಚ್ 11 ರಿಂದ 16 ರವರೆಗೆ ಅಖಿಲ ಭಾರತ ವೃತ್ತಿ(ಪೂರಕ) ಪರೀಕ್ಷೆಯನ್ನು ನಡೆಸಲಾಗುವುದು. ಫೆಬ್ರವರಿ 15ರ ಒಳಗೆ ಮಾತ್ರ ಪರೀಕ್ಷೆ ಶುಲ್ಕವನ್ನು ಪಾವತಿಸಲು ಸಮಯವಿರುವುದರಿಂದ ಅನುತ್ತೀರ್ಣ ಅಭ್ಯರ್ಥಿಗಳು ತಾಂತ್ರಿಕ ರೇಖಾ ಚಿತ್ರ ಹಾಗೂ ವೃತ್ತಿ ಪ್ರಾಯೋಗಿಕ ವಿಷಯಗಳ ಪರೀಕ್ಷಾ ಶುಲ್ಕ ಪಾವತಿಸಲು ಹಾಗೂ ಅಃಖಿ ಪರೀಕ್ಷೆಗಳಿಗೆ ಆನ್ಲೈನ್ ಮೂಲಕ ಪರೀಕ್ಷಾ ಶುಲ್ಕ ಪಾವತಿಸಿ ಪರೀಕ್ಷೆಗೆ ಹಾಜರಾಗಬಹುದು. ಹೆಚ್ಚಿನ ಮಾಹಿತಿಗೆ ಸಂಸ್ಥೆಗೆ ಖುದ್ದಾಗಿ ಭೇಟಿ ನೀಡಬಹುದು ಅಥವಾ ದೂರವಾಣಿ ಸಂಖ್ಯೆ 0824 – 2216360, 9880119147, ಅಥವಾ 9480055315 ಸಂಪರ್ಕಿಸಲು ಸರ್ಕಾರಿ ಮಹಿಳಾ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 14ರಂದು ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ ಸಭೆ

ಮಂಗಳೂರು: ಕೇಂದ್ರ ಕಾರ್ಯಕ್ರಮಗಳ ಅನುಗಣ್ಣನದ ಬಗ್ಗೆ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ(ದಿಶಾ) ಸಭೆ ಫೆಬ್ರವರಿ 14ರಂದು ಬೆಳಿಗ್ಗೆ 10.30ಕ್ಕೆ ದ.ಕ ಜಿಲ್ಲಾ ಪಂಚಾಯತ್ ನೇತ್ರಾವತಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಲೋಕಸಭಾ ಸದಸ್ಯ ನಳಿನ್ ಕುಮಾರ್ ಕಟೀಲ್ ಅವರು ಸಭೆಯ ಅಧ್ಯಕ್ಷತೆ ವಹಿಸುವರು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



## ವಿಧಾನ ಪರಿಷತ್ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್.ರವಿಕುಮಾರ್ ಹಾಸ್ಟೆಲ್ ಭೇಟಿ ಪರಿಶೀಲನೆ

ಬಳ್ಳಾರಿ: ವಿಧಾನ ಪರಿಷತ್ ವಿರೋಧ ಪಕ್ಷದ ಮುಖ್ಯ ಸಚೇತಕರಾದ ಎನ್.ರವಿಕುಮಾರ್ ಅವರು, ತಮ್ಮ ಪ್ರವಾಸ ಸಮಯದಲ್ಲಿ ಬಳ್ಳಾರಿ ನಗರದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಬಾಲಕಿಯರ ವಸತಿ ನಿಲಯಕ್ಕೆ ಮಂಗಳವಾರ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಇದೇ ವೇಳೆ ವಸತಿ ನಿಲಯದ ಉಗ್ರಾಣ, ಅಡುಗೆ ಮನೆ, ವಸತಿ ನಿಲಯದ ಸ್ವಚ್ಛತೆ ಕಾಪಾಡಿಕೊಳ್ಳಬೇಕು. ಮಕ್ಕಳಿಗೆ ಗುಣಮಟ್ಟದ ಆಹಾರ ನೀಡಬೇಕು ಎಂದು ವಸತಿ ನಿಲಯದ ಸಿಬ್ಬಂದಿ ವರ್ಗಕ್ಕೆ ಸೂಚಿಸಿದರು.

ಈ ಸಂದರ್ಭದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ ವರ್ಗದವರು ಹಾಗೂ ಇನ್ನೀತರರು ಹಾಜರಿದ್ದರು.

# ಕುಡಿಯುವ ನೀರಿನ ಸಮಸ್ಯೆಯಾಗದಂತೆ ಕಾರ್ಯನಿರ್ವಹಿಸಿ: ಶಾಸಕ ಬಾಲಚಂದ್ರ ಜಾರಕಿಹೊಳಿ

ಗೋಕಾಕ: ಕುಡಿಯುವ ನೀರಿನ ಆಹಾಕಾರ ತಪ್ಪಿಸಲು ಸ್ಥಳೀಯ ಪಿಡಿಓ, ಎಎ ಮತ್ತು ಆರ್ಡಿಪಿಆರ್ ಇಂಜನೀಯರ್ಗಳು ಸಮನ್ವತೆಯಿಂದ ಕಾರ್ಯನಿರ್ವಹಿಸಿ ಸಾರ್ವಜನಿಕರಿಗೆ ಅಗತ್ಯವಿರುವ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಿಕೊಡುವಂತೆ ಅರಭಾವಿ ಶಾಸಕ ಬಾಲಚಂದ್ರ ಜಾರಕಿಹೊಳಿ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮಂಗಳವಾರದಂದು ನಗರದ ತಾಲೂಕಾ ಪಂಚಾಯತ ಸಭಾ ಭವನದಲ್ಲಿ ಜರುಗಿದ ಮೂಡಲಗಿ ಮತ್ತು ಗೋಕಾಕ ತಾಲೂಕು ಮಟ್ಟದ ಟಾಸ್ಕ್ಫೋರ್ಸ್ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಇದೇ ತಿಂಗಳಿನಿಂದ ಮೇ–ತಿಂಗಳಿನವರೆಗೆ ಕುಡಿಯುವ ನೀರಿನ ಸಮಸ್ಯೆಯನ್ನು ಎದುರಿಸಲು ಈಗಿನಿಂದಲೇ ಅಗತ್ಯವಿರುವ ಎಲ್ಲ ಕ್ರಮಗಳನ್ನು ಕೈಗೊಳ್ಳುವಂತೆ ಸೂಚಿಸಿದರು.

ಅರಭಾವಿ ಮತಕ್ಷೇತ್ರದ ಬಹುತೇಕ ಗ್ರಾಮಗಳಲ್ಲಿ ಕುಡಿಯುವ ನೀರಿನ




ಸಮಸ್ಯೆಗಳು ಇಲ್ಲಿಯತನಕ ಉದ್ಭವಿಸಿಲ್ಲ. ಕೆಲವೊಂದು ಗ್ರಾಮಗಳಲ್ಲಿ ಮಾತ್ರ ನೀರಿನ ಸಮಸ್ಯೆಗಳು ಇರುವುದು ಕಂಡು ಬಂದಿದೆ. ಕೂಡಲೇ ಅಧಿಕಾರಿಗಳು ಜಾಗೃತರಾಗಿ ತಮ್ಮ ಕರ್ತವ್ಯ ನಿರ್ವಹಿಸಬೇಕು. ಸಾರ್ವಜನಿಕರಿಗೆ ತೊಂದರೆಯಾಗದಂತೆ ಕಟ್ಟುನಿಟ್ಟಿನ ಕ್ರಮಗಳನ್ನು ಜರುಗಿಸಬೇಕು. ಕೆಲವೊಂದು ಗ್ರಾಮಗಳಲ್ಲಿ ಉದ್ಭವಿಸುತ್ತಿರುವ ನೀರಿನ ಸಮಸ್ಯೆಯನ್ನು ಸ್ಥಳೀಯ ಮಟ್ಟದ ಅಧಿಕಾರಿಗಳು ಪರಿಹರಿಸಬೇಕು. ಖಾಸಗಿ ಬೋರವೆಲ್ಗಳನ್ನು ಗುರುತಿಸಿ ಸಾರ್ವಜನಿಕರಿಗೆ ನೀರಿನ ಅನುಕೂಲತೆಗಳನ್ನು ಕಲ್ಪಿಸಿಕೊಡಬೇಕು. ಅಗತ್ಯ ಬಿದ್ದರೇ ಟ್ಯಾಂಕರಗಳಿಂದ ಕುಡಿಯುವ ನೀರನ್ನು ಸರಬುರಾಜು ಮಾಡಲು ಕ್ರಮ ಕೈಗೊಳ್ಳುವಂತೆ ಶಾಸಕರು ಸೂಚನೆ ನೀಡಿದರು.

ಈಗಾಗಲೇ ಪ್ರತಿ ಗ್ರಾಮ ಪಂಚಾಯತಿಗಳಲ್ಲಿ ಟ್ಯಾಂಕರಗಳು ಇದ್ದು, ಆ ಮೂಲಕ ನೀರನ್ನು ಸಾರ್ವಜನಿಕರ ಕೋರಿಕೆ ಮೇರೆಗೆ ಪೂರೈಸಬೇಕು.

ಖಾಸಗಿ ಬೋರವೆಲ್ಗಳಿಗೆ ಮಾಸಿಕವಾಗಿ ಗರಿಷ್ಠ 15 ಸಾವಿರ ರೂಗಳ ತನಕ ಬಾಡಿಗೆ ನೀಡಲು ನಿರ್ಧರಿಸಲಾಗಿದೆ. ಕುಡಿಯುವ ನೀರಿನ ಸಮಸ್ಯೆ ಅಷ್ಟೇನೂ ಇಲ್ಲದಿರುವುದರಿಂದ ಇಲ್ಲಿಯ ವರೆಗೆ ಟ್ಯಾಂಕರ್ಗಳಿಗೆ ಯಾರೂ ಟೆಂಡರ್ ಹಾಕಿಲ್ಲ. ಪರಿಸ್ಥಿತಿಯನ್ನು ಅವಲೋಕಿಸಿ ಸಾರ್ವಜನಿಕರಿಗೆ ಯಾವುದೇ ತಾಪತ್ರಯ ಬಾರದಂತೆ ಕೆಲಸ ನಿರ್ವಹಿಸಲು ಅವರು ಅಧಿಕಾರಿಗಳಿಗೆ ಸೂಚಿಸಿದರು.

ಜೆಜೆಎಮ್ ಕಾಮಗಾರಿಯನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಿ ಪ್ರತಿ ಮನೆ–ಮನೆಗೆ ನಳದ ಸಂಪರ್ಕವನ್ನು ಕಲ್ಪಿಸಿಕೊಡಬೇಕು. ಮುಂಬರುವ ದಿನಗಳಲ್ಲಿ ಜಾನುವಾರುಗಳಿಗೆ ಮೇವು ಕೊರತೆಯಾಗದಂತೆ ಮೇವಿನ ಬೀಜದ ಕಿರು ಪೊಟ್ಟಣಗಳನ್ನು ಅರಭಾವಿ ಕ್ಷೇತ್ರದ ರೈತರಿಗೆ ವಿತರಿಸಲಾಗುತ್ತಿದೆ. ತಿಗಡಿ–ತಳಕಟ್ನಾಳ ಶಾಲೆಗಳ ವಿದ್ಯಾರ್ಥಿಗಳಿಗೆ ಅನುಕೂಲವಾಗಲು ಬೋರವೆಲ್ಗೆ ವಿದ್ಯುತ್ ಸಂಪರ್ಕ ಕಲ್ಪಿಸಿಕೊಡಬೇಕು.

ಈಗಾಗಲೇ ಪ್ರಗತಿಯಲ್ಲಿರುವ ರಸ್ತೆ ಕಾಮಗಾರಿಗಳನ್ನು ಮಾರ್ಚ ತಿಂಗಳೊಳಗೆ ಪೂರ್ಣಗೊಳಿಸಬೇಕು.

ತಾಲೂಕುಗಳು ಬರಗಾಲ ಘೋಷಣೆಯಾಗಿದ್ದರಿಂದ ಸರ್ಕಾರದ ಅನುದಾನದ ನಿರೀಕ್ಷೆಯಲ್ಲಿದ್ದೇವೆ. ಈಗಾಗಲೇ ಸರ್ಕಾರಕ್ಕೆ ಪ್ರಸ್ತಾವಣೆ ಸಲ್ಲಿಸಲಾಗಿದೆ ಎಂದು ಶಾಸಕ ಬಾಲಚಂದ್ರ ಜಾರಕಿಹೊಳಿ ಅವರು ತಿಳಿಸಿದರು.

ಮೂಡಲಗಿ ತಹಶೀಲದಾರ ಮಹಾದೇವ ಸನ್ಮೂರಿ, ಗೋಕಾಕ ತಹಶೀಲದಾರ ಡಾ: ಮೋಹನ ಭಸ್ಮೆ, ಮೂಡಲಗಿ ತಾ.ಪಂ ಇಓ ನವೀನಪ್ರಸಾದ ಕಟ್ಟಿಮನಿ, ಗೋಕಾಕ ತಾ.ಪಂ ಇಓ, ಉದಯಕುಮಾರ ಕಾಂಬಳೆ, ಗೋಕಾಕ ಮತ್ತು ಮೂಡಲಗಿ ತಾಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಸಂವಿಧಾನ ಜಾಗೃತಿ ಜಾಥಾ



ಶಿವಮೊಗ್ಗ: ಸಾಗರದ ತ್ಯಾಗರ್ತಿಯಲ್ಲಿ ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮವನ್ನು ಫೆ.6 ರಂದು ಏರ್ಪಡಿಸಿ ಸಂವಿಧಾನ ಕುರಿತು ಜಾಗೃತಿ ಮೂಡಿಸಲಾಯಿತು.

ಜಾಥಾ ತ್ಯಾಗರ್ತಿ ವೃತ್ತದಿಂದ ಪ್ರಾರಂಭಗೊಂಡು, ಶಾದಿಮಹಲ್, ಅಂಬೇಡ್ಕರ ವೃತ್ತ, ಗಾಂಧಿ ಮೈದಾನದಲ್ಲಿ ಸಾಗಿ ಬಂದು ನೆಹರು ಮೈದಾನದಲ್ಲಿ ಮುಕ್ತಾಯಗೊಂಡಿತು.

ಡಿಎಸ್‌ಎಸ್ ತಾಲ್ಲೂಕು ಸಂಚಾಲಕರಾದ ಲಕ್ಷ್ಮಣ್ ಸಾಗರ ಅಂಬೇಡ್ಕರ್ ಕುರಿತು ಉಪನ್ಯಾಸ ನೀಡಿದರು. ನಗರಸಭೆ ಮಾಜಿ ಅಧ್ಯಕ್ಷೆ ಲಲಿತಮ್ಮ, ಮಧುರಾ ಶಿವಾನಂದ ಹಾಗೂ ನಗರಸಭೆಯ ಸದಸ್ಯರು ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಭಾಗವಹಿಸಿದ್ದರು.

## ಸಚಿವ ಸತೀಶ್ ಜಾರಕಿಹೊಳಿ ರಾಜ್ಯ ರಾಜಕೀಯದಲ್ಲೇ ಉಳಿಯಲಿ

ಬೆಳಗಾವಿ: ಉತ್ತರ ಕರ್ನಾಟಕದ ಅಭಿವೃದ್ಧಿ ಹರಿಕಾರ, ಪ್ರಭಾವಿ ನಾಯಕ, ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಅವರು ರಾಜ್ಯ ರಾಜಕೀಯದಲ್ಲಿ ಇರಬೇಕು. ಹೈಕಮಾಂಡ್ ಅವರನ್ನು ಲೋಕಸಭೆ ಚುನಾವಣೆಗೆ ಸ್ಪರ್ಧಿಸಲು ಟಿಕೆಟ್ ನೀಡಬಾರದು ಎಂದು ಕೆಪಿಸಿಸಿ ಸದಸ್ಯೆ ಆಯಿಶಾ ಸನದಿ ಮನವಿ ಮಾಡಿದ್ದಾರೆ.

ನಗರದ ಕನ್ನಡ ಸಾಹಿತ್ಯ ಪರಿಷತ್ ಕಚೇರಿ ಸಭಾಂಗಣದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸತೀಶ್ ಜಾರಕಿಹೊಳಿ ಅವರು ಈಗಾಗಲೇ ಸಚಿವರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬರುವಲ್ಲಿ ಅವರ ಪಾತ್ರವೂ ದೊಡ್ಡದಿದೆ. ಅವರ ದೂರದೃಷ್ಟಿಯಿಂದ ಬೆಳಗಾವಿ ಜಿಲ್ಲೆ ಸೇರಿದಂತೆ ರಾಜ್ಯದಲ್ಲಿ ಅನೇಕ ಅಭಿವೃದ್ಧಿ ಕೆಲಸಗಳು ಸಾಗುತ್ತಿವೆ. ಹೀಗಾಗಿ ಸಚಿವ ಸತೀಶ್ ಜಾರಕಿಹೊಳಿ ಅವರು ರಾಜ್ಯ ರಾಜಕೀಯದಲ್ಲಿ ಇರಬೇಕೆಂದು ಮನವಿ ಮಾಡುತ್ತೇನೆಂದು ತಿಳಿಸಿದರು.



ಬೆಳಗಾವಿ ಲೋಕಸಭಾ ಕ್ಷೇತ್ರದಲ್ಲಿ ಚುನಾವಣೆಗೆ ಸ್ಪರ್ಧಿಸಲು ಅರ್ಹತೆ ಇರುವ ಅನೇಕ ಅಭ್ಯರ್ಥಿಗಳು ಇದ್ದಾರೆ. ಸಚಿವೆ ಲಕ್ಷ್ಮೀ ಹೆಬ್ಬಾಳಕರ್, ಅಂಜಲಿ ನಿಂಬಾಳ್ಕರ್, ಪ್ರಿಯಂಕಾ ಜಾರಕಿಹೊಳಿ ಸೇರಿದಂತೆ ನನಗಾದರೂ ಸ್ಪರ್ಧಿಸಲು ಅವಕಾಶ ನೀಡಬೇಕು. ಕಾರಣ ಸಚಿವ ಸತೀಶ್ ಜಾರಕಿಹೊಳಿ ಅವರನ್ನು ಬಿಟ್ಟು ಮಹಿಳೆಯರಿಗಾದರೂ ಟಿಕೆಟ್ ನೀಡಬೇಕು. ಇಲ್ಲವಾದರೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅಥವಾ ಪ್ರಿಯಂಕಾ ಜಾರಕಿಹೊಳಿ ಅವರಿಗೆ ಟಿಕೆಟ್ ನೀಡಿ. ಅವರಿಗೆ ಟಿಕೆಟ್ ನೀಡಿದರೆ ಅವರನ್ನು ಗೆಲ್ಲಿಸಲು ಹಗಲು ರಾತ್ರಿ ದುಡಿಯುತ್ತೇವೆ ಎಂದು ತಿಳಿಸಿದರು.

ನಮ್ಮ ನಾಯಕ ರಾಜ್ಯ ರಾಜಕೀಯದಲ್ಲೇ ಇರಲಿ ಎಂಬುವುದು ನಮ್ಮ ಆಶಯ. ಹೈಕಮಾಂಡ್ ನಮ್ಮ ಮನವಿಗೆ ಸ್ಪಂದಿಸಿ ಅವರನ್ನು ರಾಜ್ಯ ರಾಜ್ಯಕೀಯದಲ್ಲಿ ಉಳಿಯಲು ಅವಕಾಶ ನೀಡಬೇಕು ಹಾಗೂ ಮುಂದಿನ ದಿನಗಳಲ್ಲಿ ಅವರಿಗೆ ಡಿಸಿಎಂ ಸ್ಥಾನವನ್ನು ನೀಡಬೇಕೆಂದು ಒತ್ತಾಯಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಪುರಸಭೆ ಸದಸ್ಯ ಖುರ್ಶಿದ್ದ ಮುಲ್ಲಾ, ಲತಾ ಮಾನೆ, ರೋಹಿಣಿ ಬಾಬಾಸೇಕ್, ಸಾರಂಬಿ ಜತ್ತಿ, ಹಸೀನಾ ಪಿರ್ಜಾದೆ ಸೇರಿದಂತೆ ಅನೇಕ ಕಾಂಗ್ರೆಸ್ ಕಾರ್ಯಕರ್ತೆಯರು ಇದ್ದರು.

## ವಿದ್ಯುದ್ದೀಕರಣ ಮುಗಿದ ತಕ್ಷಣ ಬೆಳಗಾವಿ–ಪುಣೆ ನಡುವೆ ವಂದೇ ಭಾರತ್ ರೈಲು ಪ್ರಾರಂಭ: ಈರಣ್ಣ ಕಡಾಡಿ



ಬೆಳಗಾವಿ: ಬೆಳಗಾವಿಯಿಂದ–ಪುಣೆ ನಡುವೆ ವಿದ್ಯುದ್ದೀಕರಣದ ಕಾಮಗಾರಿ ಮುಗಿದ ತಕ್ಷಣ ಕುಂದಾನಗರಿಯ ಜನರ ಬಹು ನಿರೀಕ್ಷೆಯ ವಂದೇ ಭಾರತ್ ರೈಲು ಸಂಚಾರ ಪ್ರಾರಂಭವಾಗಲಿದೆ ಎಂದು ಹುಬ್ಬಳಿ ನೈರುತ್ಯ ರೇಲ್ವೆ ವಲಯ ಪ್ರಯಾಣಿಕರ ಸಲಹಾ ಮಂಡಳಿ ಸದಸ್ಯ ಹಾಗೂ ರಾಜ್ಯಸಭಾ ಸಂಸದ ಈರಣ್ಣ ಕಡಾಡಿ ತಿಳಿಸಿದ್ದಾರೆ.

ಈ ಬಗ್ಗೆ ಮಂಗಳವಾರ (ಫೆ.06) ನವದೆಹಲಿಯಲ್ಲಿ ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರನ್ನು ಭೇಟಿ ಮಾಡಿ ಬೆಳಗಾವಿ–ಪುಣೆ ನಡುವೆ ವಂದೇ ಭಾರತ್ ರೈಲಿನ ಅವಶ್ಯಕತೆಯ ಬಗ್ಗೆ ಮನವರಿಕೆ ಮಾಡಿ ಮನವಿ ಮಾಡಿದ ನಂತರ ರೈಲ್ವೆ ಸಚಿವರು ಪುಣೆ–ಬೆಳಗಾವಿ ನಡುವೆ ವಿದ್ಯುದ್ದೀಕರಣ ಕಾಮಗಾರಿ ಮುಕ್ತಾಯದ ನಂತರ ವಂದೇ ಭಾರತ್ ರೈಲು ಸಂಚಾರ ಪ್ರಾರಂಭಿಸುವ ಬಗ್ಗೆ ಲಿಖಿತವಾಗಿ ಮಾಹಿತಿಯನ್ನು ನೀಡಿದ್ದಾರೆ ಎಂದು ತಿಳಿಸಿದ್ದಾರೆ.

ಬೆಳಗಾವಿ ಜಿಲ್ಲೆಯ ರೈಲ್ವೆಗೆ ಸಂಬಂಧ ಪಟ್ಟ ವಿಷಯಗಳ ಕುರಿತು ಸಚಿವರ ಗಮನಕ್ಕೆ ತಂದ ಸಂಸದ ಕಡಾಡಿ ಅವರು ಮನವಿಗೆ ಸಕಾರಾತ್ಮವಾಗಿ ಸ್ಪಂದಿಸಿ, ಪ್ರಸ್ತಾವನೆಗಳನ್ನು ಪರಿಸಿಲಿಸಿ ಅಗತ್ಯ ಕ್ರಮಕೈಗೊಳ್ಳುವುದಾಗಿ ಭರವಸೆ ನೀಡಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಬೆಳಗಾವಿ ಕೋರ್ ಡೆವಲಪ್‌ಮೆಂಟ ಗ್ರೂಪ್ ಸದಸ್ಯರಾದ ಶೈಲೇಶ್ ಯಲಮಳ್ಳಿ, ಅಶ್ವಿನ್ ಪಾಟೀಲ, ಸಂದೀಪ ಪಾಟೀಲ ಉಪಸ್ಥಿತರಿದ್ದರು.

## ಕಠಿಣ ಪರಿಶ್ರಮ ಮತ್ತು ಆತ್ಮ ವಿಶ್ವಾಸ ಯಶಸ್ವಿನ ಬುನಾದಿ

ಬೆಳಗಾವಿ: ದ್ವಿತಿಯ ಪಿಯುಸಿ ವಿದ್ಯಾರ್ಥಿಗಳು ಹೊಳೆಯುವ ನಕ್ಷತ್ರಗಳು ಅವರ ಬಾಳಿಗೆ ಪ್ರೇರಣೆ ನೀಡುವ ನಿಟ್ಟಿನಿಂದ ಬಡತನದಲ್ಲಿಯೇ ಬದುಕನ್ನು ರೂಪಿಸಿಕೊಂಡ ಗೂಗಲ್ ಸಿಇಓ ಸುಂದರ್ ಪಿಚೈ ಹಾಗೂ ಎಲ್ಲರರಿಗೂ ಸ್ಪೂರ್ತಿಯಾದ ಸುಧಾಮೂರ್ತಿಯ ಜೀವನ ಗಾಥೆಯನ್ನು ಹೇಳಿ ಬದುಕನ್ನು ರೂಪಿಸಿಕೊಳ್ಳು ಪ್ರಯತ್ನಿಸಿ ಎಂದು ದೇವೆಂದ್ರ ಜಿನಗೌಡ ಸಂಸ್ಥೆಯ ಚೇರಮನ್ ಗೋಪಾಲ ಜಿನಗೌಡ ರವರು ಹೇಳಿದರು.

ಇತ್ತಿಚಿಗೆ ಶಿಂದೊಳ್ಳಿ ಗ್ರಾಮದ ಗೋಪಾಲಜಿ ಇಂಟಿಗ್ರೇಟೆಡ್ ಪಿಯು ಕಾಲೇಜಿನ ವಿದ್ಯಾರ್ಥಿಗಳ ಬಿಳ್ಕೊಡುಗೆ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪಠ್ಯಗಳು ವಿದ್ಯಾರ್ಥಿಗಳ ಅವಿಭಾಜ್ಯ ಅಂಗಗಳು ಇದರ ಜೊತೆಗೆ ಅವರಲ್ಲಿರುವ ವಿವಿಧ ಪ್ರತಿಭೆಯನ್ನು ಹೊರತರಬೇಕಾಗಿದೆ. ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳು ತಮ್ಮಲ್ಲಿರುವ ಕೌಶಲ್ಯಗಳನ್ನು ಅನಾವರಣ ಮಾಡಬೇಕೆಂದು ಅವರು ತಿಳಿಸಿದರು.

ಸಮಾರಂಭದಲ್ಲಿ ಇದೇ ಸಂದರ್ಭದಲ್ಲಿ ಕ್ರೀಡಾ ಸ್ಪರ್ದೆಯಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು.

ಪ್ರಾಚಾರ್ಯ ಪ್ರೀಯಾ ಮೂಡಲಗಿ ಅತಿಥಿಗಳನ್ನು ಸ್ವಾಗತಿಸಿ ಪ್ರಮುಖ ಕ್ಷಣಗಳನ್ನು ಮೆಲುಕು ಹಾಕಿದರು.



2023–2024 ನೇ ಸಾಲಿನ ಅತ್ಯತ್ತಮ್ಮ ವಿದ್ಯಾಥಿಗಳೆಂದು ಆಯ್ಕೆಯಾದ ಶಾಂಭವಿ ಯರಜನ್ವಿ ಮತ್ತು ಪ್ರಜ್ವಲ ಕೆ. ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ದೇವೆಂದ್ರ ಜಿನಗೌಡ ಶಾಲೆಯ ಸೆಕ್ರೇಟರಿ ಕುಂತುಸಾಗರ ಹರದಿ ಮ್ಯಾನೇಜಮೆಂಟ್ ಟ್ರಸ್ಟಿ ಅಭಿನಂದನ್ ಅವಲಕ್ಕಿ ಶಾಲೆಯ ಮುಖ್ಯೋಪಾಧ್ಯಾಯರಾದ ವಿಜಯಲಕ್ಷ್ಮೀ ಪಾಟೀಲ ಮತ್ತು ಉಪ ಮುಖ್ಯೋಪಾಧ್ಯಯರಾದ ರೋಷಣಿ ರೋಡ್ರಿಕ್ಸ್ ಉಪಸ್ಥಿತರಿದ್ದರು.

ಜ್ಯೋತಿ ಬಡಿಗೇರ್, ಶ್ರೀದೇವಿ ಖಾನಾಪುರ,ಭಾರತಿ ರಾಂಗನೇಕರ ಸೇರಿದಂತೆ ಮೊದಲಾವರು ಉಪಸ್ಥಿತರಿದ್ದರು. ಸವಿತಾ ಮೇತ್ರಿ ವಾರ್ಷಿಕ ವರದಿ ವಾನ ಮಾಡಿ ಕೊನೆಯಲ್ಲಿ ವಂದಿಸಿದರು. ಅಶ್ವಿನಿ ಕಲಮನಿ ಕಾರ್ಯಕ್ರಮವನ್ನು ನಿರೂಪಿಸಿದರು.

## ಕು. ವಚನಾ ಬಸವರಾಜ ದೇಸಾಯಿಗೆ ಬ್ಲಾಕ್ ಬೆಲ್ಟ್ ಪ್ರದಾನ



ಬೆಳಗಾವಿ: ಕು. ವಚನಾ ಬಸವರಾಜ ದೇಸಾಯಿ ಇವಳು ಬ್ಲಾಕ್ ಬೆಲ್ಟ್ ಪ್ರಶಸ್ತಿಯನ್ನು ಪಡೆದಿದ್ದಾಳೆ. ನಗರದ ಇಂಡಿಯನ್ ಕರಾಟೆ ಕ್ಲಬ್ ಹಾಗೂ ಬೆಳಗಾವಿ ಡಿಸ್ಟ್ರಿಕ್ಟ್ ಸ್ಪರ್ಟ್ಸ್ ಕರಾಟೆ ಅಸೋಶಿಯಷನ್ ಇವರ ಸಂಯುಕ್ತ ಆಶ್ರಯದಲ್ಲಿ 'ಕರಾಟೆ ಬ್ಲಾಕ್ ಬೆಲ್ಟ್ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಇದೇ ದಿ.11 ರವಿವಾರದಂದು ಸಾಯಂಕಾಲ 6 ಗಂಟೆಗೆ ಎಸ್.ಪಿ. ಆಫೀಸ್ ಹತ್ತಿರವಿರುವ ಕುಮಾರ ಗಂಧರ್ವ ಸಭಾಭವನದಲ್ಲಿ ಹಮ್ಮಿಕೊಂಡಿದ್ದಾರೆ.

ಈ ಸಂದರ್ಭದಲ್ಲಿ ಬೆಳಗಾವಿ ಜಿಲ್ಲಾ ಮುಖ್ಯ ಪರೀಕ್ಷಕರಾದ ಗಜೇಂದ್ರ ಬಿ. ಕಾಕತಿಕರ ಮತ್ತು ತರಬೇತುದಾರ ವಿಠ್ಠಲ ಭೋಜಗಾರ ಉಪಸ್ಥಿತರಿರುತ್ತಾರೆ.

## ಮುತಗಾದಲ್ಲಿ ಲಕ್ಷಾಂತರ ರೂ. ಮೌಲ್ಯದ ಚಿನ್ನಾಭರಣ ಕಳ್ಳತನ



ಬೆಳಗಾವಿ: ಮುತಗಾದ ಗೋಕುಲನಗರದಲ್ಲಿ ಮನೆಯಲ್ಲಿದ್ದ ಲಕ್ಷಾಂತರ ರೂ.ಗಳ ಮೌಲ್ಯದ ಚಿನ್ನಾಭರಣ ದೋಚಿ ಕಳ್ಳರು ಪರಾರಿಯಾಗಿರುವ ಘಟನೆ ನಡೆದಿದೆ.

ರಸ್ತೆ ಪಕ್ಕದ ಮನೆಯೊಂದಕ್ಕೆ ಸೋಮವಾರ ತಡರಾತ್ರಿ ಕನ್ನ ಹಾಕಿದ ಕಳ್ಳರು ಸುಮಾರು 40 ಗ್ರಾಂ (4 ತೊಲೆ) ಚಿನ್ನಾಭರಣವನ್ನು ಕದ್ದು ಪರಾರಿಯಾಗಿದ್ದಾರೆ.

ಮನೆಯವರು ಹೇಳುವ ಪ್ರಕಾರ 40 ಗ್ರಾಂ (4 ತೊಲೆ) ಎಂದಾದರೆ ಮಾರಿಹಾಳ ಪೊಲೀಸ್ ಠಾಣೆಯಲ್ಲಿ 20 ಗ್ರಾಂ ಚಿನ್ನಾಭರಣ ಕಳವಾಗಿರುವ ಕುರಿತು ದೂರು ದಾಖಲಾಗಿದೆ. ಮಾರಿಹಾಳ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಬೆಳಗಾವಿ ನೀರಾವರಿ ಇಲಾಖೆ ವಿರುದ್ಧ ರೊಚ್ಚಿಗೆದ್ದ ರೈತರು



ಬೆಳಗಾವಿ: ನೀರಾವರಿ ಇಲಾಖೆಯ ನೋಟಿಸ್ ಗೆ ಹೆದರದ ಹುಕ್ಕೇರಿ ತಾಲೂಕಿನ ಮಾಸ್ತಿಹೊಳಿ ಗ್ರಾಮದ ರೈತರು ನೀರಾವರಿ ಇಲಾಖೆ ಕಚೇರಿಗೆ ಮುತ್ತಿಗೆ ಹಾಕಿ ಆಕ್ರೋಶ ವ್ಯಕ್ತಪಡಿಸಿದರು.

ಹಿಡಕಲ್ ಜಲಾಶಯದ ಹಿನ್ನೀರಿನ ಹಿನ್ನೆಲೆಯಲ್ಲಿ ಭೂಮಿ ಕಳೆದುಕೊಂಡ ರೈತರಿಗೆ ನೀರಾವರಿ ಇಲಾಖೆಯಿಂದ ನಿಮ್ಮ ಜಮೀನನ್ನು ಭೂಸ್ವಾಧೀನ ಪಡಿಸಿಕೊಂಡಿದ್ದೇವೆ ಎಂದು ರೈತರಿಗೆ ನೋಟಿಸ್ ನೀಡಿದ್ದರು. ಇದರಿಂದ ಕೆರಳಿದ ರೈತರು ಸಿವಿಲ್ ಮುಖ್ಯ ಇಂಜಿನಿಯರ ಬಿ. ಆರ್. ರಾಠೋಡ್ ಕಚೇರಿಗೆ ಮುತ್ತಿಗೆ ಹಾಕಿ ಹರಿಹಾಯ್ದರು.

ಭೂ ಸ್ವಾಧೀನ ಪಡೆಸಿಕೊಂಡಿದ್ದೇವೆ ಎಂದು ರೈತರಿಗೆ ನೋಟಿಸ್ ನೀಡಿದ ಅಧಿಕಾರಿಗಳು. ಭೂಮಿ ಕಳೆದುಕೊಂಡ ರೈತರಿಗೆ ಪರಿಹಾರ ನೀಡದ ಹಿನ್ನಲೆ ಪ್ರತಿಭಟನೆ ನಡೆಸಿದರು. ಸಿವಿಲ್ ಮುಖ್ಯ ಇಂಜಿನಿಯರ ಬಿ ಆರ್ ರಾಠೋಡ್ ಅವರ ಜೊತೆ ವಾಗ್ವಾದ ನಡೆಸಿದ ರೈತರು. ಕಚೇರಿ ಒಳಗೆ ಕುಳಿತುಕೊಂಡ ಪರಿಹಾರದಿಂದ ವಂಚಿತರಾದ ರೈತರಿಂದ ಕಚೇರಿ ಮುತ್ತಿಗೆ ಹಾಕಿದರು.

ಮಾಸ್ತಿಹೊಳಿ ಗ್ರಾಮದ ರೈತ ಮುಖಂಡರು ಮಾತನಾಡಿ, ಜಿಲ್ಲಾ ಉಸ್ತುವಾರಿ ಸತೀಶ್ ಜಾರಕಿಹೊಳಿ ರವರಿಗೆ ಪರಿಹಾರ ಹಣ ಒದಗಿಸಿ ಕೊಡಲು ಮನವಿ ಸಲ್ಲಿಸಿದವು. ಸಚಿವರು ಫೆ.28 ರ ವರಗೆ ಕಾಯಿರಿ ಎಂದು ಹೇಳಿದ್ದರು, ಆದರೆ ನೀರಾವರಿ ಇಲಾಖೆ ಅಧಿಕಾರಿ ಸತೀಶ್ ಜಾರಕಿಹೊಳಿ ಯವರಿಗೆ ತಿಳಿಸದೆ ಅಧಿಕಾರಿಗಳು ನೋಟಿಸ್ ಕಳಿಸಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

## ಪ್ರಾ.ಬಿ.ಎಸ್.ಗವಿಮಠರಿಗೆ ಸುವರ್ಣ ಕರ್ನಾಟಕ ಪ್ರಶಸ್ತಿ

ಬೆಳಗಾವಿ ನೂತನ ಕನ್ನಡ ಭವನದಲ್ಲಿ ಜರುಗಿದ ಉಡುಪಿ ಜಿಲ್ಲೆಯ ಹೆಬ್ರಿ ತಾಲೂಕಿನ ಮುದ್ರಾಡಿಯ ನಮ ತುಳುವೆರ್ ಕಲಾ ಸಂಘಟನೆಯಿಂದ ಆಯೋಜಿಸಿದ್ದ ಸುವರ್ಣ ಕರ್ನಾಟಕ ಪ್ರಶಸ್ತಿ ಪ್ರದಾನ ಕಾರ್ಯಕ್ರಮದಲ್ಲಿ ಸುವರ್ಣ ನಾಟಕೋತ್ಸವದ ಅಂಗವಾಗಿ ಪ್ರಾ.ಬಿ.ಎಸ್. ಗವಿಮಠರಿಗೆ ಅವರ ಸಾಹಿತ್ಯ ಮತ್ತುರಂಗಭೂಮಿ ಸೇವೆಯನ್ನು ಪರಿಗಣಿಸಿ ಸುವರ್ಣಕರ್ನಾಟಕ ಪ್ರಶಸ್ತಿ ನೀಡಿ ಗೌರವಿಸಿದರು.



ಈ ಸಂದರ್ಭದಲ್ಲಿ ಡಾ.ಬಸವರಾಜಜಗಜಂಪಿ, ಡಾ.ಸರಜೂರ ಕಾಟ್ಕರ, ಯ.ರು.ಪಾಟೀಲ, ಏಣಗಿ ಸುಭಾಷ, ಸಂಘಟನೆಅಧ್ಯಕ್ಷ ಸುಕುಮಾರ್ ಮೋಹನ್ ಉಪಸ್ಥಿತರಿದ್ದರು

## ಇಂದು ಮಚ್ಚೆ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿನ ಕರ್ಮಚಾರಿಗಳ ಗಣತಿ ಶಿಬಿರ

ಬೆಳಗಾವಿ: ಮಚ್ಚೆ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಒಳಚರಂಡಿ (ಯುಜಿಡಿ) ಮಾರ್ಗಗಳನ್ನು ಸ್ವಚ್ಛಗೊಳಿಸುವ ಕರ್ಮಚಾರಿ ಮತ್ತು ಸಾರ್ವಜನಿಕ, ಸಮುದಾಯ ಆಸ್ಪತ್ರೆ, ಹೋಟೆಲ್, ಸಂಘ ಸಂಸ್ಥೆಗಳಲ್ಲಿಯ ಶೌಚಾಲಯವನ್ನು ಸ್ವಚ್ಛಗೊಳಿಸುವ ಖಾಸಗಿ–ಸರ್ಕಾರಿ ಸೆಪ್ಟಿಕ್ ಟ್ಯಾಂಕ್ ವಾಹನಗಳ ಕರ್ಮಚಾರಿಗಳನ್ನು ಗುರುತಿಸಲು ಫೆ.08 ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 2 ಗಂಟೆಯವರೆಗೆ ಮಚ್ಚೆ ಆನಂದ ಗಲ್ಲಿ ಅಂಬೇಡ್ಕರ್ ಭವನದಲ್ಲಿ, ಜಯನಗರದ ಶಿವ ಮಂದಿರದಲ್ಲಿ ಮಧ್ಯಾಹ್ನ 3.30 ರಿಂದ ಸಂಜೆ 5.30 ಗಂಟೆಯವರೆಗೆ ಶಿಬಿರ ಆಯೋಜಿಸಲಾಗಿದೆ.

ಸಂಬಂಧಪಟ್ಟ ಕರ್ಮಚಾರಿಗಳು ಆಧಾರ ಕಾರ್ಡ್, ಇಲಾಖೆ–ಸಂಸ್ಥೆಗಳಿಂದ ನೀಡಲಾದ ಗುರುತಿನ ಚೀಟಿ ಮತ್ತು ಕೆಲಸ ನಿರ್ವಹಿಸುತ್ತಿರುವ ಬಗ್ಗೆ ಪ್ರಮಾಣಪತ್ರ ಇತ್ಯಾದಿ ಅಗತ್ಯ ದಾಖಲೆ ಹಾಗೂ ಮಾಹಿತಿಯೊಂದಿಗೆ ಶಿಬಿರದಲ್ಲಿ ನಿಯೋಜಿಸಲಾದ ಗಣತಿದಾರರಿಗೆ ಮಾಹಿತಿಯನ್ನು ನೀಡಲು ಮಚ್ಚೆ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ಕೋರಿದ್ದಾರೆ.

## ಬೆಳಗಾವಿ ಮಹಾಪೌರ ಹಾಗೂ ಉಪ ಮಹಾಪೌರರ ಸ್ಥಾನಕ್ಕೆ ಚುನಾವಣೆ

ಬೆಳಗಾವಿ: ಬೆಳಗಾವಿ ಮಹಾನಗರ ಪಾಲಿಕೆಯ 22ನೇ ಅವಧಿಗೆ ಮಹಾಪೌರ ಹಾಗೂ ಉಪಮಹಾಪೌರರ ಚುನಾವಣೆಯು ಫೆ. 15 ರಂದು ಮಧ್ಯಾಹ್ನ 1 ಗಂಟೆಗೆ ಮಹಾನಗರ ಪಾಲಿಕೆ ಸಭಾಗೃಹದಲ್ಲಿ ನಡೆಯಲಿದೆ ಎಂದು ಪ್ರಾದೇಶಿಕ ಆಯುಕ್ತ ಮತ್ತು ಬೆಳಗಾವಿ ಮಹಾನಗರ ಪಾಲಿಕೆ ಚುನಾವಣೆ ಅಧ್ಯಕ್ಷಾಧಿಕಾರಿಗಳಾದ ಎಸ್. ಬಿ. ಶೆಟ್ಟೆಣ್ಣವರ ತಿಳಿಸಿದ್ದಾರೆ.

**ಚುನಾವಣೆ ವೇಳಾಪಟ್ಟಿ:** ಫೆ.15 ರಂದು ಬೆಳಗ್ಗೆ 9 ರಿಂದ 11 ಗಂಟೆಯವರೆಗೆ ಮಹಾಪೌರರ ಹಾಗೂ ಉಪಮಹಾಪೌರರ ಸ್ಥಾನಗಳಿಗೆ ನಾಮಪತ್ರಗಳನ್ನು ಸ್ವೀಕರಿಸುವ ಪ್ರಕ್ರಿಯೆ ನಡೆಯಲಿದೆ. ಮಧ್ಯಾಹ್ನ 1 ಗಂಟೆಗೆ ಸಭೆ ಪ್ರಾರಂಭವಾಗಲಿದ್ದು, 1 ಗಂಟೆಗೆಯ ನಂತರ ಮಹಾಪೌರರ ಹಾಗೂ ಉಪಮಹಾಪೌರರ ಹಾಜರಾತಿ ತಗೆದುಕೊಳ್ಳಲಾಗುವುದು. ನಾಮಪತ್ರಗಳ ಮತ್ತು ಕೋರಂ ಪರಿಶೀಲನೆ, ಕ್ರಮಬದ್ಧ ನಾಮಪತ್ರಗಳ ಘೋಷಣೆ, ಉಮೇದುವಾರಿಕೆಯನ್ನು ಹಿಂತೆಗೆದುಕೊಳ್ಳುವುದು, ಉಮೇದುವಾರರ ಪಟ್ಟಿ ಘೋಷಣೆ, ಅವಿರೋಧ ಆಯ್ಕೆಯಾದಲ್ಲಿ ಪಲಿತಾಂಶ ಘೋಷಣೆ, ಚುನಾವಣೆ ಅಗತ್ಯವಿದ್ದಲ್ಲಿ ಕೈ ಎತ್ತುವ ಮೂಲಕ ಮತದಾನ, ಮತಗಳ ಎಣಿಕೆ ಹಾಗೂ ಫಲಿತಾಂಶ ಘೋಷಣೆ ನಡೆಯಲಿದೆ ಎಂದು ಪ್ರಾದೇಶಿಕ ಆಯುಕ್ತ ಮತ್ತು ಬೆಳಗಾವಿ ಮಹಾನಗರ ಪಾಲಿಕೆ ಚುನಾವಣೆ ಅಧ್ಯಕ್ಷಾಧಿಕಾರಿಗಳಾದ ಎಸ್. ಬಿ. ಶೆಟ್ಟೆಣ್ಣವರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತಂದೆ ಬುದ್ಧಿವಾದ ಹೇಳಿದಕ್ಕೆ ಆತ್ಮಹತ್ಯೆ ಮಾಡಿಕೊಂಡ ಫುಟ್‌ಬಾಲ್ ಆಟಗಾರ

ಧಾರವಾಡ: ತಂದೆ ಬುದ್ಧಿವಾದ ಹೇಳಿದಕ್ಕೆ ಮನನೊಂದ ಮಗ ಆತ್ಮಹತ್ಯೆಗೆ ಶರಣಾದ ಘಟನೆ ಧಾರವಾಡ ನಗರದ ಸಾದನಕೇರಿ ಬಡಾವಣೆಯಲ್ಲಿ ನಡೆದಿದೆ.

ಧಾರವಾಡ ನಗರದ ಕೆಲಗೇರಿ ಕೆರೆಗೆ ಹಾರಿ ಫುಟ್ಬಾಲ್ ಆಟಗಾರ ಚೇತನ್ ಕೊಂಡಿಹಾಳ (23) ಆತ್ಮಹತ್ಯೆ ಮಾಡಿಕೊಂಡಿದ್ದಾನೆ. 'ಕ್ರೀಡೆಗೆ ಆಸಕ್ತಿ ಕಡಿಮೆ ಕೊಟ್ಟು, ಓದಿನ ಕಡೆ ಗಮನಹರಿಸು' ಎಂದು ತಂದೆ ಬುದ್ದಿವಾದ ಹೇಳಿದಕ್ಕೆ ಮನನೊಂದು ಯುವಕ ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಶರಣಪ್ಪ ಕೊಂಡಿಹಾಳ ಎಂಬುವರ ಮೃತ ಪುತ್ರ ಚೇತನ್ ಮೃತಪಟ್ಟಿದ್ದಾನೆ.



ಚೇತನ್ಗೆ ಕ್ರೀಡೆಯಲ್ಲಿ ಹೆಚ್ಚು ಆಸಕ್ತಿ ಇತ್ತು. ಮಗನ ಆಸಕ್ತಿಯಿಂದಾಗಿ ಓದಿಗೆ ಸಮಸ್ಯೆ ಆಗಬಾರದೆಂದುಕೊಂಡ ಶರಣಪ್ಪ ಕೊಂಡಿಹಾಳ ಅವರು ತಮ್ಮ ಮಗನಿಗೆ ಬುದ್ಧಿ ಹೇಳಿದ್ದಾರೆ. 'ಕ್ರೀಡೆಗೆ ಆಸಕ್ತಿ ಕಡಿಮೆ ಕೊಟ್ಟು, ಓದಿನ ಕಡೆ ಗಮನಹರಿಸು' ಎಂದು ಹೇಳಿದ್ದಾರೆ. ಇಷ್ಟಕ್ಕೆ ಮನನೊಂದ ಚೇತನ್ ಮನೆಯಿಂದ ನಾಪತ್ತೆಯಾಗಿದ್ದ. ಈಗ ಎರಡು ದಿನಗಳ ನಂತರ ಕೆಲಗೇರಿ ಕೆರೆಯಲ್ಲಿ ಚೇತನ್ ಶವ ಪತ್ತೆಯಾಗಿದೆ. ಉಪನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಮಹಿಳೆ ನಾಪತ್ತೆ

ಬೆಳಗಾವಿ: ಬೆಳಗಾವಿಯ ರಾಯಬಾಗ ತಾಲೂಕಿನ ಹಾರೂಗೇರಿ ಪಾಲಭಾವಿ ಗ್ರಾಮದ ರೂಪಾ ತಂದೆ ಪರಶುರಾಮ ಹೊಳೆಪ್ಪಗೋಳ (21) ಎಂಬವಳು ಬೆಳಗ್ಗೆ 6 ಗಂಟೆಗೆ ಶೌಚಕ್ಕೆ ಹೋಗಿ ಬರುತ್ತೇನೆ ಅಂತಾ ಹೇಳಿ ಪಾಲಭಾವಿ ಗ್ರಾಮದ ಮಹಿಳೆ ಮನೆಯಿಂದ ಹೋದವಳು ವಾಪಸ ಮನೆಗೆ ಬಾರದೆ ಎಲ್ಲಿಯೋ ಹೋಗಿ ಕಾಣೆಯಾಗಿದ ಮಗಳನ್ನು ಹುಡುಕಿ ಕೊಡಲು ತಂದೆ ಪರಸಪ್ಪ ಶಿವಪ್ಪ ಹೊಳೆಪ್ಪಗೋಳ (44) ಇವರು ಫೆ. 5 ರಂದು ಹಾರೂಗೇರಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

**ಕಾಣೆಯಾದ ಮಹಿಳೆಯ ವಿವರ:**



ವಯಸ್ಸು 21 ವರ್ಷ, ಉದ್ಯೋಗ ಮನೆಗೆಲಸ, ಎತ್ತರ 4 ಪೂಟ 5 ಇಂಚು, ಮೈಯಿಂದ ತೆಳಗೆ ಮೈಕಟ್ಟು, ಗೋದಿ ಮೈಬಣ್ಣ, ಕೋಲು ಮುಖ, ನೀಲಿ ಬಣ್ಣದ ಟಾಪ್ ಮತ್ತು ಬಿಳಿ ನೀಲಿ ಬಣ್ಣದ ಪ್ಯಾಂಟ್ ಧರಿಸಿಳುತ್ತಾಳೆ. ಕನ್ನಡ ಮಾತನಾಡಲು ಬರೆಯಲು ಬರುತ್ತದೆ. ಮಹಿಳೆ ಬಗ್ಗೆ ಮಾಹಿತಿ ದೊರೆತಲ್ಲಿ ರಾಯಬಾಗ ತಾಲೂಕಿನ ಹಾರೂಗೇರಿ ಠಾಣೆಗೆ ಸಂಪರ್ಕಿಸಬೇಕು ಎಂದು ಪ್ರಕಟನೆಯಲ್ಲಿ ತಿಳಿಸಿದ್ದಾರೆ.

## ಬೈಲಹೊಂಗಲ: ತಾಲೂಕಾ ದಂಡಾಧಿಕಾರಿಗಳ ವಿರುದ್ಧ ಅಹೋರಾತ್ರಿ ಧರಣಿ ಸತ್ಯಾಗ್ರಹ

### ಅಸಭ್ಯವಾಗಿ ವರ್ತಿಸುತ್ತಿರುವ ತಹಶೀಲ್ದಾರರನ್ನು ವರ್ಗಾವಣೆ ಮಾಡುವಂತೆ ದಲಿತ ಪರ ಸಂಘಟನೆಗಳ ಪಟ್ಟು

ಬೈಲಹೊಂಗಲ: ಸಾರ್ವಜನಿಕರ ಜೊತೆ ಅಸಭ್ಯವಾಗಿ ವರ್ತಿಸುತ್ತಿರುವ ತಹಶೀಲ್ದಾರ ಸಚ್ಚಿದಾನಂದ ಕುಚನೂರ ಅವರನ್ನು ವರ್ಗಾವಣೆ ಮಾಡುವಂತೆ ಆಗ್ರಹಿಸಿ ವಿವಿಧ ದಲಿತ ಪರ ಸಂಘಟನೆಗಳು, ಕನ್ನಡಪರ ಸಂಘಟನೆಗಳಿಂದ ತಹಶೀಲ್ದಾರ ಕಚೇರಿಯ ಮುಂಭಾಗ ಅಹೋರಾತ್ರಿ ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳಲಾಯಿತು.

ಇದಕ್ಕೂ ಮೊದಲು ಸಂಗೊಳ್ಳಿ ರಾಯಣ್ಣನ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಮೆರವಣಿಗೆ ಮೂಲಕ ತಹಶೀಲ್ದಾರ ಕಚೇರಿಗೆ ತಲುಪಿ ಅಹೋರಾತ್ರಿ ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳಲಾಯಿತು. ತಹಶೀಲ್ದಾರ ವಿರುದ್ಧ ಘೋಷಣೆಗಳು ಕೂಗಿ ಅಕ್ರೋಶ ಹೊರ ಹಾಕಿದ ಪ್ರತಿಭಟನಾಕಾರರು ತಮಟೆ ಭಾರಿಸುವ ಮೂಲಕ ಪ್ರತಿಭಟನೆ ಮಾಡಿದರು. ಉಪವಿಭಾಗಾಧಿಕಾರಿ ಪ್ರಭಾವತಿ ಫಕ್ಕೀರಪೂರ ಸ್ಥಳಕ್ಕಾಗಮಿಸಿ ಪ್ರತಿಭಟನಾಕಾರರ ಮನವೊಲಿಸಲು ಪ್ರಯತ್ನಿಸಿದರು.



ಈ ವೇಳೆ ದಲಿತ ಸಂಘಟನೆಯ ರಾಜ್ಯಾಧ್ಯಕ್ಷ ಸುರೇಶ ರಾಯಪ್ಪಗೋಳ, ಸಾಮಾಜಿಕ ಕಾರ್ಯಕರ್ತ ರಫೀಕ ಬಡೇಘರ ಮಾತನಾಡಿ, ತಾಲೂಕಾ ದಂಡಾಧಿಕಾರಿಗಳು ಸಾರ್ವಜನಿಕರ ಜೊತೆ ಅಸಭ್ಯವಾಗಿ ವರ್ತಿಸುತ್ತಿದ್ದು, ವಿನಾಕಾರಣ ಸಾರ್ವಜನಿಕರಿಗೆ ತೊಂದರೆ ನೀಡುತ್ತಿದ್ದಾರೆ. ಎಲ್ಲರಿಗೂ ಏಕ ವಚನದಲ್ಲಿ ಮಾತನಾಡಿ ಅಧಿಕಾರದ ಧರ್ಪ ತೋರಿಸುತ್ತಿರುವುದು ಸರಿಯಾದ ಕ್ರಮವಲ್ಲ. ತಹಶೀಲ್ದಾರ ಕಚೇರಿಯಲ್ಲಿ ಭ್ರಷ್ಟಾಚಾರ ಮಿತಿ ಮೀರಿದ್ದು, ಇದಕ್ಕೆ ತಹಶೀಲ್ದಾರರೇ ಸಹಕಾರ ನೀಡುತ್ತಿದ್ದಾರೆ. ಸಾರ್ವಜನಿಕ ಸಮಸ್ಯೆಗಳನ್ನು ಹೇಳಿಕೊಂಡರೆ ಉಡಾಫೆ ಉತ್ತರ ನೀಡುತ್ತಿದ್ದಾರೆಂದು ಆರೋಪಿಸಿದ ಅವರು ಕೂಡಲೇ ತಹಶೀಲ್ದಾರರ ಮೇಲೆ ಕ್ರಮ ಜರುಗಿಸಿ ವರ್ಗಾವಣೆ ಮಾಡಬೇಕು. ಇಲ್ಲದಿದ್ದರೆ ಉಗ್ರ ಪ್ರತಿಭಟನೆ ಮಾಡಲಾಗುವುದು ಎಂದು ಎಚ್ಚರಿಸಿದರು.

ಮುಖಂಡರಾದ ರುದ್ರಪ್ಪ ಮುಂದಿನಮನಿ, ರುದ್ರಪ್ಪ ನಿಂಗಣ್ಣವರ, ಸಂಜೀವ ಮುರಗೋಡ ಮಾತನಾಡಿ, ತಹಶೀಲ್ದಾರ ಕಚೇರಿಯಲ್ಲಿ ಅಸ್ಪೃಶ್ಯತೆ ತಾಂಡವಾಡುತ್ತಿದೆ. ಪರಿಶಿಷ್ಟ ಜಾತಿ ಮತ್ತು ಪಂಗಡದ ಜನರನ್ನು ತಮ್ಮ ಕಚೇರಿಯಲ್ಲಿ ನಿಷೇಧಿಸಿದ್ದು ಯಾವ ಕಾರಣಕ್ಕೆಂದು ಪ್ರಶ್ನಿಸಿದರು. ಎಸ್‌ಸಿ, ಎಸ್‌ಟಿ ಸಮಾಜದ ಕುಂದು ಕೊರತೆ ಸಭೆಯನ್ನು ಪ್ರತಿ ಮೂರು ತಿಂಗಳಿಗೊಮ್ಮ ಕರೆಯಬೇಕೆಂದು ಸರಕಾರದ ಆದೇಶವಿದ್ದು ಆದರೆ ಬೈಲಹೊಂಗಲದ ತಹಶೀಲ್ದಾರರು ಐದು ತಿಂಗಳಾದರೂ ಸಭೆ ಕರೆದಿಲ್ಲ. ತಹಶೀಲ್ದಾರ ಕಚೇರಿಯ ಅಧಿಕಾರಿ, ಸಿಬ್ಬಂದಿಗಳು ಸರಿಯಾಗಿ ಸಾರ್ವಜನಿಕರಿಗೆ ಸ್ಪಂದನೆ ನೀಡದೆ, ಕೆಲಸ ಮಾಡಿಕೊಡಲು ಅಲೆದಾಡಿಸುತ್ತಿದ್ದಾರೆ. ಈ ಕುರಿತು ತಹಶೀಲ್ದಾರರಿಗೆ ಮೌಖಿಕವಾಗಿ ಹಲವಾರು ಬಾರಿ ತಿಳಿಸಿದರೂ ಕೂಡಾ ಯಾವುದೇ ಕ್ರಮ ತೆಗೆದುಕೊಂಡಿಲ್ಲ. ಲಂಚ ಕೊಟ್ಟರೆ ಮಾತ್ರ ಕೆಲಸ ಮಾಡಿ ಕೊಡಲಾಗುತ್ತೆ, ದುಡ್ಡ ಕೊಡದಿದ್ದರೆ ಅರ್ಜಿಗಳೇ ಮಾಯವಾಗುತ್ತೇವೆ ಎಂದು ಗಂಭೀರ ಆರೋಪ ಮಾಡಿದರು. ಅಧಿಕಾರಿಗಳು, ಸಿಬ್ಬಂದಿಗಳು ಸಮಯಕ್ಕೆ ಸರಿಯಾಗಿ ಕಾರ್ಯನಿರ್ವಹಿಸಿದೆ ಬೇಜಬ್ದಾರಿತನ ತೋರುತ್ತಿದ್ದಾರೆ. ಕೂಡಲೇ ತಹಶೀಲ್ದಾರ ಕಚೇರಿಯ ಎಲ್ಲ ಲೋಪದೋಷಗಳನ್ನು ಸರಿಪಡಿಸಬೇಕೆಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ಶಿವಯೋಗಿ ಹಲ್ಲೇಣ್ಣವರ, ನಾಗಪ್ಪ ಬೈಲಪ್ಪಗೋಳ, ಚಂದ್ರಿಕಾ ಕಳಂಕರ, ನಾಗಪ್ಪ ಭರಮಣ್ಣವರ, ಸುರೇಶ ಮಲಕಿನಕೊಪ್ಪ, ಮನೋಜ ಕೇಳಗೇರಿ, ರಾಯಪ್ಪ ಕೆಂಚಪ್ಪನವರ, ಶ್ರೀನಿವಾಸ ಭರಮಣ್ಣವರ, ಫಕ್ಕೀರಪ್ಪ ಹೊಸಮನಿ, ಪ್ರಭು ಭಜಂತ್ರಿ, ಅನೀಲ ಬೋಳಣ್ಣವರ, ಆನಂದ ಯರಗಟ್ಟಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka. Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089